

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 237 | ₹ ಬೆಲೆ: 4 | Sunday, 12, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಕೋಲಾರ: ಕುಡಿಯುವ ನೀರು ಒದಗಿಸುವ ಯರಗೋಳ್ ಅಣೆಕಟ್ಟು ಉದ್ಘಾಟಿಸಿದ ಸಿಎಂ ಸಿದ್ದರಾಮಯ್ಯ



ಕೋಲಾರ: ಕೋಲಾರ ನಗರ, ಬಂಗಾರಪೇಟೆ ಹಾಗೂ ಮಾಲೂರು ಪಟ್ಟಣಗಳ ಜನತೆಗೆ ಕುಡಿಯುವ ನೀರು ಒದಗಿಸುವ ಯರಗೋಳ್ ಅಣೆಕಟ್ಟನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶನಿವಾರ ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಕೋಲಾರ ಜಿಲ್ಲೆಯ ಒಟ್ಟು 2,197 ಕೋಟಿ ರೂ. ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದರು.

ಸಚಿವರಾದ ಡಾ. ಹೆಚ್.ಸಿ.ಮಹದೇವಪ್ಪ, ಕೆ.ಹೆಚ್.ಮುನಿಯಪ್ಪ, ಸಂಸದರಾದ ಮುನಿಸ್ವಾಮಿ, ಕೋಲಾರ – ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ವೈ.ನಂಜೇಗೌಡ, ಎಸ್. ಎನ್. ನಾರಾಯಣಸ್ವಾಮಿ ಉಪಸ್ಥಿತರಿದ್ದರು.

ಮಾರ್ಕಂಡೇಯ ಜಲಾಶಯದಿಂದ ತಮಿಳುನಾಡಿಗೆ ವ್ಯರ್ಥವಾಗಿ ಹೋಗುತ್ತಿದ್ದ ನೀರನ್ನು ತಡೆಗಟ್ಟಲು ಯರಗೋಳ್ ಗ್ರಾಮದ ಬಳಿ ಈ ಅಣೆಕಟ್ಟು ನಿರ್ಮಿಸಲಾಗಿದೆ. ಕುಡಿಯುವ ನೀರಿಗೆ ಮೀಸಲಾದ ಜಿಲ್ಲೆಯ ಏಕೈಕ ಯೋಜನೆ ಇದಾಗಿದೆ.

2006ರಲ್ಲಿ ಜೆಡಿಎಸ್– ಬಿಜೆಪಿ ಸರ್ಕಾರದಲ್ಲಿ ಯೋಜನೆಗೆ ಅನುಮೋದನೆ ಸಿಕ್ಕಿತ್ತು. ಆದರೆ, ಸಿದ್ದರಾಮಯ್ಯ ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿದ್ದಾಗ 2013ರ ಸೆಪ್ಟೆಂಬರ್ ನಲ್ಲಿ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡಲಾಗಿತ್ತು. ನಂತರ ಅಣೆಕಟ್ಟು ನಿರ್ಮಾಣ ಕಾಮಗಾರಿ ಆರಂಭವಾಗಿ 2020ರಲ್ಲಿ ಪೂರ್ಣಗೊಂಡಿತ್ತು.

## ಡಿಸೆಂಬರ್ ಒಳಗೆ ಇ–ಆಫೀಸ್ ತಂತ್ರಾಂಶ ಅಳವಡಿಕೆಗೆ ಅಧಿಕಾರಿಗಳಿಗೆ ಸಚಿವ ಕೃಷ್ಣಬೈರೇಗೌಡ ಗಡುವು

ಬೆಂಗಳೂರು: ಬೆಂಗಳೂರು: ಡಿಸೆಂಬರ್ ಒಳಗೆ ಕಂದಾಯ ಇಲಾಖೆಗೆ ಸಂಬಂಧಿಸಿದ ಎಲ್ಲ ಕಡತಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವಂತೆ ಅಧಿಕಾರಿಗಳಿಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಸೂಚನೆ ನೀಡಿದ್ದಾರೆ.

ಕಂದಾಯ ಇಲಾಖೆಯ ನಾಲ್ಕೂ ವಿಭಾಗದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಸಚಿವರು, ಡಿಸೆಂಬರ್ ಒಳಗೆ ಕಂದಾಯ ಇಲಾಖೆಗ ಸಂಬಂಧಿಸಿದ ಎಲ್ಲಾ ಕಡತಗಳನ್ನು ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡಬೇಕು. ಈ ಪ್ರಕ್ರಿಯೆಗೆ ಸಹಾಯ ಮಾಡಲು ಇಲಾಖೆಯು ಎಲ್ಲಾ ತಾಲೂಕುಗಳಲ್ಲಿ ಇ–ಕಚೇರಿಗಳನ್ನು ಪ್ರಾರಂಭಿಸಲಾಗಿದೆ. ಇದರ ಮೂಲಕ ಪ್ರತಿ ಹಂತದಲ್ಲೂ ಬಾಕಿ ಇರುವ ಕಡತಗಳನ್ನು ಪರಿಶೀಲಿಸಬಹುದು. ಸಮಯಕ್ಕೆ ಸರಿಯಾಗಿ ಕಡತಗಳನ್ನು ತೆರವುಗೊಳಿಸದಿದ್ದರೆ ಅಧಿಕಾರಿಗಳಿಗೆ ನೋಟಿಸ್ ನ್ನೂ ಕೂಡ ನೀಡಬಹುದು. ಪಾರದರ್ಶಕತೆ ಕಾಪಾಡುವ ಸಲುವಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಡಿಸೆಂಬರ್ ಒಳಗೆ ಇ–ಆಫೀಸ್ ತಂತ್ರಾಂಶ ಅಳವಡಿಸಿಕೊಳ್ಳಬೇಕೆಂದು ಸೂಚಿಸಿದರು.

ನಿಯಮದ ಪ್ರಕಾರ, ತಹಶೀಲ್ದಾರ್‌ಗಳ ಮುಂದೆ ಕಂದಾಯ ಇಲಾಖೆಗೆ



ಸಂಬಂಧಿಸಿದ ಪ್ರಕರಣಗಳನ್ನು 90 ದಿನಗಳಲ್ಲಿ ತೆರವುಗೊಳಿಸಬೇಕು. ಆದರೆ, ಐದು ವರ್ಷಗಳಿಂದ ಕಹಲವು ಪ್ರಕರಣಗಳು ಬಾಕಿ ಉಳಿದಿವೆ. ತಹಶೀಲ್ದಾರ್, ಎಸಿ ಸೇರಿದಂತೆ ಕಂದಾಯ ನ್ಯಾಯಾಲಯಗಳಲ್ಲಿ ಸಾವಿರಾರು ಪ್ರಕರಣಗಳು ಬಾಕಿ ಇವೆ. ಜನವರಿಯೊಳಗೆ ಪ್ರಕರಣಗಳನ್ನು ಇತ್ಯರ್ಥಪಡಿಸಬೇಕು. ಇಲ್ಲದಿದ್ದರೆ, ನಿಯಮ ಉಲ್ಲಂಘಿಸಿದವರಿಗೆ ನೋಟಿಸ್ ಜಾರಿ ಮಾಡಲಾಗುವುದು ಎಂದು ಹೇಳಿದರು.

"ನಮ್ಮ ಸರ್ಕಾರ ಅಧಿಕಾರಕ್ಕೇರಿದ ಸಂದರ್ಭದಲ್ಲಿ ಎಸಿ (ಉಪ ವಿಭಾಗಾಧಿಕಾರಿ) ನ್ಯಾಯಾಲಯದಲ್ಲೇ ಒಟ್ಟು 59,339 ಪ್ರಕರಣಗಳು ಬಾಕಿ ಇದ್ದವು. ಆದರೆ, ಕಳೆದ ನಾಲ್ಕು ತಿಂಗಳ ಅವಧಿಯಲ್ಲೇ ಈ ಪ್ರಕರಣಗಳ ಸಂಖ್ಯೆಯನ್ನು 30 ಸಾವಿರಕ್ಕೆ ಇಳಿಸಲಾಗಿದೆ. ಮುಂದಿನ ಮೂರು ತಿಂಗಳ ಅವಧಿಯಲ್ಲಿ ಈ ಎಲ್ಲಾ ಪ್ರಕರಣಗಳನ್ನೂ ಇತ್ಯರ್ಥಗೊಳಿಸಿ ಶೇ.100 ರಷ್ಟು ಸಾಧನೆ ಮಾಡಬೇಕಿದೆ ಎಂದು ಕಾಲಮಿತಿ" ನೀಡಿದರು.

ನಮೂನೆ 50, 53, 57ಕ್ಕೆ ಸಂಬಂಧಿಸಿದಂತೆ ಅಕ್ರಮ–ಸಕ್ರಮಗೊಳಿಸಿ ಸಾಗುವಳಿ ಚೀಟಿ ನೀಡಲು ಕೋರಿ ಸಾವಿರಾರು ಜನ ಅರ್ಜಿ ಸಲ್ಲಿಸಿದ್ದಾರೆ. ಹೀಗಾಗಿ ಮುಂದಿನ 15 ದಿನಗಳೊಳಗಾಗಿ 100 ತಾಲೂಕುಗಳಲ್ಲಿ ಬಗರ್ ಹುಕುಂ ಸಮಿತಿ ರಚನೆ ಮಾಡಲಾಗುವುದು ಎಂದೂ ಸಭೆಯಲ್ಲಿ ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಕೆಲವೆಡೆ ಒಂದ್ ಆಧಾರ್ ಸಂಖ್ಯೆಯಲ್ಲಿ 25 ಅರ್ಜಿಗಳನ್ನು ಸಲ್ಲಿಸಲಾಗಿದೆ. ಇಂತಹ ಅರ್ಜಿಗಳನ್ನು ರದ್ದುಪಡಿಸಬೇಕು. ಈ ನಿಟ್ಟಿನಲ್ಲಿನ ಎಲ್ಲಾ ಪ್ರಕರಗಳನ್ನು 6 ತಿಂಗಳಲ್ಲಿ ವಿಲೇವಾರಿ ಮಾಡಬೇಕು. ಅರ್ಹರು ಮಾತ್ರ ದಾಖಲೆಗಳನ್ನು ಪಡೆಯುವಂತೆ ಖಚಿತಪಡಿಸಿಕೊಳ್ಳಲು ತಂತ್ರಜ್ಞಾನವನ್ನು ಬಳಕೆ ಮಾಡಲಾಗುತ್ತಿದೆ ಎಂದರು.

ಊರಿನಿಂದ ಹೊರಗಡೆ ಇರುವಂತ ತಾಂಡಾ – ಗೊಲ್ಲರಹಟ್ಟಿ ಸೇರಿದಂತೆ ಸುಮಾರು 3292 ವಸತಿ ಪ್ರದೇಶಗಳಿವೆ. ಆದರೆ, ಈ ಯಾವ ಗ್ರಾಮಗಳೂ ಕಂದಾಯ ಇಲಾಖೆಗೆ ಸೇರದ ಕಾರಣ ಕಂದಾಯೇತರ ಜನವಸತಿ ನಿವಾಸಿಗಳು ಅಭಿವೃದ್ಧಿ ಯೋಜನೆಗಳಿಂದ ವಂಚಿತರಾಗುತ್ತಿದ್ದಾರೆ.

ಇದೇ ಕಾರಣಕ್ಕೆ ಕರ್ನಾಟಕ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ ತಂದು ತಾಂಡಾ–ಗೊಲ್ಲರಹಟ್ಟಿ ಸೇರಿದಂತೆ ಹಲವು ಪ್ರದೇಶಗಳನ್ನು ಕಂದಾಯ ಗ್ರಾಮ ಎಂದು ಘೋಷಿಸಲು ಅನುವುಮಾಡಿಕೊಡಲಾಗಿತ್ತು,

"ಸಾರ್ವಜನಿಕರ 30 ವರ್ಷಗಳ ಬೇಡಿಕೆಗೆ ಅನುಗುಣವಾಗಿ 2013ರ ಕಾಂಗ್ರೆಸ್ ಸರ್ಕಾರ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹತ್ವದ ನಿರ್ಧಾರ ತೆಗದುಕೊಂಡಿದ್ದರು.

ಆದರೂ, ಕಳೆದ ಐದು ವರ್ಷಗಳ ಅವಧಿಯಲ್ಲಿ 1300 ಕಡೆಗಳಲ್ಲಿ ಮಾತ್ರ ಕಂದಾಯ ಗ್ರಾಮ ಘೋಷಿಸಲಾಗಿದೆ. ಉಳಿದ ತಾಂಡಾ – ಗೊಲ್ಲರಹಟ್ಟಿಗಳು ಹಲವು ಯೋಜನೆಗಳಿಂದ ವಂಚಿತವಾಗುತ್ತಿವೆ. ಹೀಗಾಗಿ ಜನವರಿ ಒಳಗಡೆ 1800 ಕಡೆ ಕಂದಾಯ ಗ್ರಾಮವಾಗಿ ಘೋಷಿಸಿ ಹಕ್ಕು ಪತ್ರ ನೀಡಿ" ಎಂದು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.



## ಜಯನಗರ ಬೀದಿಬದಿ ಅಂಗಡಿಗಳ ತೆರವು: ಬಿಬಿಎಂಪಿಗೆ ಬೆನ್ನಿಗೆ ನಿಂತ ಡಿಸಿಎಂ ಡಿಕೆ.ಶಿವಕುಮಾರ್

ಬೆಂಗಳೂರು: ಜಯನಗರದ ಬಿಡಿಎ ಕಾಂಪ್ಲೆಕ್ಸ್ ಬಳಿ ಬೀದಿಬದಿ ವ್ಯಾಪಾರಿಗಳ ತೆರವು ಮಾಡಿದ್ದ ಬಿಬಿಎಂಪಿಗೆ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಬೆಂಬಲ ಸೂಚಿಸಿದ್ದಾರೆ. ಬಿಬಿಎಂಪಿ ಕ್ರಮದ ಕುರಿತು ಪ್ರತಿಕ್ರಿಯೆ ನೀಡಿರುವ ಡಿಕೆ.ಶಿವಕುಮಾರ್ ಅವರು, ಬೀದಿ ವ್ಯಾಪಾರಿಗಳು ಪಾದಚಾರಿ ಮಾರ್ಗಗಳಲ್ಲಿ ತಮ್ಮ ಜೀವನೋಪಾಯವನ್ನು ನಡೆಸಬಹುದು. ಆದರೆ, ಬಿಬಿಎಂಪಿ ರಸ್ತೆಗಳಲ್ಲಿ ಸಂಚಾರಕ್ಕೆ ಅಡ್ಡಿಯುಂಟು ಮಾಡುತ್ತಿದ್ದ ಅಂಗಡಿಗಳನ್ನಷ್ಟೇ ತೆರವುಗೊಳಿಸಿದ್ದಾರೆಂದು ಹೇಳಿದರು. ಜಯನಗರ 4ನೇ ಬ್ಲಾಕ್‌ನಲ್ಲಿ ಬೀದಿಬದಿ ವ್ಯಾಪಾರಿಗಳು ರಸ್ತೆಗಳನ್ನು ಯಾವ ರೀತಿಯಲ್ಲಿ ಆಕ್ರಮಿಸಿಕೊಂಡಿದ್ದಾರೆಂಬುದ ವಿಡಿಯೋವನ್ನು ಬಿಬಿಎಂಪಿ ಆಯುಕ್ತರು ನನಗೆ ತೋರಿಸಿದ್ದಾರೆ. ಹೀಗಾಗಿಯೇ ಅಂಗಡಿಗಳ ತೆರವಿಗೆ ಒಪ್ಪಿಗೆ ನೀಡಲಾಗಿತ್ತು. ಪರಿಹಾರ ಕಂಡುಕೊಳ್ಳಲು ಬೀದಿ ಬದಿ ವ್ಯಾಪಾರಿಗಳೊಂದಿಗೆ ಸರ್ಕಾರ ಸಭೆ ಕರೆಯಲಿದೆ ಎಂದು ತಿಳಿಸಿದರು.

## ಮತ್ತೋರ್ವ ಬಿಜೆಪಿ ಸಂಸದನಿಂದ ರಾಜಕೀಯ ನಿವೃತ್ತಿ ಘೋಷಣೆ

ಮೈಸೂರು: ಮಾರ್ಚ್ 17 ಕ್ಕೆ ನಾನು ರಾಜಕೀಯದಿಂದ ನಿವೃತ್ತಿ ಘೋಷಿಸುತ್ತೇನೆ. ಮಾರ್ಚ್ 17 ರ ನಂತರ ನಾನು ಯಾವುದೇ ಪಕ್ಷದ ಪರವಾಗಿ ಪ್ರಚಾರ ಮಾಡುವುದಿಲ್ಲ. ಯಾವ ಪಕ್ಷಕ್ಕೂ ಸಲಹೆ ಸೂಚನೆ ನೀಡುವುದಿಲ್ಲ ಎಂದು ಚಾಮರಾಜನಗರದ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಹೇಳಿದ್ದಾರೆ.

ಮೈಸೂರಿನಲ್ಲಿ ಮಾತನಾಡಿದ ವಿ.ಶ್ರೀನಿವಾಸ್ ಪ್ರಸಾದ್, ರಾಜಕೀಯದ ಎಲ್ಲಾ ಚಟುವಟಿಕೆಗಳಿಂದ ಸಂಪೂರ್ಣ ದೂರ ಉಳಿಯುತ್ತೇನೆ.

ಮಾರ್ಚ್ 17 ಕ್ಕೆ ಚುನಾವಣ ರಾಜಕೀಯಕ್ಕೆ ಬಂದು 50 ವರ್ಷ. ಅಂದೆ ಬೃಹತ್ ಕಾರ್ಯಕ್ರಮ ಮಾಡಿ ನಿವೃತ್ತಿ ಘೋಷಣೆ ಮಾಡುತ್ತೇವೆ ಎಂದು ಹೇಳಿದ್ದಾರೆ.

ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾಗಿ ನೇಮಕಗೊಂಡ ವಿಚಾರವಾಗಿ



ಮಾತಾಡಿದ ಅವರು, ವಿಜಯೇಂದ್ರ ಮುಂದೆ ಬೆಟ್ಟದಂತ ಸವಾಲಿದೆ. ಬಿಜೆಪಿ ಹೈಕಮಾಂಡ್ ಕೊನೆಗೆ ಗಜಪ್ರಸವ ಮಾಡಿದೆ. ವಿರೋಧ ಪಕ್ಷದ ನಾಯಕ ಸ್ಥಾನ ಆಯ್ಕೆ ಮಾಡಿ ಗಜೇಂದ್ರ ಮೋಕ್ಷ ಮಾಡಲಿ ಎಂದು ಹೇಳಿದ್ದಾರೆ.

ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಬಿರುಸಿನಲ್ಲಿ ಓಡುತ್ತಿದೆ. ಅದನ್ನೆಲ್ಲ ತಡೆಯುವ ಪಕ್ಷ ಸಂಘಟಿಸ ಬೇಕಿದೆ. ಇಲ್ಲಿ ಕುಟುಂಬ ರಾಜಕಾರಣ ಪ್ರಶ್ನೆ ಇಲ್ಲ.

ದೇವೆಗೌಡರು, ಸಿದ್ದರಾಮಯ್ಯ ಎಲ್ಲರೂ ಕುಟುಂಬ ರಾಜಕಾರಣ ಮಾಡಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಎಲ್ಲರು ರಾಜಕಾರಣ ಮಾಡುತ್ತಾರೆ.

ಆದರೆ ಎಲ್ಲರು ಒಳ್ಳೆಯ ರಾಜಕಾರಣ ಮಾಡಲಿ. ಲೋಕಸಭಾ ಚುನಾವಣೆಗೆ ಅನುಕೂಲವಾಗುತ್ತೆ ಎಂದು ಈಗಲೇ ಹೇಳಲು ಸಾಧ್ಯವಿಲ್ಲ ಎಂದು ವಿ.ಶ್ರೀನಿವಾಸ್ ಪ್ರಸಾದ್ ಹೇಳಿದ್ದಾರೆ.

## ಅಯೋಧ್ಯೆಯಲ್ಲಿ ದೀಪಾವಳಿ ಸಂಭ್ರಮ 24 ಲಕ್ಷ ದೀಪ ಬೆಳಗಿ ಗಿನ್ನಿಸ್ ದಾಖಲೆ

ಈ ದೀಪಾವಳಿ ಹಬ್ಬ ಆಯೋಧ್ಯೆಯಯಲ್ಲಿ ಶ್ರೀರಾಮನ ಗತವೈಭವವನ್ನು ಮರುಸೃಷ್ಟಿಸಿದೆ. ಈ ಬಾರಿ ಉತ್ತರ ಪ್ರದೇಶ ಸರ್ಕಾರ ಬರೋಬ್ಬರಿ 24 ಲಕ್ಷ ದೀಪ ಬೆಳಗಿಸಿ, ಮತ್ತೊಂದು ಗಿನ್ನಿಸ್ ದಾಖಲೆ ಬರೆದಿದೆ. ಆಯೋಧ್ಯೆಯ ಸರಯೂ ನದಿ ದಂಡೆ ಮೇಲೆ ಬರೋಬ್ಬರಿ 24 ಲಕ್ಷ ದೀಪ ಬೆಳಗಿಸಿ ದೀಪಾವಳಿ ಹಬ್ಬ ಆಚರಿಸಲಾಗುತ್ತಿದೆ. ಈಗಾಗಲೇ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕಾರ್ಯಕ್ರಮ ಉದ್ಘಾಟಿಸಿದ್ದಾರೆ. ಈ ಬಾರಿ ಉತ್ತರ ಪ್ರದೇಶ ಸರ್ಕಾರ ಬರೋಬ್ಬರಿ 24 ಲಕ್ಷ ದೀಪ ಬೆಳಗಿಸಿ, ಮತ್ತೊಂದು ಗಿನ್ನಿಸ್ ದಾಖಲೆ ಬರೆದಿದೆ. ಆಯೋಧ್ಯೆಯ ಸರಯೂ ನದಿ ದಂಡೆ ಮೇಲೆ ಬರೋಬ್ಬರಿ 24 ಲಕ್ಷ ದೀಪ ಬೆಳಗಿಸಿ ದೀಪಾವಳಿ ಹಬ್ಬ ಆಚರಿಸಲಾಗುತ್ತಿದೆ. ಈಗಾಗಲೇ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕಾರ್ಯಕ್ರಮ ಉದ್ಘಾಟಿಸಿದ್ದಾರೆ. ದೀಪಾವಳಿ ಹಬ್ಬದ ಪ್ರಯುಕ್ತ ಶನಿವಾರ ಬೆಳಗ್ಗೆ ಶೋಭಾಯಾತ್ರೆಗೆ ಚಾಲನೆ ನೀಡಲಾಗಿತ್ತು. ಅದ್ದೂರಿ ಶೋಭಾಯಾತ್ರೆ ಬಳಿಕ



3 ಗಂಟೆಯಿಂದ ದೀಪಾವಳಿ ಹಬ್ಬದ ಕಾರ್ಯಕ್ರಮಗಳು ಆರಂಭಗೊಂಡಿವೆ. ಸತತ 6ನೇ ವರ್ಷ ಆಯೋಧ್ಯೆಯಲ್ಲಿ ಯೋಗಿ ಆದಿತ್ಯನಾಥ್ ಸರ್ಕಾರ ಗಿನ್ನಿಸ್ ದಾಖಲೆ ಬರೆಯುತ್ತಿದೆ. ಲಕ್ಷ ಲಕ್ಷ ದೀಪೋತ್ಸವ ಸಂಭ್ರಮದ ಮೂಲಕ ದೀಪಾವಳಿ ಆಚರಿಸಿ ಜಗತ್ತಿಗೆ ಸಂದೇಶ ಸಾರಿದೆ. ಕಳೆದ ವರ್ಷ 15 ಲಕ್ಷ ದೀಪಗಳನ್ನು ಬೆಳಗಿಸಿ ದೀಪಾವಳಿ ಹಬ್ಬ ಆಚರಿಸಲಾಗಿತ್ತು. 20,000 ಸ್ವಯಂಸೇವಕರು ದೀಪ ಬೆಳಗಿಸಿದ್ದರು. ಈ ಬಾರಿ 24 ಲಕ್ಷ ದೀಪಗಳನ್ನು ಬೆಳಗಿಸಲಾಗುತ್ತಿದೆ. 25,000ಕ್ಕೂ ಹೆಚ್ಚು ಸ್ವಯಂಸೇವಕರು ದೀಪ ಬೆಳಗಿ ಗಿನ್ನಿಸ್ ದಾಖಲೆ ಬರೆಯಲಿದ್ದಾರೆ. 14 ವರ್ಷದ ವನವಾಸ ಮುಗಿಸಿ ಶ್ರೀರಾಮ ಚಂದ್ರ ಆಯೋಧ್ಯೆಗೆ ಆಗಮಿಸಿದಾಗ ಇಡೀ ಆಯೋಧ್ಯೆ ಹೇಗೆ ಅಲಂಕಾರಗೊಂಡಿತ್ತು. ಯಾವ ರೀತಿ ಶ್ರೀರಾಮ ಸ್ವಾಗತಕ್ಕೆ ಸಜ್ಜಾಗಿತ್ತು ಅನ್ನೋದು ಇಂದಿನ ದೀಪೋತ್ಸವದಲ್ಲಿ ಜಗತ್ತಿಗೆ ತಿಳಿಯಲಿದೆ ಎಂದು ಯೋಗಿ ಆದಿತ್ಯನಾಥ್ ಹೇಳಿದ್ದಾರೆ.

## ಕುಟುಂಬ ರಾಜಕಾರಣಕ್ಕೆ ಆದ್ಯತೆ ನೀಡಿದ ಬಿಜೆಪಿ: ಸಚಿವ ಸತೀಶ್ ಜಾರಕಿಹೊಳಿ ವ್ಯಂಗ್ಯ

ಬೆಳಗಾವಿ: ಬಿಜೆಪಿಯವರು ಕಾಂಗ್ರೆಸ್ ಪಕ್ಷದ ಕುಟುಂಬ ರಾಜಕಾರಣದ ಬಗ್ಗೆ ಟೀಕೆ ಮಾಡುತ್ತಿದ್ದರು, ಆದರೆ ಈಗ ಅವರೇ ಸ್ವತಃ ಕುಟುಂಬ ರಾಜಕೀಯಕ್ಕೆ ಆದ್ಯತೆ ನೀಡುತ್ತಿದ್ದಾರೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ವ್ಯಂಗ್ಯವಾಡಿದರು.

ನಗರದಲ್ಲಿ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಸಚಿವರು, ಬಿಜೆಪಿಯಲ್ಲಿ ಕುಟುಂಬ ರಾಜಕಾರಣ ಅದ್ಯತೆ ನೀಡಲಾಗುತ್ತಿದೆ ಎಂಬುವುದಕ್ಕೆ ತಾಜಾ ಉದಾಹರಣೆ ಎಂಬಂತೆ ಮಾಜಿ ಸಿಎಂ ಬಿ. ಎಸ್ . ಯಡಿಯೂರಪ್ಪನವರ ಪುತ್ರ ಬಿ.ವೈ.ವಿಜಯೇಂದ್ರ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ. ಇಂಥಹ ಕುಟುಂಬ ರಾಜಕಾರಣ ಬಿಜೆಪಿಯಲ್ಲಿಯೂ



ಇದೆ. ಕಾಂಗ್ರೆಸ್ ಬಗ್ಗೆ ಟೀಕಿಸುವ ನೈತಿಕತೆ ಬಿಜೆಪಿಯವರಿಲ್ಲ ಎಂದು ಹೇಳಿದರು.

ಸತೀಶ್ ಜಾರಕಿಹೊಳಿ ಒಂದು ದೊಡ್ಡ ಸಮುದಾಯದ ಪ್ರಮುಖ ನಾಯಕನಾಗಿರುವುದರಿಂದ ಅವರನ್ನು ಕೆಪಿಸಿಸಿ ಅಧ್ಯಕ್ಷರನ್ನಾಗಿಸಿ ತಾನು ಮುಖ್ಯಮಂತ್ರಿಯಾಗಬೇಕೆನ್ನುವ ಉದ್ದೇಶದಿಂದ ಶಿವಕುಮಾರ್ ಮತ್ತು ಡಿಕೆ ಸುರೇಶ್ ಲೋಕೋಪಯೋಗಿ ಸಚಿವನ ಮನೆಗೆ ಭೇಟಿ ನೀಡುತ್ತಿದ್ದಾರೆಯೇ ಅಂತ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವ್ ಸತೀಶ್ ಅವರು, ಹಾಗೇನೂ ಇಲ್ಲ, ಅಭಿವೃದ್ಧಿ ಕಾರ್ಯಗಳಿಗೆ ಸಂಬಂಧಿಸಿದಂತೆ ಚರ್ಚೆ ಮಾಡಲು ಶಿವಕುಮಾರ್ ತಮ್ಮ ಮನೆಗೆ ಬಹಳಷ್ಟು ಸಲ ಬಂದಿದ್ದಾರೆ.

ಡಿಕೆ ಸುರೇಶ್ ಸಹ ಇದೇ ವಿಚಾರಕ್ಕೆ ಒಂದೆರಡು ಸಲ ಬಂದಿದ್ದಾರೆ. ರಾಜ್ಯ ನಾಯಕರ ಮುಂದೆ ಸದ್ಯಕ್ಕೆ ಲೋಕ ಸಭಾ ಚುನಾವಣೆ ಬಿಟ್ಟರೆ ಬೇರೆ ಯಾವ ವಿಚಾರಗಳಿಲ್ಲ, ರಾಜ್ಯ ರಾಜಕಾರಣಕ್ಕೆ ಸಂಬಂಧಿಸಿದ ಅಂಶಗಳ ಬಗ್ಗೆ ಹೈ ಕಮಾಂಡ್ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಹೇಳಿದರು.

ವಾಲ್ಮೀಕಿ ಶ್ರೀಗಳ ಸತೀಶ್ ಜಾರಕಿಹೊಳಿ ಅವರಿಗೆ ಸಿಎಂ ಆಗುವ ಅರ್ಹತೆ ಇದೆ ಎಂಬ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ವಾಲ್ಮೀಕಿ ಶ್ರೀಗಳು ಸಾಕಷ್ಟು ಬಾರಿ ಸಮಾಜದ ಕಾರ್ಯಕ್ರಮಗಳಲ್ಲಿ ಹೇಳಿದ್ದಾರೆ.

ಸದ್ಯ ಲೋಕಸಭಾ ಚುನಾವಣೆಗಾಗಿ ತಯಾರಿ ನಡೆಯುತ್ತಿದ್ದು, ಲೋಕಸಭಾ ಚುನಾವಣೆ ಮುಗಿದ ಬಳಿಕ ಕೆಲ ರಾಜಕೀಯ ಬೆಳವಣಿಗೆಗಳು ನಡೆಯಲಿವೆ ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಸ್ಥಾನ ಅಂಜಲಿ ನಿಂಬಾಳ್ಕರ್ ಅವರಿಗೆ ಸಿಕ್ಕರೆ ಒಳ್ಳೆಯದು, ನಿಂಬಾಳ್ಕರ್ ಕಾರ್ಯಾಧ್ಯಕ್ಷೆ ಆಗಬೇಕೆಂಬ ಪ್ರಸ್ತಾವ ಇದೆ. ಆದರೆ ಈ ಬಗ್ಗೆ ಹೈಕಮಾಂಡ್ ನಿರ್ಧರಿಸಲಿದೆ ಎಂದು ತಿಳಿಸಿದರು.

## ಬೆಂಗಳೂರು: ಕನ್ನಡ–ತಮಿಳು ಹಾಡಿಗಾಗಿ ಸ್ನೇಹಿತರ ನಡುವೆ ನಡೆದ ಜಗಳ ಕೊಲೆಯಲ್ಲಿ ಅಂತ್ಯ

ಬೆಂಗಳೂರು: ಜಾತ್ರೆಯೊಂದರಲ್ಲಿ ಕನ್ನಡ, ತಮಿಳು ಹಾಡುಗಳನ್ನು ಹಾಕುವ ವಿಚಾರವಾಗಿ ಸ್ನೇಹಿತರ ನಡುವೆ ನಡೆದ ಜಗಳ ಕೊಲೆಯಲ್ಲಿ ಅಂತ್ಯವಾಗಿದೆ,



ಹಳೇ ಬಾಗಲೂರು ಲೇಔಟ್ ನಿವಾಸಿ ಪ್ರವೀಣ್ (26) ಮೃತ ಯುವಕನಾಗಿದ್ದಾನೆ.

ಹಳೇ ಬಾಗಲೂರು ಲೇಔಟ್ ನಿವಾಸಿಯಾಗಿದ್ದ ಪ್ರವೀಣ್ಲಿಂಗರಾಜಪುರ ಜಾತ್ರೆಯಲ್ಲಿ ತನ್ನ ಸ್ನೇಹಿತರಾದ ಸುಂದರ್, ಆರ್ಮುಗಂ ಮತ್ತು ಪ್ರಭು ಅವರೊಂದಿಗೆ ಭಾಗಿಯಾಗಿದ್ದ. ಈ ವೇಳೆ ಕನ್ನಡ ಮತ್ತು ತಮಿಳು ಹಾಡು ಹಾಕುವ ವಿಚಾರವಾಗಿ ಪ್ರವೀಣ್ ಸ್ನೇಹಿತರೊಂದಿಗೆ ಜಗಳ ಮಾಡಿದ್ದಾನೆ.

ಕೋಪದ ಭರದಲ್ಲಿ ಸ್ನೇಹಿತ ಪ್ರಭು ಪ್ರವೀಣ್ ಮೇಲೆ ಹೆಲ್ಮೆಟ್‌ನಿಂದ ಹಲ್ಲೆ ನಡೆಸಿದ್ದಾನೆ. ದಾಳಿಯಲ್ಲಿ ಪ್ರವೀಣ್ ಗಂಭೀರವಾಗಿ ಗಾಯಗೊಂಡಿದ್ದು, ಆಸ್ಪತ್ರೆಗೆ ಸಾಗಿಸುವ ಮಾರ್ಗದಲ್ಲಿ ಸಾವನ್ನಪ್ಪಿದ್ದಾನೆ.

ಬುಧವಾರ ನಸುಕಿನ 1.30ರ ಸುಮಾರಿಗೆ ಬಾಣಸವಾಡಿ ಬಳಿಯ ಲಿಂಗರಾಜಪುರ ಜಾತ್ರೆಯಲ್ಲಿ ಡಿಜೆಯಲ್ಲಿ ಯಾವ ಹಾಡು ಹಾಕಬೇಕೆಂದು ಪ್ರವೀಣ್ ಮತ್ತು ಆತನ ಸ್ನೇಹಿತನ ನಡುವೆ ಜಗಳವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕೋಪದಲ್ಲಿ ಪ್ರವೀಣ್ ತನ್ನ ಸ್ನೇಹಿತ ಪ್ರಭು ಮೇಲೆ ಹೆಲ್ಮೆಟ್ ಬಳಸಿ ಹಲ್ಲೆ ಮಾಡಿದ್ದ. ಬಳಿಕ ಪ್ರಭು ಅದೇ ಹೆಲ್ಮೆಟ್ ಬಳಸಿ ಮತ್ತೆ ಪ್ರವೀಣ್ ತಲೆಗೆ ಹೊಡೆದಿದ್ದಾನೆ. ತಲೆಗೆ ಪೆಟ್ಟಾಗಿದ್ದರಿಂದ ಪ್ರವೀಣ್ ಅವರನ್ನು ಕೂಡಲೇ ಆಸ್ಪತ್ರೆಗೆ ಸಾಗಿಸಲಾಯಿತಾದರೂ ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಆತ ಮೃತಪಟ್ಟಿದ್ದಾನೆ.

## ಮಧ್ಯಪ್ರದೇಶ ಚುನಾವಣೆ: ಬಿಜೆಪಿ ಪ್ರಣಾಳಿಕೆ ಬಿಡುಗಡೆ, ರೂ.450ಕ್ಕೆ ಎಲ್ ಪಿಜಿ ಸಿಲಿಂಡರ್ ಸೇರಿ ಹಲವು ಭರವಸೆ



ಭೋಪಾಲ್: ಮಧ್ಯಪ್ರದೇಶ ವಿಧಾನಸಭಾ ಚುನಾವಣೆಗೆ ಕೆಲವೇ ದಿನಗಳು ಬಾಕಿ ಇರುವಂತೆಯೇ, ಬಿಜೆಪಿ ಶನಿವಾರ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಪ್ರಧಾನ ಮಂತ್ರಿ ಉಜ್ವಲ ಯೋಜನೆ ಫಲಾನುಭವಿಗಳಿಗೆ ರೂ. 450ಕ್ಕೆ ಎಲ್ ಪಿ ಜಿ ಸಿಲಿಂಡರ್, ಗೋಧಿಗೆ 2,700 ರೂ ಹಾಗೂ ಭತ್ತಕ್ಕೆ ರೂ. 3,100 ಕನಿಷ್ಠ ಬೆಂಬಲ ಬೆಲೆ ಸೇರಿದಂತೆ ಹಲವು ಭರವಸೆಗಳನ್ನು ನೀಡಿದೆ.

'ಲಾಡ್ಲಿ ಬಹ್ನಾ' ಫಲಾನುಭವಿಗಳಿಗೆ ಮನೆ ನಿರ್ಮಾಣ, ಬಡ ಕುಟುಂಬದ ಹೆಣ್ಣು ಮಕ್ಕಳಿಗೆ ಸ್ನಾತಕೋತ್ತರ ಪದವಿವರೆಗೂ ಉಚಿತ ಶಿಕ್ಷಣ, ಬಡ ವಿದ್ಯಾರ್ಥಿಗಳಿಗೆ 12ನೇ ತರಗತಿ ವರೆಗೂ ಉಚಿತ ಶಿಕ್ಷಣ ಮತ್ತಿತರ 96 ಪುಟಗಳ ಪ್ರಣಾಳಿಕೆಯನ್ನು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಪಕ್ಷದ ರಾಜ್ಯಾಧ್ಯಕ್ಷ ವಿಡಿ ಶರ್ಮಾ, ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹ್ಹಾಣ್ ಬಿಡುಗಡೆ ಮಾಡಿದರು.

ಲಾಡ್ಲಿ ಬಹನಾ ಯೋಜನೆಯ ಫಲಾನುಭವಿಗಳಿಗೆ ಮನೆ ಮತ್ತು ಪ್ರತಿ ಕುಟುಂಬದ ಒಬ್ಬ ಸದಸ್ಯರಿಗೆ ಉದ್ಯೋಗ ಅಥವಾ ಸ್ವಯಂ ಉದ್ಯೋಗ ಒದಗಿಸಲಾಗುವುದು ಎಂದು ಭರವಸೆ ನೀಡಲಾಗಿದೆ. ರಾಜ್ಯದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೆ ಐಐಟಿ ಮತ್ತು ಏಮ್ಸ್ ರೀತಿಯ ಸಂಸ್ಥೆಗಳನ್ನು ಸ್ಥಾಪಿಸಲಾಗುವುದು, ಆರು ಹೊಸ ಹೆದ್ದಾರಿ ನಿರ್ಮಾಣ ಮಾಡಲಾಗುವುದು, ಮತ್ತು ಬುಡಕಟ್ಟು ಸಮುದಾಯಗಳ ಸಬಲೀಕರಣಕ್ಕಾಗಿ 3 ಲಕ್ಷ ಕೋಟಿ ರೂ. ಹಣ ಮೀಸಲಿಡಲಾಗುವುದು ಎಂದು ಬಿಜೆಪಿ ಹೇಳಿದೆ.

ಬಿಜೆಪಿಯು ತನ್ನ ಪ್ರಣಾಳಿಕೆಯನ್ನು ಸರ್ಕಾರದ ಮಾರ್ಗಸೂಚಿಯನ್ನಾಗಿ ಮಾಡುವ ಮೂಲಕ ಉತ್ಸುಕತೆಯಿಂದ ಜಾರಿಗೆ ತಂದ ಏಕೈಕ ರಾಜಕೀಯ ಪಕ್ಷವಾಗಿದೆ. ಬಿಜೆಪಿ ತನ್ನ ನಿಗಾ ವ್ಯವಸ್ಥೆಯ ಮೂಲಕ ಪ್ರಣಾಳಿಕೆ ಅನುಷ್ಠಾನದ ಮೇಲೆಯೂ ಕಣ್ಣಿಟ್ಟಿದೆ ಎಂದು ಜೆ.ಪಿ. ನಡ್ಡಾ ಹೇಳಿದರು.

## ತೆಲಂಗಾಣ ಚುನಾವಣೆ: ಕರ್ನಾಟಕ ಸಿಎಂ ಸಿದ್ದರಾಮಯ್ಯಗೆ ಕೆ ಚಂದ್ರಶೇಖರ್ ರಾವ್ ಟೀಕಿಸುವ ಹಕ್ಕಿಲ್ಲ; ಕೆ ಕವಿತಾ

ನಿಜಾಮಾಬಾದ್: ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೆಲಂಗಾಣ ಮುಖ್ಯಮಂತ್ರಿ ಕೆ ಚಂದ್ರಶೇಖರ್ ರಾವ್ ಅವರನ್ನು ಟೀಕಿಸುವ



ಯಾವುದೇ ಅರ್ಹತೆ ಹೊಂದಿಲ್ಲ. ಕಾಂಗ್ರೆಸ್ ಪಕ್ಷವು ತನ್ನ ರಾಜ್ಯದಲ್ಲಿ 'ವಿಫಲವಾಗುತ್ತಿದೆ' ಎಂದು ಬಿಆರ್‌ಎಸ್ ಎಂಎಲ್ಸಿ ಕೆ ಕವಿತಾ ಶುಕ್ರವಾರ ಆರೋಪಿಸಿದ್ದಾರೆ.

ರಾವ್ ಕುರಿತು ಸಿದ್ದರಾಮಯ್ಯ ಅವರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್‌ನ ಖಾತರಿಗಳು ಮತ್ತು ಯೋಜನೆಗಳಿಗಿಂತ ಭಿನ್ನವಾಗಿ, ಬಿಆರ್‌ಎಸ್ ಸರ್ಕಾರವು ತೆಲಂಗಾಣದ ಹಿಂದುಳಿದ ಸಮುದಾಯಕ್ಕೆ ಮಾತ್ರವಲ್ಲದೆ ಸಮಾಜದ ಪ್ರತಿಯೊಂದು ವರ್ಗದ ಅಭಿವೃದ್ಧಿಗೆ ನಿರಂತರವಾಗಿ ಕೊಡುಗೆ ನೀಡಿದೆ ಎಂದು ಅವರು ಹೇಳಿದರು.

ನವೆಂಬರ್ 30 ರಂದು ನಡೆಯಲಿರುವ ವಿಧಾನಸಭಾ ಚುನಾವಣೆಗೆ ತೆಲಂಗಾಣದಲ್ಲಿ ಪ್ರಚಾರದಲ್ಲಿ ಭಾಗಿಯಾಗಿದ್ದ ಸಿದ್ದರಾಮಯ್ಯ ಅವರು, ಪ್ರಧಾನಿ ನರೇಂದ್ರ ಮೋದಿ ಮತ್ತು ಚಂದ್ರಶೇಖರ್ ರಾವ್ ಅವರನ್ನು 'ಸುಳ್ಳುಗಾರರು' ಮತ್ತು 'ಭ್ರಷ್ಟರು' ಎಂದು ಟೀಕಿಸಿದರು.

'ನಮ್ಮ ಸಿಎಂ ಅನ್ನು ಟೀಕಿಸಬೇಡಿ ಮತ್ತು ನಮ್ಮ ನಾಯಕನನ್ನು ಟೀಕಿಸುವ ಹಕ್ಕು ನಿಮಗೆ ಇಲ್ಲ. ಏಕೆಂದರೆ, ನೀವು (ಕಾಂಗ್ರೆಸ್) BC ಗಳಿಗೆ ಏನನ್ನೂ ಮಾಡಿಲ್ಲ. ನೀವು ಕರ್ನಾಟಕದ ಜನರಿಗೂ ಏನನ್ನೂ ಮಾಡಿಲ್ಲ. ದುರದೃಷ್ಟವಶಾತ್, ನಿಮ್ಮ ರಾಜ್ಯವನ್ನು ನೀವು ವಿಫಲಗೊಳಿಸುತ್ತಿದ್ದೀರಿ. ಆದರೆ, ನಮ್ಮ ರಾಜ್ಯ ಇಂದು ನಂಬರ್ ಒನ್ ರಾಜ್ಯವಾಗುವಂತೆ ನಾವು ಮಾಡಿದ್ದೇವೆ' ಎಂದು ಕವಿತಾ ವಾಗ್ದಾಳಿ ನಡೆಸಿದರು.

ದೂರದೃಷ್ಟಿ ಮತ್ತು ಕಾರ್ಯಗತಗೊಳಿಸುವಲ್ಲಿ ತೆಲಂಗಾಣವು ಇಂದು ಭಾರತದಲ್ಲಿ ಮೊದಲ ಸ್ಥಾನದಲ್ಲಿದ್ದು, ಏನಾದರೂ ಮಾತನಾಡುವ ಮುನ್ನ 'ಹೋಮ್‌ವರ್ಕ್' ಮಾಡಿ ಮತ್ತು ಅದರ ಬಗ್ಗೆ ಮಾತನಾಡಲು ಅವರು ಸಿದ್ದರಾಮಯ್ಯ ಅವರಿಗೆ ಸಲಹೆ ನೀಡಿದರು.

'ರಾಜ್ಯವಾಗಿ ಕರ್ನಾಟಕವು ಶ್ರೇಷ್ಠ ರಾಜ್ಯವಾಗಿದೆ. ದುರದೃಷ್ಟವಶಾತ್, ಇದು ನಾಯಕತ್ವದ ಬಿಕ್ಕಟ್ಟನ್ನು ಹೊಂದಿದೆ. ನಾಯಕತ್ವವೇ ಪಕ್ಷಕ್ಕೆ ಸಮಸ್ಯೆಯಾಗಿದೆ' ಎಂದು ಅವರು ಕಾಂಗ್ರೆಸ್ ನಾಯಕರನ್ನು ತರಾಟೆಗೆ ತೆಗೆದುಕೊಂಡರು.

2014ರಲ್ಲಿ ತೆಲಂಗಾಣ ಸರ್ಕಾರ ರಚನೆಯಾದ ನಂತರ ಇಲ್ಲಿಯವರೆಗೆ ಕೆಸಿಆರ್ ಸರ್ಕಾರವು 45,000 ಕೋಟಿ ರೂ.ಗಳನ್ನು BC ಗಳ ಕಲ್ಯಾಣಕ್ಕಾಗಿ ಖರ್ಚು ಮಾಡಿದೆ ಮತ್ತು 'ಕಾಂಗ್ರೆಸ್ ಪಕ್ಷವನ್ನು ಬಂಗಾಳಕೊಲ್ಲಿಗೆ ಎಸೆಯುವಂತೆ' ಅವರು ಜನತೆಗೆ ವಿನಂತಿಸಿದರು.

'BC ಕಲ್ಯಾಣಕ್ಕೆ ಬದ್ಧ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಪಕ್ಷವು, ಸ್ವಾತಂತ್ರ್ಯ ಬಂದು ಹಲವು ವರ್ಷಗಳಾದರೂ ಇಲ್ಲಿಯವರೆಗೆ ಗಣತಿ ಕೈಗೊಂಡಿಲ್ಲ' ಎಂದು ಆರೋಪಿಸಿದ ಅವರು, ಕೇಂದ್ರದಲ್ಲಿ ಬಿಸಿಯೂಟಕ್ಕೆ ಪ್ರತ್ಯೇಕ ಸಚಿವಾಲಯ ಬೇಕು ಎಂದು 2004 ರಲ್ಲಿ ನಮ್ಮ ತಂದೆಯೇ ಒತ್ತಾಯಿಸಿದರು ಎಂದರು.



## ಜಾರ್ಖಂಡ್‌ನಲ್ಲಿ ಮೂವರು ಮಾವೋವಾದಿಗಳ ಬಂಧನ, ಐಇಡಿ ತಯಾರಿಕೆ ಸಾಮಗ್ರಿ ವಶ

ಸಿಂಗ್‌ಭೂಮ್: ಜಾರ್ಖಂಡ್‌ನ ಪಶ್ಚಿಮ ಸಿಂಗ್‌ಭೂಮ್ ಜಿಲ್ಲೆಯಲ್ಲಿ ಶುಕ್ರವಾರ ನಿಷೇಧಿತ ಸಿಪಿಐ–ಮಾವೋವಾದಿ ಸಂಘಟನೆಯ ಮೂವರು ಸದಸ್ಯರನ್ನು ಬಂಧಿಸಲಾಗಿದ್ದು, ಅವರಿಂದ ಸುಧಾರಿತ ಸ್ಫೋಟಕ ಸಾಧನಗಳನ್ನು ತಯಾರಿಸಲು ಬಳಸುತ್ತಿದ್ದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಪೊಲೀಸರು ಗೋಯಿಲ್ಕೆರಾ ಪೊಲೀಸ್ ಠಾಣಾ ವ್ಯಾಪ್ತಿಯ ರೆಂಗ್ರಾ ಗ್ರಾಮದಲ್ಲಿ ದಾಳಿ ನಡೆಸಿ ಮಾವೋವಾದಿಗಳನ್ನು ಬಂಧಿಸಿದ್ದಾರೆ.

ಬಂಧಿತ ಮೂವರು ಮಾವೋವಾದಿಗಳು ಐಇಡಿ ಬಳಸಿ ಸಿಆರ್‌ಪಿಎಫ್ ಕ್ಯಾಂಪ್‌ಗೆ ಪಡಿತರ ಸಾಗಿಸುತ್ತಿದ್ದ ಟ್ರ್ಯಾಕ್ಟರ್ ಅನ್ನು ಸ್ಫೋಟಿಸಿ ಜನರನ್ನು ಹತ್ಯೆ ಮಾಡಿದ ಪ್ರಕರಣ ಸೇರಿದಂತೆ ಹಲವು ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಅಶುತೋಷ್ ಶೇಖರ್ ಚೈಬಾಸಾದಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಬಂಧಿತ ಮಾವೋವಾದಿಗಳನ್ನು ಪಶ್ಚಿಮ ಸಿಂಗ್‌ಭೂಮ್ ಜಿಲ್ಲೆಯ ನಿವಾಸಿಗಳಾದ ಡೆಬಾಯ್ ಪುರ್ತಿ ಅಲಿಯಾಸ್ ಲೆಗಾಸಿ ಪುರ್ತಿ (28), ಜುರಿಯಾ ಬಹಂಡಾ ಅಲಿಯಾಸ್ ಮಾತಾ ಬಹಂಡಾ (28) ಮತ್ತು ಲೆಬಿಯಾ ಬೋಯಿಪೈ (21) ಎಂದು ಗುರುತಿಸಲಾಗಿದೆ ಎಂದು ಎಸ್‌ಪಿ ತಿಳಿಸಿದ್ದಾರೆ.

## ಕರ್ತವ್ಯದ ಮೂಲಕ ಜೀವ–ಜೀವನದ ಶಕ್ತಿ ತಿಳಿಸಿರುವವಳು ವೀರವನಿತೆ ಒನಕೆ ಓಬವ್ವ: ಡಾ.ನೆಲ್ಲಿಕಟ್ಟೆ ಎಸ್.ಸಿದ್ದೇಶ್



ಶಿವಮೊಗ್ಗ: ಚಿತ್ರದುರ್ಗ ಕೋಟೆ ಮತ್ತು ಜನರನ್ನು ಬಹು ಅಪಾಯದಿಂದ ಕಾಪಾಡಿ, ಕರ್ತವ್ಯದ ಮೂಲಕವೇ ಜೀವ–ಜೀವನದ ಶಕ್ತಿಯನ್ನು ತಿಳಿಸಿರುವವಳು ವೀರವನಿತೆ ಓಬವ್ವ ಎಂದು ಕುವೆಂಪು ವಿಶ್ವವಿದ್ಯಾಲಯದ ಡಾ.ಬಿ.ಆರ್ ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕರಾದ ಡಾ.ನೆಲ್ಲಿಕಟ್ಟೆ ಎಸ್.ಸಿದ್ದೇಶ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಛಲವಾದಿ ಮಹಾಸಭಾ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಇಂದು ನಗರದ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ವೀರರಾಣಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಳ್ಳಾರಿ ಜಿಲ್ಲೆ, ಕೂಡ್ಲಿಗಿ ತಾಲ್ಲೂಕಿನ ಛಲವಾದಿ ಚಿನ್ನಪ್ಪನ ಮಗಳಾದ ಓಬವ್ವ, ಪ್ರಾಮಾಣಿಕತೆ, ಶಿಸ್ತು, ದಕ್ಷತೆ, ಪ್ರೀತಿ–ವಿಶ್ವಾಸಕ್ಕೆ ಹೆಸರುವಾಸಿಯಾಗಿದ್ದಳು. ಪತಿ ಭಕ್ತಿ ಮತ್ತು ದೇಶ ಭಕ್ತಿಯನ್ನು ಲೋಕಕ್ಕೆ ಪರಿಚಯಿಸಿದ ದಿಟ್ಟ ಮಹಿಳೆ. ಹೈದರಾಲಿಯು 1766 ರಲ್ಲಿ ಚಿತ್ರದುರ್ಗದ ಕೋಟೆಯ ಮೇಲೆ ಅಕ್ರಮಣ ಮಾಡುತ್ತಿರುವುದನ್ನು ತಿಳಿದ ಓಬವ್ವ, ಒನಕೆಯನ್ನು ಅಸ್ತ್ರವಾಗಿಟ್ಟುಕೊಂಡು ರಣಚಂಡಿಯಂತೆ ಶತ್ರು ಸೈನಿಕರನ್ನು ಕೊಂದು ಹಾಕುತ್ತಾಳೆ. ನಂತರ ಆತನ ಗಂಡ ಹೆಣದ ರಾಶಿಗಳನ್ನು ಮತ್ತು ಹರಿಯುತ್ತಿದ್ದ ರಕ್ತದ ಕಾಲುವೆಯನ್ನು ಕಂಡು ಆಶ್ಚರ್ಯಚಕಿತನಾಗಿ ರಣ ಕಹಳೆಯನ್ನು ಊದುತ್ತಾನೆ. ಎಚ್ಚರಿಕೆ ದನಿಯನ್ನು ಕೇಳಿದ ಮದಕರಿನಾಯಕನ ಸೈನಿಕರು ಶತ್ರು ಸೈನಿಕರೊಂದಿಗೆ ಯುದ್ಧಕ್ಕೆ ಸಿದ್ಧರಾಗುತ್ತಾರೆ. ಅಂದಿನಿಂದ ಓಬವ್ವಳಿಗೆ ವೀರವನಿತೆ ಒನಕೆ ಓಬವ್ವ ಎಂದು ಮತ್ತು ಆ ಕಳ್ಳಕಿಂಡಿಗೆ ಒನಕೆ ಓಬವ್ವನ ಕಿಂಡಿ ಎಂದು ಬಿರುದು ಬಂದಿತು.

ಕೊನೆಯದಾಗಿ ಕಳ್ಳಕಿಂಡಿಯಿಂದ ಬಂದ ಶತ್ರು ಸೈನಿಕನೊಬ್ಬ ಓಬವ್ವನ ಬೆನ್ನಿಗೆ ಚೂರಿ ಹಾಕುವುದರಿಂದ ಓಬವ್ವ ಅಲ್ಲಿ ಮರಣ ಹೊಂದುತ್ತಾಳೆ ಎಂಬುದು ಪುಟ್ಟಣ್ಣ ಕಣಗಲ್ ಇತಿಹಾಸಕ್ಕೆ ಮಾಡಿರುವ ಒಂದು ತಪ್ಪು ಕಲ್ಪನೆ. ಓಬವ್ವ ಯುದ್ಧ ನಡೆದ ಮೂರು ವರ್ಷಗಳ ನಂತರ ಅಂದರೆ 1769 ರಲ್ಲಿ ಮರಣ ಹೊಂದುತ್ತಾಳೆ. ಸಮಯಪ್ರಜ್ಞೆಯಿಂದ ದುರ್ಗಕ್ಕೆ ಮತ್ತು ದುರ್ಗದ ಜನತೆಗೆ ಒದಗಿದ ಅಪಾಯವನ್ನು ನಿಸ್ವಾರ್ಥ ಸೇವೆಯಿಂದ ತಪ್ಪಿಸಿರುವ ಕಾರಣ ಒನಕೆ ಓಬವ್ವಳನ್ನು ಮನುಕುಲದ ಸಾಂಸ್ಕೃತಿಕ ಲೋಕದ ಧ್ರುವತಾರೆ ಎಂದು ಹೇಳಿದರು.

# ಬರ ನಿರ್ವಹಣೆಗೆ ಕೇಂದ್ರದಿಂದ ಅನುದಾನ ಬಂದಿಲ್ಲ

## ಕೆಡಿಪಿ ಸಭೆಯಲ್ಲಿ ಪರಮೇಶ್ವರ್ ಆರೋಪ: ಸಮಗ್ರ ವರದಿ

ತುಮಕೂರು: ರಾಜ್ಯ ಸರ್ಕಾರ ರಾಜ್ಯದಲ್ಲಿ ತಲೆದೋರಿರುವ ಬರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬರ ನಿರ್ವಹಿಸಲು ಅನುದಾನ ಹಂಚಿಕೆ ಮಾಡಿದೆ. ರಾಜ್ಯ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವನ್ನು ಬಳಸಿಕೊಂಡು ಮುಂದಿನ ದಿನಗಳಲ್ಲಿ ಕುಡಿಯುವ ನೀರು ಮತ್ತು ಜಾನುವಾರುಗಳ ಮೇವಿಗೆ ಯಾವುದೇ ರೀತಿಯಲ್ಲೂ ಸಮಸ್ಯೆಯಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ ಪರಮೇಶ್ವರ್ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ 2023–24ನೇ ಸಾಲಿನ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ 226 ತಾಲ್ಲೂಕುಗಳ ಪೈಕಿ 223 ತಾಲ್ಲೂಕುಗಳಲ್ಲಿ ತೀವ್ರ ಬರ ತಲೆದೋರಿದ್ದು, ಕಂದಾಯ ಇಲಾಖೆಯು 37ಸಾವಿರ ಕೋಟಿ ನಷ್ಟವನ್ನು ಅಂದಾಜು ಮಾಡಿದೆ. ಈ ಪೈಕಿ 17 ಸಾವಿರ ಕೋಟಿ ರೂ.ಗಳ ಅನುದಾನವನ್ನು ಬರನಿರ್ವಹಣೆಗಾಗಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದು, ಈವರೆಗೂ ಅನುದಾನ ಬಂದಿಲ್ಲ. ಆದರೆ ರಾಜ್ಯ ಸರ್ಕಾರ ಎಲ್ಲಾ ಜಿಲ್ಲಾಧಿಕಾರಿಗಳ ಪಿಡಿ ಖಾತೆಗೆ ಅನುದಾನ ಬಿಡುಗಡೆ ಮಾಡಿದ್ದು, ಇದನ್ನು ಬರ ಕಾಮಗಾರಿಗಳಿಗೆ ಉಪಯೋಗಿಸಲು ಸರ್ಕಾರ ಒಪ್ಪಿಗೆ ನೀಡಿದೆ ಎಂದು ತಿಳಿಸಿದರು.



ಕೃಷಿ ಇಲಾಖೆಯ ಪ್ರಗತಿ ಪರಿಶೀಲಿಸಿ ಮಾತನಾಡಿದ ಸಚಿವರು, ನೀರಿನ ಸದ್ಬಳಕೆಗಾಗಿ ಸರ್ಕಾರದ ಸಹಾಯಧನದಡಿ ಜಿಲ್ಲೆಯ 18 ಸಾವಿರ ರೈತರಿಗೆ ಒಟ್ಟು 46 ಕೋಟಿ ರೂ.ಗಳ ತುಂತುರು ನೀರಾವರಿ ಘಟಕಗಳನ್ನು ಈ ತಿಂಗಳೊಳಗಾಗಿ ವಿತರಿಸುವಂತೆ ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

ಕುಡಿಯುವ ನೀರಿನ ಕೊರತೆ ಇರುವಂತಹ ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಿ ಶಾಸಕರ ನೇತೃತ್ವದ ಟಾಸ್ಕ್ ಫೋರ್ಸ್ ಸಮಿತಿಯು ಸಭೆ ಕರೆದು ಚರ್ಚಿಸಿ ಕೊಳವೆ ಬಾವಿ ಕೊರೆಸುವುದಕ್ಕೆ ಪ್ರಸ್ತಾವನೆ ಕಳುಹಿಸಿದಲ್ಲಿ ಜಿಲ್ಲಾಡಳಿತ ವತಿಯಿಂದ ತ್ವರಿತಗತಿಯಲ್ಲಿ ಅನುಮತಿ ನೀಡಲಾಗುವುದು ಎಂದು ತಿಳಿಸಿದರು.

ಶುದ್ಧ ನೀರಿನ ಘಟಕಗಳ ನಿರ್ವಹಣೆ ಸಂಬಂಧಿಸಿದಂತೆ ತ್ರಿಸದಸ್ಯರುಳ್ಳ ಟಾಸ್ಕ್ ಫೋರ್ಸ್ ಸಮಿತಿಯನ್ನು ರಚಿಸಬೇಕು ಮತ್ತು ಪ್ರತಿ 2 ದಿನಗಳಿಗೊಮ್ಮೆ ಇಓ ಮತ್ತು ಪಿಡಿಓಗಳು ಕುಡಿಯುವ ನೀರಿನ ವಸ್ತುಸ್ಥಿತಿ ಕುರಿತಂತೆ ಜಿಲ್ಲಾಧಿಕಾರಿಗಳು ಮತ್ತು ಜಿ.ಪಂ. ಸಿಇಓ ಅವರಿಗೆ ವರದಿ ನೀಡಬೇಕು. ಯಾವುದೇ ಹಳ್ಳಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಬಾರದು ಎಂದು ಸಚಿವರು ಸೂಚಿಸಿದರು.

ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಜಿಲ್ಲೆಯಲ್ಲಿ 16 ಕೋಟಿ ಮಾನವ ದಿನಗಳ ಗುರಿ ನೀಡಲಾಗಿದ್ದು, ಈ ಪೈಕಿ 13 ಕೋಟಿ ಮಾನವ ದಿನಗಳನ್ನು ಈಗಾಗಲೇ ಸೃಜಿಸಲಾಗಿದೆ. ಹೆಚ್ಚುವರಿಯಾಗಿ 28 ಕೋಟಿ ರೂ.ಗಳ ಮಾನವ ದಿನಗಳ ಗುರಿ ಒದಗಿಸುವಂತೆ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದರು.

ನರೇಗಾ ಹಾಗೂ ಸಿಎಸ್‌ಆರ್ ಯೋಜನೆಯಡಿ ಈಗಾಗಲೇ ಜಿಲ್ಲೆಯ ಹಲವು ಶಾಲೆಗಳಿಗೆ ಸಿಂಥೆಟಿಕ್ ಟ್ರ್ಯಾಕ್, ಶೌಚಾಲಯ, ಅಂಗನವಾಡಿಗಳಿಗೆ ಕಾಂಪೌಂಡ್ ಮುಂತಾದವುಗಳನ್ನು ನಿರ್ಮಾಣ ಮಾಡಲಾಗಿದೆ. ಇನ್ನು 2 ವರ್ಷದೊಳಗಾಗಿ ಜಿಲ್ಲೆಯ ಎಲ್ಲಾ ಶಾಲೆಗಳಿಗೆ ಶೌಚಾಲಯ, ಕಾಂಪೌಂಡ್, ಅಂಗನವಾಡಿ ಕಟ್ಟಡಗಳಿಗೆ ಕಾಂಪೌಂಡ್ ಮುಂತಾದ ಕೆಲಸಗಳನ್ನು ನರೇಗಾ ಹಾಗೂ ಸಿಎಸ್‌ಆರ್ ಯೋಜನೆಯಡಿ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದರು.

ರಾಷ್ಟ್ರದಲ್ಲಿಯೇ ಮೊದಲನೆಯದು ಎನ್ನುವ ವಿನೂತನ ಕಾರ್ಯಕ್ರಮ "ಸಮಗ್ರ ತುಮಕೂರು ಆರೋಗ್ಯ ಅಭಿಯಾನ"ಕಾರ್ಯಕ್ರಮಕ್ಕೆ ತುಮಕೂರು ಜಿಲ್ಲೆಯಲ್ಲಿ ಈಗಾಗಲೇ ಚಾಲನೆ ನೀಡಲಾಗಿದೆ.

ಈ ಕಾರ್ಯಕ್ರಮದಡಿ ಗ್ರಾಮಗಳ ಪ್ರತಿ ಮನೆಗೆ ವೈದ್ಯರುಗಳು ತೆರಳಿ 12 ಮಾನದಂಡಗಳನ್ನು ಅನುಸರಿಸಿ ಕುಟುಂಬದ ಪ್ರತಿ ಸದಸ್ಯರ ಆರೋಗ್ಯ ಮಾಹಿತಿಯನ್ನು ಕಲೆ ಹಾಕಿ ದಾಖಲೀಕರಣ ಮಾಡಲಿದ್ದಾರೆ. ಈ ದಾಖಲೆಗಳಿಗನುಗುಣವಾಗಿ ರೋಗಿಗೆ ಚಿಕಿತ್ಸೆಗೆ ಅನುಕೂಲ ಮಾಡಲಾಗುವುದು. ಮುಂದಿನ 60 ದಿನಗಳಲ್ಲಿ 18ಲಕ್ಷ ಜನರ ತಪಾಸಣೆಯ ಗುರಿಯೊಂದಿಗೆ ಈ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ವೈದ್ಯರುಗಳು ಮತ್ತು ಇತರೆ ಸಿಬ್ಬಂದಿಗಳು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಕಾಲದಲ್ಲಿ ಸಿಗುವುದಿಲ್ಲ ಎಂಬ ದೂರಿಗೆ ಸಂಬಂಧಿಸಿದಂತೆ ಸ್ಪಷ್ಟನೆ ನೀಡಿದ ಸಚಿವರು, ಇನ್ನು ಮುಂದೆ ಡಿಹೆಚ್‌ಓ ತಿಂಗಳಿಗೊಮ್ಮೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಬೇಕು. ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಸಿಬ್ಬಂದಿಗಳ ಹಾಜರಾತಿಗೆ ಸಂಬಂಧಿಸಿದಂತೆ ತಂತ್ರಜ್ಞಾನ ಬಳಸಿ ವೈದ್ಯರ ಲಭ್ಯತೆ ಕುರಿತು ಪರಿಶೀಲಿಸಬೇಕು. ಪ್ರತಿ ಪಿಹೆಚ್‌ಸಿಯಲ್ಲಿ ಒಂದು ರಿಜಿಸ್ಟರ್ ಇಡಬೇಕು ಮತ್ತು ಆಸ್ಪತ್ರೆಗೆ ಭೇಟಿ ನೀಡಿದಂತಹ ಅಧಿಕಾರಿಗಳು ರಿಜಿಸ್ಟರ್‌ನಲ್ಲಿ ತಮ್ಮ ಅಭಿಪ್ರಾಯವನ್ನು ನಮೂದಿಸಬೇಕೆಂದು ಸೂಚಿಸಿದರು.

ಹೇಮಾವತಿ ನೀರನ್ನು ಸಮರ್ಪಕವಾಗಿ ಜಿಲ್ಲೆಗೆ ಹರಿಸುವ ಸಂಬಂಧ ಸಭೆಯಲ್ಲಿ ಉಪಸ್ಥಿತರಿದ್ದಂತಹ ಶಾಸಕರುಗಳ ಮನವಿಗೆ ಸ್ಪಂದಿಸಿದ ಸಹಕಾರ ಸಚಿವ ಕೆ.ಎನ್. ರಾಜಣ್ಣ, ಸದ್ಯದಲ್ಲೇ ಈ ಕುರಿತಂತೆ ಐಸಿಸಿ ಸಭೆಯನ್ನು ಕರೆಯಲಿದ್ದು, ಸಭೆಯಲ್ಲಿ ಜಿಲ್ಲೆಯ ಶಾಸಕರೆಲ್ಲರೂ ಸೇರಿ ಹೇಮಾವತಿ ನೀರಿನ ಹಂಚಿಕೆ ಕುರಿತು ಚರ್ಚಿಸಿ ತೀರ್ಮಾನಿಸೋಣ ಎಂದು ತಿಳಿಸಿದರು.

ಮುಂದುವರೆದು ಮಾತನಾಡಿದ ಸಚಿವ ರಾಜಣ್ಣ, ಕುಡಿಯುವ ನೀರಿಗೆ ಸಂಬಂಧಿಸಿದಂತೆ ಕೆರೆ ನೀರಿನ ಮೇಲೆ ಅವಲಂಬಿತವಾಗಿರುವ ಹಳ್ಳಿಗಳನ್ನು ಗುರುತಿಸಿ, ಅಂತಹ ಕೆರೆಗಳಿಗೆ ಆಧ್ಯತೆ ಮೇರೆಗೆ ನೀರು ಹರಿಸಲಾಗುವುದು ಎಂದು ತಿಳಿಸಿದರು.

ಆರ್‌ಓ ಘಟಕಗಳ ಕುರಿತಂತೆ ಮಾತನಾಡಿದ ಸಚಿವ ರಾಜಣ್ಣ, ಆರ್‌ಓ ಘಟಕಗಳು ಸುಸ್ಥಿತಿಯಲ್ಲಿವೆ ಎಂದು ದಾಖಲೆಗಳು ಹೇಳುತ್ತವೆ. ಆದರೆ ವಾಸ್ತವ ಪರಿಸ್ಥಿತಿ ಬೇರೆಯೇ ಇದೆ. ಏಜೆನ್ಸಿಗಳು ಕೇವಲ ಘಟಕದ "ಮೆಂಬ್ರೇನ್" ದುರಸ್ಥಿಪಡಿಸುವುದಕ್ಕೆ ಮಾತ್ರ ಸೀಮಿತವಾಗಿವೆ. ಗ್ರಾಮಪಂಚಾಯತಿಗಳಿಗೆ ಆರ್‌ಓ ಘಟಕಗಳನ್ನು ಹಸ್ತಾಂತರಿಸಬೇಕು. ಈ ಕುರಿತಂತೆ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಸೂಚನೆ ನೀಡಬೇಕು ಎಂದು ತಿಳಿಸಿದರು.


## ಕಟ್ಟಡ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿವೇತನ ಕಡಿತ

### ವಿದ್ಯಾರ್ಥಿ–ಪೋಷಕರಲ್ಲಿ ಆತಂಕ

ಬೆಂಗಳೂರು: ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾರ್ಥಿವೇತನವನ್ನು ಕಡಿತಗೊಳಿಸುವುದಾಗಿ ಸರ್ಕಾರ ಇತ್ತೀಚೆಗೆ ತಿಳಿಸಿತ್ತು. ಕಾರ್ಮಿಕ ಇಲಾಖೆಯು ಸಾಕಷ್ಟು ಹಣದ ಕೊರತೆ ಎದುರಿಸುತ್ತಿದೆ ಎಂದು ಸರ್ಕಾರ ಇದಕ್ಕೆ ಕಾರಣ ನೀಡಿದ್ದು, ವಿದ್ಯಾರ್ಥಿಗಳು ಮತ್ತು ತಜ್ಞರು ಸರ್ಕಾರದ ಕ್ರಮಕ್ಕೆ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ.

ಈ ಕ್ರಮವು ಬಡತನದ ಅಂಚಿನಲ್ಲಿರುವ ಕಟ್ಟಡ ಕಾರ್ಮಿಕರ ಮಕ್ಕಳ ಕಡಿಮೆ ಶಾಲಾ ದಾಖಲಾತಿಗೆ ಕಾರಣವಾಗಬಹುದು ಮತ್ತು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗಬಹುದು ಎಂದು ಸಂಬಂಧಪಟ್ಟವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

2022–23 ನೇ ಸಾಲಿನಲ್ಲಿ ಕಾರ್ಮಿಕ ಇಲಾಖೆಯು 13 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿ ವೇತನ ಅರ್ಜಿಗಳನ್ನು ಸ್ವೀಕರಿಸಿದೆ ಮತ್ತು 7 ಲಕ್ಷ ವಿದ್ಯಾರ್ಥಿಗಳನ್ನು ಫಲಾನುಭವಿಗಳಾಗಿ ಗುರುತಿಸಿದೆ ಎಂದು ಅಂಕಿಅಂಶ ಹೇಳುತ್ತದೆ. ಶಾಲಾ ಹಂತದಿಂದ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿವೇತನದ ಮೊತ್ತವನ್ನು ಶೇ 80–85 ರಷ್ಟು ಕಡಿತಗೊಳಿಸಲು ಇಲಾಖೆ ನಿರ್ಧರಿಸಿದೆ. ಇಂಜಿನಿಯರಿಂಗ್ ಅಥವಾ ಮೆಡಿಕಲ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮತ್ತು




ಇತರ ಸ್ನಾತಕೋತ್ತರ ವಿದ್ಯಾರ್ಥಿಗಳ ಮೇಲೆ ಇದರ ಪ್ರಭಾವ ಬೀರುತ್ತದೆ. ಎಂಬಿಬಿಎಸ್ ವಿದ್ಯಾರ್ಥಿ ವಾರ್ಷಿಕವಾಗಿ 60,000 ರೂಪಾಯಿಗಳನ್ನು ಪಡೆಯುತ್ತಿದ್ದರು, ಅದು ಈಗ ಕೇವಲ 11,000 ರೂಪಾಯಿಗೆ ಕಡಿತಗೊಳ್ಳುತ್ತದೆ ಮತ್ತು ಪಿಜಿ ವಿದ್ಯಾರ್ಥಿಗಳ ಮೊತ್ತವು 35,000 ರೂಪಾಯಿಗಳಿಂದ 10,000 ರೂಪಾಯಿಗೆ ಇಳಿಕೆಯಾಗುತ್ತದೆ. ಈ ಬಗ್ಗೆ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಪ್ರತಿನಿಧಿಗಳು ಮೊದಲ ವರ್ಷ ಮತ್ತು ಅಂತಿಮ ವರ್ಷದ ಕೋರ್ಸ್‌ಗಳ ವಿದ್ಯಾರ್ಥಿಗಳೊಂದಿಗೆ ಮಾತನಾಡಿದಾಗ, ಈ ಕ್ರಮವು ದೊಡ್ಡ ಆಘಾತವನ್ನು ತಂದಿದೆ ಎನ್ನುತ್ತಾರೆ. ವರ್ಷದಿಂದ ವರ್ಷಕ್ಕೆ ಶಿಕ್ಷಣದ ವೆಚ್ಚವು ಹೆಚ್ಚುತ್ತಿರುವಾಗ, ವಿದ್ಯಾರ್ಥಿವೇತನವು ಅವರಿಗೆ ಅನುಕೂಲವಾಗುತ್ತಿತ್ತು, ಅದು ಈಗ ಕಡಿಮೆಯಾಗುತ್ತಿದೆ ಎನ್ನುತ್ತಾರೆ.

ಬೆಂಗಳೂರಿನ ಎಸ್‌ಕೆಎಸ್‌ಜೆಟಿಐನಲ್ಲಿ ಪ್ರಥಮ ವರ್ಷದ ಕಂಪ್ಯೂಟರ್ ಸೈನ್ಸ್ ಎಂಜಿನಿಯರಿಂಗ್ ವಿದ್ಯಾರ್ಥಿನಿ ಶಿವಮೊಗ್ಗದ ದೀಕ್ಷಾ ಗುಡ್ಡಪ್ಪ, ನನ್ನ ತಂದೆ 25 ವರ್ಷಗಳಿಂದ ಕೂಲಿ ಕೆಲಸ ಮಾಡುತ್ತಿದ್ದಾರೆ. ಕನಿಷ್ಠ ವಿದ್ಯಾರ್ಥಿವೇತನದ ಅಡಿಯಲ್ಲಿ ನಾನು ನನ್ನ ಮಾಧ್ಯಮಿಕ ಶಿಕ್ಷಣವನ್ನು ಪೂರ್ಣಗೊಳಿಸಿ ಉನ್ನತ ಶಿಕ್ಷಣವನ್ನು ಆಯ್ಕೆ ಮಾಡಿಕೊಂಡೆ. ಸರ್ಕಾರದ ಹೊಸ ನಿಯಮಗಳಿಂದ ನಾವು ಓದು ಮುಂದುವರಿಸುವುದು ಕಷ್ಟವಾಗುತ್ತದೆ ಎನ್ನುತ್ತಾರೆ.

ಮೈಸೂರಿನಲ್ಲಿ ಓದುತ್ತಿರುವ ಮಂಡ್ಯದ ಮತ್ತೋರ್ವ ವಿದ್ಯಾರ್ಥಿನಿ ಚೈತ್ರ ಯುಕೆ, ಸ್ಕಾಲರ್ಶಿಪ್ ಮೊತ್ತ ಯಾವಾಗಲೂ ವಿಳಂಬವಾಗುವುದರಿಂದ ನಮ್ಮ ಪೋಷಕರು ಶುಲ್ಕ ಪಾವತಿಸಲು ಬ್ಯಾಂಕ್‌ಗಳಲ್ಲಿ ಸಾಲ ಮಾಡಬೇಕಾಗಿದೆ. ಶಿಕ್ಷಣಕ್ಕೆ ನಮಗೆ ಸಹಾಯವಿಲ್ಲದಿದ್ದರೆ ಆರ್ಥಿಕವಾಗಿ ಕಷ್ಟವಾಗುತ್ತದೆ ಎನ್ನುತ್ತಾರೆ.

ಸಣ್ಣ ಮೊತ್ತವೂ ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತದೆ. ಸರ್ಕಾರ ಅವರನ್ನು ಬೆಂಬಲಿಸದಿದ್ದರೆ ಮತ್ತೆ ಯಾರೂ ಸಹಾಯ ಮಾಡುತ್ತಾರೆ ಎಂದು ಚೈಲ್ಡ್ ರೈಟ್ಸ್ ಟ್ರಸ್ಟ್‌ನ (CRT) ಕಾರ್ಯನಿರ್ವಾಹಕ ನಿರ್ದೇಶಕ ವಾಸುದೇವ್ ಶರ್ಮಾ ಹೇಳಿದ್ದಾರೆ.

## 16ನೇ ಮಹಡಿಯಿಂದ ಬಿದ್ದು ವಿದ್ಯಾರ್ಥಿ ಸಾವು

### ಸಾವಿನ ಸುತ್ತ ಹಲವು ಅನುಮಾನ; ತನಿಖೆ ಆರಂಭ




ಬೆಂಗಳೂರು: 16ನೇ ಮಹಡಿಯಿಂದ ಬಿದ್ದು ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾನಿಲಯದ ಬಿಎಸ್‌ಸಿ ಅಂತಿಮ ವರ್ಷದ ವಿದ್ಯಾರ್ಥಿ (21)ಯೊಬ್ಬ ಸಾವನ್ನಪ್ಪಿರುವ ಘಟನೆಯೊಂದು ಶುಕ್ರವಾರ ನಡೆದಿದೆ.

ಮೃತ ವಿದ್ಯಾರ್ಥಿಯನ್ನು ಹೈದರಾಬಾದ್ ಮೂಲದ ಎಂ ಅಶ್ವಿನ್ ನಂಬಿಯಾರ್ ಎಂದು ಗುರ್ತಿಸಲಾಗಿದೆ. ಶುಕ್ರವಾರ ಸರ್ಜಾಪುರದಲ್ಲಿರುವ ವಿಶ್ವವಿದ್ಯಾನಿಲಯದ ಹಾಸ್ಟೆಲ್ ನಲ್ಲಿ ಶುಕ್ರವಾರ ಬೆಳಿಗ್ಗೆ 7.30 ರಿಂದ 8 ರ ಸುಮಾರಿಗೆ ಘಟನೆ ನಡೆದಿದೆ.

ವಿದ್ಯಾರ್ಥಿ ಸಾವನ್ನು ಆತ್ಮಹತ್ಯೆ ಎಂದು ಶಂಕಿಸಲಾಗಿದ್ದು, ಕಾರಣ ಇನ್ನೂ ತಿಳಿದುಬಂದಿಲ್ಲ, ಡೆತ್ ನೋಟ್ ಕೂಡ ಪತ್ತೆಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಬೆಳಿಗ್ಗೆ 10.45 ರ ಸುಮಾರಿಗೆ ಮಾಹಿತಿ ಬಂದಿತ್ತು. ಆತ್ಮಹತ್ಯೆಯಿಂದ ವಿದ್ಯಾರ್ಥಿ ಸಾವನ್ನಪ್ಪಿದ್ದಾರೆಯೇ ಅಥವಾ ಸಾವಿನ ಹಿಂದೆ ಬೇರೆಯದ್ದೇ ಕಾರಣವಿದೆಯೇ ಎಂಬುದನ್ನು ಪರಿಶೀಲಿಸಬೇಕಾಗಿದೆ. ಮೃತದೇಹವನ್ನು ಅತ್ತಿಬೆಲೆಯ ಆಕ್ಸ್‌ಫರ್ಡ್ ವೈದ್ಯಕೀಯ ಕಾಲೇಜಿನ ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಮೃತ ಅಶ್ವಿನ್ ಅವರ ತಂದೆ ಮನೋಹರ್ ನಂಬಿಯಾರ್ ಭಾರತೀಯ ನೌಕಾಪಡೆಯ ನಿವೃತ್ತ ಅಧಿಕಾರಿಯಾಗಿದ್ದಾರೆ.

ಬೆಳಿಗ್ಗೆ 10.30ರ ಸುಮಾರಿಗೆ ವಿಶ್ವವಿದ್ಯಾನಿಲಯದಿಂದ ದೂರವಾಣಿ ಕರೆ ಬಂದಿತ್ತು. ಸಾವಿಗೆ ಕಾರಣ ನಮಗೆ ತಿಳಿದಿಲ್ಲ. ನಾವೀಗ ಹೈದರಾಬಾದ್‌ನಿಂದ ಹೊರಗಿದ್ದೇವೆ. ಸಂಜೆ 7 ಗಂಟೆಗೆ ಬೆಂಗಳೂರಿಗೆ ಬಂದೆವು. ಅಶ್ವಿನ್ ನನ್ನ ಇಬ್ಬರು ಮಕ್ಕಳಲ್ಲಿ ಒಬ್ಬನಾಗಿದ್ದಾನೆ, ನನ್ನ ಮಗ ಪ್ರತಿಭಾನ್ವಿತ ವಿದ್ಯಾರ್ಥಿಯಾಗಿಲ್ಲ. ಘಟನೆ ಕುರಿತು ವಿಶ್ವವಿದ್ಯಾನಿಲಯ ಆಡಳಿತ ಮಂಡಳಿ ಮತ್ತು ಪೊಲೀಸರೊಂದಿಗೆ ಮಾತುಕತೆ ನಡೆಸಿದ ಬಳಿಕವೇ ಕಾರಣ ತಿಳಿದುಬರಲಿದೆ. ಮೃತದೇಹ ಶವಾಗಾರದಲ್ಲಿದೆ ಎಂದು ನಮಗೆ ತಿಳಿಸಲಾಗಿದೆ ಎಂದು ಮನೋಹರ್ ಅವರು ಹೇಳಿದ್ದಾರೆ.

ಇನ್ನು ಘಟನೆ ಸಂಬಂಧ ಅಶ್ವಿನ್ ಅವರ ಸ್ನೇಹಿತರು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹಾಕುತ್ತಿದ್ದು, ಆಘಾತ ಹಾಗೂ ದುಃಖ ವ್ಯಕ್ತಪಡಿಸುತ್ತಿದ್ದಾರೆ.

ವಿಶ್ವವಿದ್ಯಾನಿಲಯ ಕೂಡ ಹೇಳಿಕ ಬಿಡುಗಡೆ ಮಾಡಿದ್ದು, ಸಂತಾಪ ಸೂಚಿಸಿದೆ. "ವಿಶ್ವವಿದ್ಯಾಲಯದ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಯ ಸಾವು ನಿಜಕ್ಕೂ ದುರದೃಷ್ಟಕರ ಸಂಗತಿ. ಘಟನೆ ಕರಿತು ಆಘಾತಕ್ಕೊಳಗಾಗಿದ್ದೇವೆ ಮತ್ತು ತೀವ್ರ ದುಃಖಿತರಾಗಿದ್ದೇವೆ. ವಿದ್ಯಾರ್ಥಿಯ ಕುಟುಂಬಕ್ಕೆ ಸಂತಾಪ ಸೂಚಿಸುತ್ತೇವೆ. ಈ ದುಃಖದ ಸಮಯದಲ್ಲಿ ಅವರಿಗೆ ಬೆಂಬಲ ನೀಡುತ್ತಿದ್ದೇವ. ಈ ಸಮಯದಲ್ಲಿ ಕುಟುಂಬದ ಗೌಪ್ಯತೆಯನ್ನು ಗೌರವಿಸಬೇಕೆಂದು ನಾವು ಮನವಿ ಮಾಡಿಕೊಳ್ಳುತ್ತೇವೆಂದು ಹೇಳಿದೆ.

## ಸ್ನೇಹಿತನ ಅಪ್ರಾಪ್ತ ಮಗಳನ್ನು ಅಪಹರಿಸಿ ಲೈಂಗಿಕ ದೌರ್ಜನ್ಯ:

### ವ್ಯಕ್ತಿಗೆ 20 ವರ್ಷಗಳ ಜೈಲು ಶಿಕ್ಷೆ




ಕಲಬುರಗಿ: 2021ರಲ್ಲಿ ಅಪ್ರಾಪ್ತ ಬಾಲಕಿಯನ್ನು ಅಪಹರಿಸಿ, ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪಿಗೆ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ (ಪೋಕ್ಸೊ ನ್ಯಾಯಾಲಯ) 20 ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ ಎಂದು ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಶಾಂತವೀರ್ ಬಿ ತುಪ್ಪದ್ ತಿಳಿಸಿದ್ದಾರೆ.

ಶುಕ್ರವಾರ ನೀಡಿರುವ ಪತ್ರಿಕಾ ಪ್ರಕಟಣೆಯಲ್ಲಿ, ಆರೋಪಿ ಗಂಗಾಧರ ಶರಣಬಸಪ್ಪ ನೀಲಹಳ್ಳಿ 2021ರ ಸೆಪ್ಟಂಬರ್ 24ರಂದು ಶಾಲೆಗೆ ಹೋಗುತ್ತಿದ್ದ ಅಪ್ರಾಪ್ತ ಬಾಲಕಿಯನ್ನು ಕಲಬುರಗಿಯ ರಾಮಮಂದಿರದ ಬಳಿ ಅಪಹರಿಸಿ, ಕೋಲಾರ ಜಿಲ್ಲೆಯ ಕರಿನಾಯಕನಹಳ್ಳಿಗೆ ಕರೆದೊಯ್ದಿದ್ದ. ತಾನು ತಂಗಿದ್ದ ಬಾಡಿಗೆ ಮನೆಗೆ ಕರೆದೊಯ್ದು 2021ರ ಸೆಪ್ಟೆಂಬರ್ 25ರಿಂದ ನವೆಂಬರ್ 25ರವರೆಗೆ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ.

ಬಳಿಕ ಬಾಲಕಿ ಅಲ್ಲಿಂದ ತಪ್ಪಿಸಿಕೊಂಡು ತನ್ನ ಹುಟ್ಟೂರಾದ ಕಲಬುರಗಿ ಜಿಲ್ಲೆಯ ಮದ್ಬೂಳ ಗ್ರಾಮಕ್ಕೆ ಬಂದು ಪೋಷಕರಿಗೆ ನಡೆದ ಘಟನೆಯ ಬಗ್ಗೆ ತಿಳಿಸಿದ್ದಾಳೆ. ಬಳಿಕ, ಆರೋಪಿಯು ಸಂತ್ರಸ್ತೆಯ ತಂದೆಯ ಸ್ನೇಹಿತನಾಗಿದ್ದು, ಆತ ನಾಲ್ಕು ವರ್ಷಗಳಿಂದ ಕುಟುಂಬದೊಂದಿಗೆ ಸಂಪರ್ಕದಲ್ಲಿದ್ದ ಎಂದು ತಿಳಿದು ಬಂದಿದೆ.

ಗಂಗಾಧರ್ ವಿರುದ್ಧ ಪೋಷಕರು ಮದ್ಬೂಳ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ತನಿಖಾಧಿಕಾರಿಯಾಗಿದ್ದ ಕಾಳಗಿ ವೃತ್ತದ ಅಂದಿನ ಪೊಲೀಸ್ ನಿರೀಕ್ಷಕ ವಿನಾಯಕ್ ಅವರು ಪ್ರಕರಣದ ತನಿಖೆ ನಡೆಸಿ, ಆರೋಪಿಗಳ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

## ವಿದ್ಯಾರ್ಥಿಗಳಲ್ಲಿ ಐ.ಎ.ಎಸ್. ಹುದ್ದೆಯ ಆಸಕ್ತಿ ಬೆಳೆಸಿದ ಮೇಜರ್ ಮಣಿವಣ್ಣನ್



ಧಾರವಾಡ: ಐಎಎಸ್ ಹುದ್ದೆಯ ಮಹತ್ವ, ಅದರ ವಿಭಾಗಗಳು, ಆಡಳಿತ ಸೇವೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿ, ಪ್ರಶ್ನಿಸುವ ಮನೋಭಾವವನ್ನು ಬೆಳೆಸಿಕೊಳ್ಳಿ ಎಂದು ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಮೇಜರ್ ಪಿ. ಮಣಿವಣ್ಣನ್ ಅವರು ಹೇಳಿದರು.

ಅವರು ಜಿಲ್ಲೆಯ ಹೆಬ್ಬಳ್ಳಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ವಿಜ್ಞಾನ ಕಾಲೇಜಿಗೆ ನ.6 ರಂದು ರಾತ್ರಿ ದಿಢೀರ ಭೇಟಿ ನೀಡಿ, ವಸತಿ ನಿಲಯದ ಸೌಲಭ್ಯ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳನ್ನು ಪರಿಶೀಲಿಸಿದರು.

ಅವರು ರಾತ್ರಿ ವಿದ್ಯಾರ್ಥಿಗಳೊಡನೆ ಅವರ ವಸತಿ ನಿಲಯದಲ್ಲಿಯೇ ವಸ್ತಿ ಉಳಿದು ಕಾಲೇಜು, ವಿದ್ಯಾರ್ಥಿಗಳ ಆರೋಗ್ಯ ಮತ್ತು ಅವರ ವಿದ್ಯಾಭ್ಯಾಸದ ಪ್ರಗತಿ ಬಗ್ಗೆ ಚರ್ಚಿಸಿದರು.

ನಂತರ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಐಎಎಸ್ ಹುದ್ದೆಯ ಮಹತ್ವ, ಅದರ ವಿಭಾಗಗಳು, ಆಡಳಿತ ಸೇವೆಗಳ ಬಗ್ಗೆ ತಿಳಿಸಿ, ಪ್ರಶ್ನಿಸುವ ಮನೋಭಾವವನ್ನು ಬೆಳೆಸಿಕೊಳ್ಳಲು ಹೇಳಿದರು.

ಅತ್ಯಂತ ಬಿಡುವಿಲ್ಲದ ವೇಳಾಪಟ್ಟಿಯ ನಡುವೆಯೂ ಸಹ ಸಮಯ ಮಾಡಿಕೊಂಡು ಶಾಂತ ರೀತಿಯಲ್ಲಿ ವಿದ್ಯಾರ್ಥಿಗಳೊಡನೆ ಚರ್ಚಿಸಿದ ರೀತಿ ಹಾಗೂ ಅವರ ಡೌನ್ ಟು ಅರ್ಥ ಗುಣ ವಿದ್ಯಾರ್ಥಿ ಮತ್ತು ಸಿಬ್ಬಂದಿಗಳಿಗೆ ಮಾದರಿ ಆಯಿತು. ಕಾಲೇಜಿನ ಆವರಣದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಇನ್ನೂ ಉತ್ತಮಗೊಳಿಸಲು ಕೆಲ ಸೂಚನೆಗಳನ್ನು ಅವರು ನೀಡಿದರು.

ಈ ಸಂದರ್ಭದಲ್ಲಿ ಶಾಲೆ ಮತ್ತು ಕಾಲೇಜಿನ ಪ್ರಾಂಶುಪಾಲರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.




## ಮಾದಕ ವಸ್ತು ಮಾರಾಟ ಜಾಲ ಪತ್ತೆ; 5 ಕೆಜಿ ಎಂಡಿಎಂಎ ವಶ

ಬೆಂಗಳೂರು: ನಗರದಲ್ಲಿ 'ಮಾದಕ ವಸ್ತುಗಳ ಮಾರಾಟ ಜಾಲ'ವೊಂದನ್ನು ಯಶಸ್ವಿಯಾಗಿ ಬೇಧಿಸುವಲ್ಲಿ ಕೇಂದ್ರ ಅಪರಾಧ ವಿಭಾಗದ ಮಾದಕ ದ್ರವ್ಯ ನಿಗ್ರಹ ದಳ ಯಶಸ್ವಿಯಾಗಿದೆ.

ಸುದ್ದಿಗೋಷ್ಠಿಯಲ್ಲಿ ಈ ಕುರಿತು ವಿವರ ನೀಡಿದ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ, ಮಾದಕ ವಸ್ತುಗಳ ವ್ಯಾಪಾರದಲ್ಲಿ ತೊಡಗಿಸಿಕೊಂಡಿದ್ದ ಆಫ್ರಿಕನ್ ಮೂಲದ ವ್ಯಕ್ತಿಯನ್ನು ನಗರ ಪೊಲೀಸರು ಬಂಧಿಸಿರುವುದಾಗಿ ತಿಳಿಸಿದರು.

ಅಲ್ಲದೇ, ಎಂಡಿಎಂಎ ತಯಾರಿಕೆಗೆ ಬಳಸಲಾದ ವಿವಿಧ ಕಚ್ಚಾ ವಸ್ತುಗಳು ಮತ್ತು ರಾಸಾಯನಿಕಗಳ ಜೊತೆಗೆ ಸುಮಾರು 10 ಕೋಟಿ ಮೌಲ್ಯದ 5 ಕೆಜಿ ಎಂಡಿಎಂಎ ಮಾದಕ ವಸ್ತುವನ್ನು ಪೊಲೀಸರು ವಶಪಡಿಸಿಕೊಂಡಿದ್ದು, ಆರೋಪಿ ಮಾದಕ ವಸ್ತು ತಯಾರಿಕೆ ಹಾಗೂ ಮಾರುಕಟ್ಟೆಯಲ್ಲಿ ಅವುಗಳನ್ನು ಮಾರಾಟ ಮಾಡಲು ಪ್ರಯೋಗಾಲಯವೊಂದನ್ನು ಸ್ಥಾಪಿಸಿಕೊಂಡಿದ್ದ ಎಂದು ಅವರು ಮಾಹಿತಿ ನೀಡಿದರು.

# ಸಿಮ್ಸ್ ಅಭಿವೃದ್ಧಿಗೆ ಅಗತ್ಯವಾದ ಪ್ರಸ್ತಾವನೆ ಸಲ್ಲಿಸಲು ವೈದ್ಯಕೀಯ ಶಿಕ್ಷಣ ಸಚಿವರ ಸೂಚನೆ

ಶಿವಮೊಗ್ಗ: ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಅಗತ್ಯವಾದ ಮೂಲಭೂತ ಸೌಕರ್ಯ, ಹುದ್ದೆ ಭರ್ತಿ, ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ ಆರ್ ಪಾಟೀಲ ಅಧಿಕಾರಿಗಳಿಗೆ ತಿಳಿಸಿದರು.

ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಚೇರಿಯಲ್ಲಿ ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು ಸಂಸ್ಥೆಯ ಅಭಿವೃದ್ಧಿಗೆ ಪೂರಕವಾಗಿ ಅಧಿಕಾರಿ/ಸಿಬ್ಬಂದಿ ಕಾರ್ಯ ನಿರ್ವಹಿಸುವಂತೆ ತಿಳಿಸಿದರು.

ರೇಡಿಯೋಲಜಿಸ್ಟ್ ಹುದ್ದೆಗೆ ಅರ್ಜಿ ಕರೆದು ನೇಮಕ ಮಾಡಬೇಕು. ಪಿಜಿ ನರ್ಸಿಂಗ್ ವಿದ್ಯಾರ್ಥಿನಿಲಯಕ್ಕೆ ಪ್ರಸ್ತಾವನೆ ಕಳುಹಿಸಿ, ಆಸ್ಪತ್ರೆಯಲ್ಲಿ ಆಂಕೋಸರ್ಜನ್, ನ್ಯೂರೋಸರ್ಜನ್, ನ್ಯೂರಾಲಜಿಸ್ಟ್ಗಳಿದ್ದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ನೇಮಕ ಮಾಡಿಕೊಂಡು ಸೇವೆ ಒದಗಿಸಲು ತಿಳಿಸಿದರು.

ಖಾಲಿ ಹುದ್ದೆ ಭರ್ತಿಗೆ ಡಿಪಿಸಿ ಸಿದ್ದಪಡಿಸಿ ಹುದ್ದೆಗಳ ಭರ್ತಿಗೆ ಕ್ರಮ ವಹಿಸಬೇಕು ಎಂದ ಅವರು ಆರೋಗ್ಯ ಇಲಾಖೆಯ ಖಾಲಿ ಹುದ್ದೆಗಳನ್ನು ಡಿಸಿ ಹಾಗೂ ಸಿಇಓ ಅರ್ಜಿ ಆಹ್ವಾನಿಸಿ ತುಂಬಲು ಸೂಚಿಸಿದರು

ಮಲೆನಾಡಿನ ಹಲವು ಪಿಹೆಚ್ಸಿಗಳಲ್ಲಿ ವೈದ್ಯರಿಲ್ಲ. ತುಮರಿ, ಬ್ಯಾಕೋಡು ಸೇರಿದಂತೆ ಸಾಗರದ ಮೂರು ಪಿಹೆಚ್ಸಿ ಯಲ್ಲಿ ವೈದ್ಯರಿಲ್ಲದೆ ತುಂಬಾ ತೊಂದರೆಯಾಗುತ್ತಿದೆ ಎಂದು ತಿಳಿದು ಬಂದಿದ್ದು, ಇಲ್ಲಿಗೆ ವೈದ್ಯರನ್ನು ನೇಮಿಸಲು ಕ್ರಮ ವಹಿಸಬೇಕು. ಹಾಗೂ ಮೆಗ್ಗಾನ್ ಆಸ್ಪತ್ರೆಯ ಖಾಲಿ ಹುದ್ದೆ ಭರ್ತಿ ಸಂಬಂಧ ಕಡತ ಸಿದ್ದಪಡಿಸಿ ಸರ್ಕಾಕ್ಕೆ ಸಲ್ಲಿಸುವಂತೆ ತಿಳಿಸಿದರು.



ಸಂಸ್ಥೆಯಲ್ಲಿ ಡಿ ಗ್ರೂಪ್ ಮತ್ತು ಸ್ಕ್ಯಾವೆಂಜರ್ ನಡುವಿನ ವೇತನ ವ್ಯತ್ಯಾಸಕ್ಕೆ ಸಂಬಂಧಿಸಿಂತೆ ಕಾರ್ಮಿಕ ಇಲಾಖೆ ಅಧಿಕಾರಿಗಳೊಂದಿಗೆ ಪರಿಶೀಲಿಸಿ ಸಮಸ್ಯೆ ಬಗೆಹರಿಸುವಂತೆ ಡಿಸಿ ಗೆ ಸೂಚನೆ ನೀಡಿದ ಅವರು ಕಾರ್ಮಿಕರ ಹಿತಾಸಕ್ತಿಯನ್ನು ಕಾಪಾಡಬೇಕು. ಅವರಿಗೆ ನಿಗದಿಯಾದ ವೇತನ ಭತ್ಯೆಗಳನ್ನು ಸರಿಯಾಗಿ ಪಾವತಿಯಾಗುತ್ತಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು ಎಂದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಮಂಜೂರಾದ ತಜ್ಞ ವೈದ್ಯರು ಸೇರಿದಂತೆ ಇತರೆ ಹುದ್ದೆಗಳನ್ನು ತುಂಬಲು ಸೂಕ್ತ ಕ್ರಮ ಕೈಗೊಳ್ಳಬೇಕು. ಹಾಗೂ ಆಸ್ಪತ್ರೆಗೆ ಅಗತ್ಯವಾದ ಉಪಕರಣ ಇತರೆ ಬೇಡಿಕೆಗಳ ಪ್ರಸ್ತಾವನೆ ಸಲ್ಲಿಸುವಂತ ತಿಳಿಸಿದರು.

ಸಿಮ್ಸ್ ಮುಖ್ಯ ಆಡಳಿತಾಧಿಕಾರಿ ಶಿವಕುಮಾರ್ ಮಾತನಾಡಿ, ಮುಖ್ಯ ಆಸ್ಪತ್ರೆಯಲ್ಲಿ 791, ಓಬಿಜಿ 304, ಪಿಡೀಯಾಟ್ರಿಕ್ 120 ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ 299 ಹಾಸಿಗೆ ಸೇರಿದಂತೆ ಒಟ್ಟು 1514 ಹಾಸಿಗೆ ಸಾಮರ್ಥ್ಯವನ್ನು ಆಸ್ಪತ್ರೆ ಹೊಂದಿದೆ. ಇದರಲ್ಲಿ 1302 ಆಕ್ಸಿಜನ್ ಬೆಡ್, 128 ಐಸಿಯು ಮತ್ತು 110 ಹೆಡಿಯು ಇದೆ.

ಮೆಗ್ಗಾನ್ ಬೋಧನಾ ಆಸ್ಪತ್ರೆಯಲ್ಲಿ ಒಟ್ಟು 333 ಶುಶ್ರೂಷಕರು ಕಾರ್ಯನಿರ್ವಹಿಸುತ್ತಿದ್ದು ಇನ್ನೂ 100 ಶುಶ್ರೂಷಕರ ಅವಶ್ಯಕತೆ ಇದೆ. ಗ್ರೂಪ್ ಎಬಿಸಿಡಿ ಯಲ್ಲಿ ಹಲವು ಹುದ್ದೆಗಳು ಖಾಲಿ ಇವೆ. ಗ್ರೂಪ್ ಸಿ ಮತ್ತು ಡಿ ನೌಕರರ ವಸತಿ ನಿಲಯಗಳ ಕೊರತೆ ಇದೆ. ಹಾಗೂ ಹೆಚ್ಚುವರಿ ಇಟಿಪಿ ಅವಶ್ಯಕತೆ ಇದೆ ಎಂದರು. ಸಚಿವರು, ಯೂಸರ್ ಚಾರ್ಜಸ್, ಎಬಿಎಆರ್ಕೆ ಮೊತ್ತಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಗುರಿ ನಿಗದಿಪಡಿಸಿಕೊಂಡು ಗುರಿ ಸಾಧಸಬೇಕು. ಡಿಎಂಇ ಯವರು ನಿಯಮಿತವಾಗಿ ಖರ್ಚುವೆಚ್ಚದ ಕುರಿತು ಪರಿಶೀಲಿಸಬೇಕು. ಓಬಿಜಿ, ಮಕ್ಕಳ ವಿಭಾಗ, ಔಷಧಿ ಖರೀದಿ ಸೇರಿದಂತೆ ಸಂಸ್ಥೆಯಲ್ಲಿ ನಡೆಯುತ್ತಿರುವ ವಿವಿಧ ಕಟ್ಟಡ ಮತ್ತಿತರೆ ಕಾಮಗಾರಿಗಳನ್ನು ಸೂಕ್ತವಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರೊಂದಿಗೆ ಮಾತನಾಡಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಮಧು ಬಂಗಾರಪ್ಪ ಮಾತನಾಡಿ, ಇಡೀ ಆಸ್ಪತ್ರೆಯ ಲೆಕ್ಕಪತ್ರವನ್ನು ಉತ್ತಮವಾಗಿ ನಿರ್ವಹಿಸಬೇಕು. ಜೊತೆಗೆ ವಾರ್ಷಿಕ ಆದಾಯದ ಕುರಿತು ಗುರಿ ನಿಗದಿಪಡಿಸಿ ಅಭಿವೃದ್ಧಿ ನಿಟ್ಟಿನಲ್ಲಿ ಕೆಲಸ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಶಾಸಕರಾದ ಬೇಳೂರು ಗೋಪಾಲಕೃಷ್ಣ, ಡಿಎಂಇ ಸುಜಾತಾ ರಾಥೋಡ್, ಜಿಲ್ಲಾಧಿಕಾರಿ ಡಾ.ಸೆಲ್ವಮಣಿ ಆರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಕುಮಾರ್, ಸಿಮ್ಸ್ ನಿರ್ದೇಶಕ ಡಾ.ವಿರೂಪಾಕ್ಷಪ್ಪ, ವೈದ್ಯಕೀಯ ಅಧೀಕ್ಷಕ ಡಾ.ತಿಮ್ಮಪ್ಪ, ಹಾಜರಿದ್ದರು.

# ಬೆಳಗಾವಿಯಲ್ಲಿ ಒನಕೆ ಓಬವ್ವ ಜಯಂತಿ ಆಚರಣೆ

## ಧೀರ ಮಹಿಳೆ ಒನಕೆ ಓಬವ್ವಳ ಧೈರ್ಯ, ಸಾಹಸಗುಣ ಮೈಗೂಡಿಸಿಕೊಳ್ಳಿ : ಸಾಹಿತಿ ಡಾ.ಸಬ್ಬರಾವ ಎಂಟೆತ್ತಿನವರ

ಬೆಳಗಾವಿ: ಒನಕೆ ಓಬವ್ವ ಚಿತ್ರದುರ್ಗ ಸಾಮ್ರಾಜ್ಯದಲ್ಲಿ ಹೈದರಾಲಿಯ ಸೈನ್ಯದೊಂದಿಗ ಏಕಾಂಗಿಯಾಗಿ ಹೋರಾಡಿದ ಒಬ್ಬ ಧೀರ ಮಹಿಳೆ. ಇಂದಿನ ಯುವ ಪೀಳಿಗೆ ಅವರ ಧೈರ್ಯ, ಸಾಹಸ ಗುಣಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಾಹಿತಿಗಳಾದ ಡಾ.ಸುಬ್ಬರಾವ ಎಂಟೆತ್ತಿನವರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಶನಿವಾರ (ನ.11) ರಂದು ಏರ್ಪಡಿಸಲಾಗಿದ್ದ ಒನಕೆ ಓಬವ್ವ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಓಬವ್ವ ಒನಕೆಯನ್ನು ಅಸ್ತ್ರವಾಗಿ ಇಟ್ಟುಕೊಂಡು



ಹೈದರಾಲಿಯ ನೂರಾರು ಸೈನಿಕರನ್ನು ಎದುರಿಸಿದ ವೀರ ಮಹಿಳೆ ಹಾಗೆಯೇ ಎಲ್ಲ ಮಹಿಳೆಯರು ಶಿಕ್ಷಣದ ಜೊತೆಗೆ ತಮ್ಮನ್ನು ರಕ್ಷಿಸಿಕೊಳ್ಳುವ ಇಚ್ಛಾಶಕ್ತಿಯನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

**ಓಬವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡಲು ಮನವಿ:** ಒನಕೆ ಓಬವ್ವನ ಸವಿನೆನಪಿಗಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರಿಗೆ ಒನಕೆ ಓಬ್ಬವ ಹೆಸರಿನಲ್ಲಿ ಪ್ರಶಸ್ತಿ ನೀಡಬೇಕು. ಎಲ್ಲ ಸರಕಾರಿ ಕಚೇರಿಗಳಲ್ಲಿ ಒನಕೆ ಓಬವ್ವ ಜಯಂತಿ ಆಚರಣೆ ಮಾಡವುದರ ಜೊತೆಗೆ ಒನಕೆ ಓಬವ್ವ ಕುರಿತು ಮುಂದಿನ ವರ್ಷದಿಂದ ವಿಚಾರ ಸಂಕೀರ್ಣ ನಡೆಸಬೇಕು ಎಂದು ಸಾಹಿತಿಗಳಾದ ಡಾ.ಸುಬ್ಬರಾವ ಎಂಟೆತ್ತಿನವರ ಅವರು ಸರಕಾರಕ್ಕೆ ಮನವಿ ಮಾಡಿದರು.

ಬೆಳಗಾವಿ ಮಹಾನಗರ ಪಾಲಿಕೆ ಮೇಯರ್ ಶೋಭಾ ಸೋಮನಾಚೆ, ಉಪಮೇಯರ್ ರೇಷ್ಮಾ ಪಾಟೀಲ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಉಪ ಆಯುಕ್ತರಾದ ಉದಯ ಕುಮಾರ್ ತಳವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಮುಖಂಡರಾದ ಮಲ್ಲೇಶ ಚೌಗಲೆ, ವಿವೇಕ ಕರ್ಪೆ ಮಲ್ಲಿಕಾರ್ಜುನ ರಾಶಿಂಗೆ, ಮಹದೇವ ತಳವಾರ ಮತ್ತಿತರರು ಉಪಸ್ಥಿತರಿದ್ದರು.

# ಬೆಂಗಳೂರು ಉತ್ತರಕ್ಕೆ ಸುಮಲತಾ ಬಂದರೆ ಸ್ವಾಗತ: ಸದಾನಂದಗೌಡ



ಬೆಂಗಳೂರು: ಇಲ್ಲಿನ ಉತ್ತರ ಲೋಕಸಭಾ ಕ್ಷೇತ್ರಕ್ಕೆ ಮಂಡ್ಯ ಸಂಸದೆ ಸುಮಲತಾ ಅಂಬರೀಶ್ ಬಂದರೆ ಸ್ವಾಗತ ಮಾಡ್ತೀನಿ. ಸುಮಲತಾ ಸೇರಿದಂತೆ ಯಾರೇ ಬೆಂಗಳೂರು ಉತ್ತರದ ಅಭ್ಯರ್ಥಿಯಾದರೂ ಅವರ ಪರ ಸಂತೋಷವಾಗಿ ಕೆಲಸ ಮಾಡ್ತೀನಿ ಅಂತ ಮಾಜಿ ಸಿಎಂ, ಸಂಸದ ಸದಾನಂದಗೌಡ ಸ್ಪಷ್ಟಪಡಿಸಿದ್ದಾರೆ.

ಚುನಾವಣೆ ರಾಜಕೀಯ ನಿವೃತ್ತಿ ಕುರಿತು ಮಾತಾನಾಡಿದ ಅವರು, ಚುನಾವಣೆ ರಾಜಕೀಯದಿಂದ ನಿವೃತ್ತಿ ಘೋಷಣೆ ಮಾಡುವ ನಿರ್ಧಾರ ನನ್ನ ಸ್ವಂತ ನಿರ್ಧಾರ ಯಾರು ನನ್ನ ಮೇಲೆ ಒತ್ತಡ ಹಾಕಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ನನ್ನ ಚುನಾವಣೆ ರಾಜಕೀಯ ನಿವೃತ್ತಿ ದಿಢೀರ್ ನಿರ್ಧಾರ ಅಲ್ಲ. ಕಳೆದ ಚುನಾವಣೆಯಲ್ಲಿಯೇ ನಿವೃತ್ತಿ ಘೋಷಣೆ ಮಾಡಿದ್ದೆ. ಅದರಂತೆ ಪಕ್ಷಕ್ಕಾಗಿ ನಿವೃತ್ತಿ ಘೋಷಣೆ ಮಾಡಿದ್ದೇನೆ. ಯುವಕರಿಗೆ ಅವಕಾಶ ಕೊಡುವ ನಿಟ್ಟಿನಲ್ಲಿ ನಿವೃತ್ತಿ ಘೋಷಣೆ ಮಾಡಿದ್ದೇನೆ. ಇನ್ಮುಂದೆ ಪಕ್ಷದ ಕೆಲಸ ಮಾಡಿಕೊಂಡು ಇರುತ್ತೇನೆ ಎಂದರು. ಕೇಂದ್ರದ ವರಿಷ್ಠರ ಮೇಲೆ ಕೋಪಕ್ಕೆ ನಿವೃತ್ತಿ ಘೋಷಣೆ ನಿರ್ಧಾರ ಮಾಡಿಲ್ಲ. ಯಾರು ನಿವೃತ್ತಿ ಘೋಷಣೆ ಮಾಡಿ ಅಂತ ನನ್ನ ಮೇಲೆ ಒತ್ತಡ ಹಾಕಿಲ್ಲ. ಇದು ನನ್ನ ಸ್ವತಂತ್ರ ನಿರ್ಧಾರ. ಮತ್ತೆ ಹೈಕಮಾಂಡ್ ಸ್ಪರ್ಧೆ ಮಾಡಿ ಅಂದರೂ ನಾನು ಮಾಡಲ್ಲ. ನನ್ನ ನಿರ್ಧಾರ ವಾಪಸ್ ಪಡೆಯೊಲ್ಲ ಎಂದು ಹೇಳಿದರು. ವರಿಷ್ಠರು ರಾಜ್ಯಾಧ್ಯಕ್ಷ, ವಿಪಕ್ಷ ಸ್ಥಾನ ಆಯ್ಕೆ ಮಾಡಬೇಕಿತ್ತು. ಕೇಂದ್ರದ ನಾಯಕರು ಇದನ್ನ ಮಾಡಿಲ್ಲ ಅನ್ನೋ ನೋವಿದೆ ಅಂತ ವರಿಷ್ಠರ ಮೇಲೆ ಅಸಮಾಧಾನ ಮುಂದುವರೆಸಿದರು. ಇನ್ನೂ ಖಾಲಿ ಆಗೋ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರಕ್ಕೆ ಮಂಡ್ಯ ಸಂಸದೆ ಸುಮಲತಾ ಅಂಬರೀಶ್ ಬಂದರೆ ಸ್ವಾಗತ ಮಾಡ್ತೀನಿ. ಸುಮಲತಾ ಸೇರಿದಂತೆ ಯಾರೇ ಬೆಂಗಳೂರು ಉತ್ತರದ ಅಭ್ಯರ್ಥಿ ಆದರೂ ಅವರ ಪರ ಸಂತೋಷವಾಗಿ ಕೆಲಸ ಮಾಡ್ತೀನಿ ಅಂತ ತಿಳಿಸಿದರು.

# ಇಂದಿರಾ ಫುಡ್ಸ್ ರಸಂ ಪೇಸ್ಟ್ ನ ಬಿಡುಗಡೆ

ಹುಬ್ಬಳ್ಳಿ: 'ರೆಡಿ ಟು ಈಟ್' ರಾಗಿ ಉತ್ಪನ್ನಗಳು, ವಿವಿಧ ಪೇಸ್ಟ್ಗಳು ಮತ್ತು ಭಾರತೀಯ ನೈಸರ್ಗಿಕ ಮಸಾಲೆಗಳನ್ನು ಬಳಸಿ, ಯಾವುದೇ ಅಡಿಕ್ಟಿವ್ಗಳನ್ನು ಹಾಕದೆ ತಯಾರಿಸಿದ ಆಹಾರೋತ್ಪನ್ನಗಳಿಗೆ ಹೆಸರುವಾಸಿಯಾದ ಸ್ವದೇಶಿ ಕಂಪನಿಯಾದ ಇಂದಿರಾ ಫುಡ್ಸ್, ತನ್ನ ಮಹತ್ವಾಕಾಂಕ್ಷೆಯ ವಿಸ್ತರಣಾ ಯೋಜನೆಗಳನ್ನು ಪ್ರಕಟಿಸಿದೆ.

ಇದರ ಹಲವು ಯೋಜನೆಗಳಲ್ಲಿ ರಸಂ ಪೇಸ್ಟ್ನ ಬಿಡುಗಡೆ ಮತ್ತು ಮಾರುಕಟ್ಟೆಯನ್ನು ಆಕ್ರಮಿಸಿಕೊಳ್ಳಲು ಹೊಸ ಉತ್ಪನ್ನಗಳ ಸಾಲುಗಳನ್ನು ಬಿಡುಗಡೆಗೊಳಿಸಲು ಕಂಪನಿ ಯೋಜಿಸಿದೆ.

ಕಂಪನಿಯು ಉದ್ಯಮದ ಅನುಭವಿ, ತನ್ನ ಚಾಣಾಕ್ಷತನದಿಂದ ಹಲವು ಕಂಪನಿಗಳ ಅದೃಷ್ಟವನ್ನೇ ಬದಲಿಸಿದ ಉಲ್ಲಾಸ್ ಕಾಮತ್ ಅವರನ್ನೂ ಮಂಡಳಿಯಲ್ಲಿ ಸಲಹೆಗಾರರಾಗಿ ಸೆಳೆದುಕೊಂಡಿದೆ. ಹೊಸ ಉತ್ಪನ್ನ ಶ್ರೇಣಿ ಮತ್ತು ಕಂಪನಿಯನ್ನು ಮುಂದೆ ನಿಂತು ನಡೆಸಬಲ್ಲ ಅನುಭವೀ ತಂಡ, 25 ಕೋಟಿ ರೂಪಾಯಿಗಳ ಹೂಡಿಕೆಯೊಂದಿಗೆ ಕರ್ನಾಟಕದ ಮಂಡ್ಯ




ಜಿಲ್ಲೆಯಲ್ಲಿ 1.2 ಲಕ್ಷ ಚದರ ಅಡಿ ಉತ್ಪಾದನಾ ಸೌಲಭ್ಯವೂ ಸೇರಿಕೊಳ್ಳುತ್ತಿದೆ. ಸಣ್ಣ ಗ್ಯಾರೇಜ್ನಿಂದ ಉದ್ಯಮವನ್ನು ಪ್ರಾರಂಭಿಸಿದ ಇಂದಿರಾ ಅವರೊಂದಿಗೆ ಮಹಿಳಾ ಉದ್ಯಮಶೀಲತೆಗೆ ಬ್ರ್ಯಾಂಡ್ ಸಾಕ್ಷಿಯಾಗಿದೆ. ಇಂದಿರಾ ಫುಡ್ಸ್ ತನ್ನ ಹೆಸರಿಗೆ ಅನೇಕ ಪ್ರಥಮಗಳನ್ನು ಹೊಂದಿದೆ. 1990ರ ದಶಕದಲ್ಲಿ ರಾಗಿ ಉತ್ಪನ್ನಗಳನ್ನು ತಯಾರಿಸುವ ಯಾವುದೇ ಬ್ರ್ಯಾಂಡ್ಗಳು ಇಲ್ಲದಿದ್ದಾಗ ಆಧುನಿಕ ಅನುಕೂಲದೊಂದಿಗೆ ರಾಗಿ ಉತ್ಪನ್ನಗಳನ್ನು ಪ್ರಾರಂಭಿಸಿತು. ಇದು ದೇಶದಲ್ಲಿ 100% ನೈಸರ್ಗಿಕ ಹುಣಸೆ ಸಾಂದ್ರಣದ ಅತಿದೊಡ್ಡ ರಫ್ತುದಾರವಾಗಿದೆ. ಇಂದಿರಾ ಫುಡ್ಸ್ 100% ನೈಸರ್ಗಿಕ ಟೊಮೆಟೊ ಪೇಸ್ಟ್ ಮತ್ತು ದಪ್ಪ ಮತ್ತು ರುಚಿಕರವಾದ ಕೆಚಪ್ ಅನ್ನು ಸ್ಪೌಟ್ ಪೌಚ್ ಗಳಲ್ಲಿ ಪರಿಚಯಿಸಿದ ಮೊದಲ ಮತ್ತು ಏಕೈಕ ಕಂಪನಿಯಾಗಿದೆ. ದೇಶೀಯ ಮಾರುಕಟ್ಟೆಗಳಲ್ಲಿ ಚೆನ್ನಾಗಿ ಮುಳುಗಿರುವುದರಿಂದ ವಿದೇಶದಲ್ಲಿ ದೊಡ್ಡ ಮಾರುಕಟ್ಟೆಯನ್ನು ಹೊಂದಿರುವ ಕೆಲವೇ ಕಂಪನಿಗಳಲ್ಲಿ ಇದು ಒಂದಾಗಿದೆ. ಶೂನ್ಯ ಸಾಲಗಳು ಮತ್ತು ವರ್ಷದಿಂದ ವರ್ಷಕ್ಕೆ ಬೆಳವಣಿಗೆ ಕಾಣುತ್ತಿರುವ ಅತ್ಯಂತ ಸ್ಪಂದಿಸುವ ಮಾರುಕಟ್ಟೆಯೊಂದಿಗೆ, ಕಂಪನಿಯು ಎಫ್ಎಂಸಿಜಿ ಮಾರುಕಟ್ಟೆಯಲ್ಲಿ, ವಿಶೇಷವಾಗಿ ಭಾರತೀಯ ರೆಡಿ-ಟು-ಕುಕ್ ಉತ್ಪನ್ನ ಸಾಲಿನಲ್ಲಿ ಹೊಸ ಅಲೆ ಸೃಷ್ಟಿಸಲು ಸಜ್ಜಾಗಿದೆ. ಕಂಪನಿಯು ಪ್ರಸ್ತುತ ತನ್ನ ಉತ್ಪನ್ನಗಳನ್ನು ಕರ್ನಾಟಕದಲ್ಲಿ ಮಾರಾಟ ಮಾಡುತ್ತಿದೆ ಮತ್ತು ಮುಂದಿನ ದಿನಗಳಲ್ಲಿ ಹೆಚ್ಚಿನ ರಾಜ್ಯಗಳಿಗೆ ವಿಸ್ತರಿಸಲು ಯೋಜಿಸಿದೆ. ಪ್ರಶಸ್ತಿ ವಿಜೇತ ಕನ್ನಡ ನಟ ಮತ್ತು ಇಂದಿರಾ ಫುಡ್ಸ್ನ ಬ್ರ್ಯಾಂಡ್ ಅಂಬಾಸಿಡರ್ ಸತೀಶ್ ನೀನಾಸಂ ಮಾತನಾಡಿ, "ಭಾರತದ ಸಾಂಪ್ರದಾಯಿಕ ಕಂಪನಿಗಳಲ್ಲಿ ಒಂದಾದ ಇಂದಿರಾ ಫುಡ್ನೊಂದಿಗೆ ಸಂಬಂಧ ಹೊಂದಲು ನನಗೆ ಸಂತಸವಾಗುತ್ತಿದೆ. ನಾನು ಎಲ್ಲಿಂದ ಬಂದೆನೋ ಅಲ್ಲಿ ಅವರ ಹೊಸ ಘಟಕ ನಿರ್ಮಾಣವಾಗುತ್ತಿದೆ ಮತ್ತು ಉತ್ಪನ್ನದ ಹೂಗುಚ್ಛವು ಇಲ್ಲಿನ ಮಣ್ಣಿನೊಂದಿಗೆ ಅನುರಣಿಸುತ್ತದೆ. ಕಂಪನಿಯು ತನ್ನ ಬೆಳವಣಿಗೆ ಮತ್ತು ಯಶಸ್ಸಿನ ಪ್ರಯಾಣದಲ್ಲಿ ಹೊಸ ಅಧ್ಯಾಯ ಪ್ರಾರಂಭಿಸುತ್ತಿರುವುದರಿಂದ ಅವರೊಂದಿಗೆ ಕೆಲಸ ಮಾಡಲು ನಾನು ಎದುರು ನೋಡುತ್ತಿದ್ದೇನೆ," ಎಂದು ಅಭಿಪ್ರಾಯಪಟ್ಟರು.

ಪ್ರಸ್ತುತ, ಇಂದಿರಾ ಫುಡ್ ಪ್ರೈವೇಟ್ ಲಿಮಿಟೆಡ್ ನಾಲ್ಕು ಉತ್ಪನ್ನ ವಿಭಾಗಗಳಲ್ಲಿ ತನ್ನ ವ್ಯವಹಾರವನ್ನು ನಡೆಸುತ್ತಿದೆ: ರಾಗಿ ಉತ್ಪನ್ನಗಳು, ಹುಣಸೆ ಸಾಂದ್ರಣ ಮತ್ತು ಟೊಮೆಟೊ ಪೇಸ್ಟ್ಗಳು, ಇನ್ಸ್ಟಂಟ್ ರಸಂ ಪೇಸ್ಟ್ಗಳು, ಕೆಚಪ್, ಜಾಮ್ ಮತ್ತು ಉಪ್ಪಿನಕಾಯಿ. ಇಂದಿರಾ ಫುಡ್ಸ್ ಇದೀಗ ಇಂದಿರಾಸ್, ಸ್ಪಿಟ್ಜ್ ಮತ್ತು ಪಿಂಗಾಣಿಗಳೆಂಬ 3 ಬ್ರ್ಯಾಂಡ್ಗಳನ್ನು ಹೊಂದಿದೆ. ಯುಎಸ್, ಯುಕೆ, ನೆದರ್ಲ್ಯಾಂಡ್ಸ್, ಜರ್ಮನಿ, ನ್ಯೂಜಿಲೆಂಡ್ ಮತ್ತು ಮಧ್ಯಪ್ರಾಚ್ಯದಂತಹ ದೇಶಗಳಿಗೆ ಬೃಹತ್ ಉತ್ಪನ್ನಗಳು ಮತ್ತು ಸ್ವಂತಾ-ಬ್ರ್ಯಾಂಡ್ ಉತ್ಪನ್ನಗಳನ್ನು ರಫ್ತು ಮಾಡುತ್ತದೆ. ಪ್ರಸ್ತುತ ಎಲ್ಲಾ ಉತ್ಪನ್ನಗಳನ್ನು ಬೆಂಗಳೂರಿನ ಹೊರವಲಯದಲ್ಲಿರುವ ಯಲಚೇನಹಳ್ಳಿ ಮತ್ತು ಜಿಗಣಿಯಲ್ಲಿರುವ ಎರಡು ಅತ್ಯಾಧುನಿಕ ಘಟಕಗಳಲ್ಲಿ ತಯಾರಿಸಲಾಗುತ್ತದೆ.

# ಸಾರ್ವಜನಿಕರ ಮೇಲೆ ಪುಂಡರ ದಾಳಿ: ಪೊಲೀಸ್ ಮೇಲೆ ಹಲ್ಲೆ



ತುಮಕೂರು: ವಾಯು ವಿಹಾರ ನಡೆಸುತ್ತಿದ್ದ ಸಾರ್ವಜನಿಕರ ಮೇಲೆ ಶುಕ್ರವಾರ ರಾತ್ರಿ ಪುಂಡರ ಗುಂಪು ಹಲ್ಲೆ ನಡೆಸಿದ್ದು, ಓರ್ವ ಆರೋಪಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ನಗರದ ಪಿ.ಎಚ್ ಕಾಲೋನಿಯಲ್ಲಿ ಘಟನೆ ಸಂಭವಿಸಿದ್ದು, ಸಾಜಿದ್ ಎಂಬಾತನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಇಲ್ಲಿನ ಅಜಾದ್ ಪಾರ್ಕ'ನಲ್ಲಿ ಮಹಮ್ಮದ್ ರಫೀಕ್ ಎಂಬುವವರು ವಾಯು ವಿಹಾರ ನಡೆಸುತ್ತಿದ್ದರು, ಈ ವೇಳೆ ಆರೋಪಿ ಸಾಜಿದ್ ಮತ್ತಿತರರು ಏಕಾಏಕಿ ಬ್ಲೇಡ್'ನಿಂದ ಹಲ್ಲೆ ನಡೆಸಿದ್ದಾರೆ. ಕೂಡಲೇ ಎಚ್ಚೆತ್ತ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಸ್ಥಳಕ್ಕೆ ಬಂದ ತಿಲಕ್ ಪಾರ್ಕ್ ಠಾಣೆ ಪೊಲೀಸರು ಆರೋಪಿಗಳನ್ನು ಸೆರೆ ಹಿಡಿಯಲು ಮುಂದಾಗಿದ್ದು, ಸಾಜಿದ್ ಎಂಬಾತ ಪೊಲೀಸರ ಮೇಲೆಯೇ ಹಲ್ಲೆಗೆ ಯತ್ನಿಸಿದ್ದಾನೆ. ಬಳಿಕ ಪೊಲೀಸರು ಆತನಿಗೆ ಲಾಠಿ ರುಚಿ ತೋರಿಸಿ ಬಳಿಕ ಬಂಧಿಸಿದ್ದಾರೆ.

ಹೆಚ್ಚಾದ ಪುಂಡರ ಹಾವಳಿ: ನಗರದಲ್ಲಿ ದಿನೇದಿನೆ ಪುಂಡರ ಹಾವಳಿ ಹೆಚ್ಚಾಗುತ್ತಿದ್ದು, ಸಾರ್ವಜನಿಕ ಶಾಂತಿಗೆ ಭಂಗವುಂಟಾಗುತ್ತಿದೆ. ಪೊಲೀಸರು ಪುಂಡರ ಹಾವಳಿ ನಿಯಂತ್ರಕ್ಕೆ ಮುಂದಾಗುವಂತೆ ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಚಿನ್ನಭಾರಣ ಸಾಗಾಣೆ: ಐವರ ಬಂಧನ



ಬೆಂಗಳೂರು: ಮಾತ್ರೆ ಹಾಗೂ ಒಳ ಉಡುಪಿನಲ್ಲಿ ಚಿನ್ನಭಾರಣ ಕಳ್ಳಸಾಗಣೆ ಮಾಡುತ್ತಿದ್ದ ಐವರನ್ನು ಬೆಂಗಳೂರು ವಿಮಾನ ನಿಲ್ದಾಣದ ಏರ್ ಕಸ್ಟಮ್ಸ್ ಅಧಿಕಾರಿಗಳು ಬಂಧಿಸಿದ್ದಾರೆ.

ಬಂಧಿತರಿಂದ 3.9 ಕೋಟಿ ರೂ. ಮೌಲ್ಯದ 5.135 ಕೆಜಿ ಚಿನ್ನವನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಎರಡು ದಿನದಲ್ಲಿ ಕುವೈತ್, ದುಬೈ, ಶಾರ್ಜಾ, ಮತ್ತು ಬ್ಯಾಂಕಾಕ್ನಿಂದ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿದ್ದರು. ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಕಳ್ಳ ಸಾಗಾಣಿಕೆ ಮಾಡುತ್ತಿರುವುದು ಪತ್ತೆಯಾಗಿದೆ.

ಆರೋಪಿಗಳು ಮಾತ್ರೆಗಳಲ್ಲಿ, ಒಳ ಉಡುಪು ಹಾಗೂ ಮಹಿಳೆಯರ ಪರ್ಸ್ಗಳಲ್ಲಿ ಅಕ್ರಮವಾಗಿ ಚಿನ್ನ ಸಾಗಾಟ ಮಾಡುತ್ತಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಮತದಾರರ ಪಟ್ಟಿಗಳ ಆಕ್ಷೇಪಣೆ: ದೂರವಾಣಿ ಮೂಲಕ ಸಲ್ಲಿಸಲು ಕೋರಿಕೆ

ಬೆಳಗಾವಿ: ಭಾರತ ಚುನಾವಣಾ ಆಯೋಗ ನವದೆಹಲಿ ಇವರು ಬೆಳಗಾವಿ ಜಿಲ್ಲೆಯ ಮತದಾರರ ಪಟ್ಟಿಗಳ ವೀಕ್ಷಕರಾಗಿ ಬೆಂಗಳೂರು ಮೆಟ್ರೋ ರೈಲ್ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಅಂಜುಂ ಪರ್ವೇಜ್ ಅವರನ್ನು ನಿಯೋಜಿಸಲಾಗಿದೆ.

ಆದಕಾರಣ ಬೆಳಗಾವಿ ಜಿಲ್ಲೆಗೆ ಸಂಬಂಧಿಸಿದಂತೆ, ಮತದಾರರ ಪಟ್ಟಿಗಳ ಕುರಿತು ಯಾವುದೇ ತಕರಾರು/ದೂರುಗಳಿದ್ದಲ್ಲಿ ಸಾರ್ವಜನಿಕರು ತಮ್ಮ ಆಕ್ಷೇಪಣೆ/ಸಲಹೆಯನ್ನು ಅವರ ಮೊಬೈಲ್ ಸಂಖ್ಯೆ 9448378644 ಗೆ ಕರೆ ಮಾಡಿ ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಇಎ ಪರೀಕ್ಷಾ ಅಕ್ರಮ; ತನಿಖೆ ಸಿಐಡಿ ಗೆ ಹಸ್ತಾಂತರ

ಬೆಂಗಳೂರು: ಕೆಇಎ ಪರೀಕ್ಷಾ ಅಕ್ರಮ ಪ್ರಕರಣದ ತನಿಖೆಯನ್ನು ರಾಜ್ಯ ಸರ್ಕಾರ ಸಿಐಡಿಗೆ ಹಸ್ತಾಂತರ ಮಾಡಿದೆ.

ಕೆಇಎ ಪರೀಕ್ಷಾ ಅಕ್ರಮದ ಬಗ್ಗೆ ಯಾದಗಿರಿ ಪೊಲೀಸ್ ಠಾಣೆಯಲ್ಲಿ ಐದು ಪ್ರಕರಣಗಳು ದಾಖಲಾಗಿದ್ದವು. ಗೃಹ ಇಲಾಖೆ ಸೂಚನೆ ಮೇರೆಗೆ ಪ್ರಕರಣದ ತನಿಖೆಯನ್ನು ಸಿಐಡಿಗೆ ಹಸ್ತಾಂತರ ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್ಹಿತೇಂದ್ರ ಸಿಐಡಿ ತನಿಖಾಧಿಕಾರಿಗಳಿಗೆ ಪ್ರಕರಣದ ಕಡತಗಳನ್ನು ಹಸ್ತಾಂತರ ಮಾಡಿದರು.

# ವಸತಿ ಶಾಲೆಯ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ; ನರ್ಸ್ ಸೇರಿದಂತೆ ಮೂವರು ಅರೆಸ್ಟ್



ಚಿಕ್ಕಮಗಳೂರು: ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ಕುಪ್ಪಾಳು ಮೊರಾರ್ಜಿ ವಸತಿ ಶಾಲೆಯ ಅಪ್ರಾಪ್ತ ಬಾಲಕಿಯರನ್ನು ಲೈಂಗಿಕವಾಗಿ ಬಳಸಿಕೊಂಡ ಆರೋಪದ ಮೇಲೆ ಮೂವರನ್ನು ಪೊಲೀಸರು ಅರೆಸ್ಟ್ ಮಾಡಿದ ಘಟನೆ ನಡೆದಿದೆ.

ಬಂಧಿತರು ಆರೋಗ್ಯ ಇಲಾಖೆಯಲ್ಲಿ ಎಎನ್ಎಂ ನರ್ಸ್ ಆಗಿರುವ ಚಂದನಾ (26), ವಸತಿ ಶಾಲೆಯ ಡಿ. ದರ್ಜೆ ನೌಕರ ಸುರೇಶ್ (35) ಹಾಗೂ ವಿನಯ್ ಕುಮಾರ್ (27) ಎಂದು ತಿಳಿದುಬಂದಿದೆ.


ವಸತಿ ಶಾಲೆಯ ಸುರೇಶ್ ಮಕ್ಕಳ ಪೋಷಕರನ್ನು ಕರೆದು ನಿಮ್ಮ ಮಗಳಿಗೆ ನರ್ಸ್ ಟ್ರೈನಿಂಗ್ ಇದೆ. ಅದನ್ನು ಮುಗಿಸಿದರೆ ಮುಂದೆ ಬಹಳ ಸಹಾಯವಾಗುತ್ತದೆ ಹಾಗೂ ಸುಲಭವಾಗಿ ಕೆಲಸ ದೊರಕುತ್ತದೆ ಎಂದು ನಂಬಿಸುತ್ತಿದ್ದ. ಬಳಿಕ ವಿದ್ಯಾರ್ಥಿನಿಯರನ್ನು ಚಂದನಾ ಬಳಿ ಕಳಿಸುತ್ತಿದ್ದ.

ಚಂದನಾ ಆರೋಗ್ಯ ಕೇಂದ್ರಕ್ಕೆ ಬರುವ ವಿದ್ಯಾರ್ಥಿನಿಯರನ್ನು ತನ್ನ ಬಳಿ ಉಳಿಸಿಕೊಳ್ಳುತ್ತಿದ್ದಳು. ಬಳಿಕ ಕಾಫಿ, ಟೀಯಲ್ಲಿ ಮತ್ತು ಬರುವ ಔಷಧಿ ಬೆರೆಸಿ ವಿದ್ಯಾರ್ಥಿನಿಯರಿಗೆ ಕೊಡುತ್ತಿದ್ದಳು.

ಅರೆಪ್ರಜ್ಞಾವಸ್ಥೆಯಲ್ಲಿರುತ್ತಿದ್ದ ಮಕ್ಕಳ ಮೇಲೆ ಚಂದನಾ ಲವರ್ ವಿನಯ್ ಲೈಂಗಿಕ ದೌರ್ಜನ್ಯ ಎಸಗುತ್ತಿದ್ದ ಎಂದು ಪೊಲೀಸರ ತನಿಖೆ ವೇಳೆ ತಿಳಿದುಬಂದಿದೆ.

ಮೂವರು ಆರೋಪಿಗಳ ವಿರುದ್ಧ ಕಡೂರು ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಪ್ರಕರಣ ದಾಖಲಾಗಿದೆ.

# ಟಿಪ್ಪು ಸೇರಿದಂತೆ ಮುಸ್ಲಿಂ ರಾಜರಿಗೆ ಅವಮಾನ



ಬೆಳಗಾವಿ: ಟಿಪ್ಪು ಸುಲ್ತಾನ್ ಸೇರಿದಂತೆ ಮುಸ್ಲಿಂ ರಾಜರನ್ನು ಅವಮಾನಿಸುವ ರೀತಿ ವಾಟ್ಸಾಪ್ ಸ್ಟೇಟಸ್ ಹಾಗೂ ಬ್ಯಾನರ್ ಅಳವಡಿಕೆ ಮಾಡಲಾಗಿದ್ದು ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.

ಸ್ಥಳದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಮುಂಜಾಗೃತ ಕ್ರಮವಾಗಿ ಬಿಗಿ ಬಂದೋಬಸ್ತ್ ಕೈಗೊಂಡಿದ್ದಾರೆ. ಬೆಳಗಾವಿ ಜಿಲ್ಲೆ ಚಿಕ್ಕೋಡಿಯ ಹೊಸಪೇಟೆ ಗಲ್ಲಿಯಲ್ಲಿ ಕೆಲವರು ಟಿಪ್ಪು ಸುಲ್ತಾನ್ ಸೇರಿದಂತೆ ಮುಸ್ಲಿಂ ರಾಜರನ್ನು ಅವಮಾನಿಸುವ ರೀತಿ ವಾಟ್ಸಾಪ್ ಸ್ಟೇಟಸ್ ಇಟ್ಟಿದ್ದರು. ಹಾಗೂ ಬ್ಯಾನರ್ ಹಾಕಿದ್ದರು. ವಿಚಾರ ಭಾರೀ ಆಕ್ರೋಶಕ್ಕೆ ಕಾರಣವಾಗಿದ್ದು ಬಿಗುವಿನ ವಾತಾವರಣ ನಿರ್ಮಾಣವಾಗಿದೆ. ಈ ಹಿನ್ನೆಲೆ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

ಇನ್ನು ಮತ್ತೊಂದೆಡೆ ವಾಟ್ಸಪ್ ಸ್ಟೇಟಸ್ ಇಟ್ಟವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಒಂದು ಸಮುದಾಯದ ಜನ ಜಮಾಯಿಸಿದ್ದರು. ಇದೇ ವೇಳೆ ಅಖಂಡ ಭಾರತ ಹೆಸರಿನಡಿ ಭೂಪಟದ ಬ್ಯಾನರ್ ಅಳವಡಿಕೆಗೆ ಕೆಲವರು ಆಕ್ಷೇಪ ವ್ಯಕ್ತಪಡಿಸಿದರು. 'ಅಖಂಡ ಭಾರತ್ ಸಪ್ನಾ ಹೈ ಆಫ್ಘಾನಿಸ್ತಾನ್ ತಕ್ ಅಪ್ನಾ ಹೈ' ಅಖಂಡ ಭಾರತ ಹೆಸರಿನ ಬ್ಯಾನರ್ ಗೆ ಕೆಲವರು ಆಕ್ರೋಶ ಹೊರ ಹಾಕಿದರು.

ಸದ್ಯ ಘಟನಾ ಸ್ಥಳಕ್ಕೆ ಚಿಕ್ಕೋಡಿ ಡಿವೈಎಸ್ಪಿ ಸಿ.ಬಿ ಗೌಡರ, ಸಿಪಿಐ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವಿವಾದಿತ ವಾಟ್ಸಪ್ ಸ್ಟೇಟಸ್ ಹಾಕಿದ್ದವನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಚಿಕ್ಕೋಡಿಯ ಹೊಸಪೇಟೆ ಗಲ್ಲಿಯಲ್ಲಿ 50 ಕ್ಕೂ ಹೆಚ್ಚು ಪೊಲೀಸರಿಂದ ಭದ್ರತೆ ನೀಡಲಾಗಿದೆ. ಅಖಂಡ ಭಾರತ ಹೆಸರಿನಡಿ ಭೂಪಟದ ಬ್ಯಾನರ್ ಅಳವಡಿಸಿದ ಸ್ಥಳದಲ್ಲೂ ಭದ್ರತೆ ನೀಡಲಾಗಿದೆ.

ಗಡಿ ಭಾಗದಲ್ಲಿ ದೀಪಾವಳಿ ನಿಮಿತ್ಯ ನಿರ್ಮಿಸುವ ಕೋಟೆ ಮಾದರಿ ಬಳಿ ಬ್ಯಾನರ್ ಅಳವಡಿಸಲಾಗಿತ್ತು. ಬ್ಯಾನರ್ ಅಳವಡಿಸಿರುವ ಸ್ಥಳದಲ್ಲೂ ಪೊಲೀಸ್ ಬಿಗಿ ಬಂದೋಬಸ್ತ್ ನಿಯೋಜಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆದಂತೆ ಪೊಲೀಸರಿಂದ ಮುಂಜಾಗ್ರತ ಕ್ರಮ ಕೈಗೊಳ್ಳಲಾಗಿದೆ ಘಟನೆ ಕುರಿತಂತೆ ಚಿಕ್ಕೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

# ನಟ ದರ್ಶನ್ ಗೆ ನೋಟಿಸ್ ಜಾರಿ ಮಾಡಿದ ಪೊಲೀಸರು

ಬೆಂಗಳೂರು: ಸ್ಯಾಂಡಲ್ ವುಡ್ ಹೆಸರಾಂತ ನಟ ದರ್ಶನ್ ಮನೆಯ ನಾಯಿ ಮಹಿಳೆಗೆ ಕಚ್ಚಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಗೆ ಬೆಂಗಳೂರಿನ ಆರ್ ಆರ್ ನಗರ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ.

ಮೂರು ದಿನದ ಒಳಗೆ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ಪೊಲೀಸರು ತಿಳಿಸಿದ್ದಾರೆ. ಈಗಾಗಲೇ ನಾಯಿಯ ಕೇರ್ ಟೇಕರ್ ಹೇಮಂತ್ ಅವರ ವಿಚಾರಣೆ ಮಾಡಿರುವ ಪೊಲೀಸರು, ನಂತರ ದರ್ಶನ್ ಅವರಿಗೆ ನೋಟಿಸ್ ಜಾರಿ ಮಾಡಿದ್ದಾರೆ.

ಏನಿದು ಪ್ರಕರಣ? ಈ ಹಿಂದೆ ದರ್ಶನ್ ವಿರುದ್ಧ ಆರ್ಆರ್ ನಗರದ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ದರ್ಶನ್ ಮನೆಯ ನಾಯಿಗಳು ಮಹಿಳೆಯೊಬ್ಬರ ಮೇಲೆ ಎರಗಿ ಕಚ್ಚಿದ ಸಂಬಂಧ ಐಪಿಸಿ 289ರ ಅಡಿ ನಾಯಿ (ಆರಂ) ನೋಡಿಕೊಳ್ಳುತ್ತಿದ್ದವನ ಮೇಲೆ ಮತ್ತು ನಟ ದರ್ಶನ್ ವಿರುದ್ಧ ಕೇಸ್



ದಾಖಲಾಗಿತ್ತು.

ಈ ಬಗ್ಗೆ ಸ್ವತಃ ದೂರು ದಾರರಾದ ಅಮಿತಾ ಜಿಂದಾಲ್ ಪ್ರತಿಕ್ರಿಯೆ ನೀಡಿದ್ದರು. ಆರ್ಆರ್ ನಗರದಲ್ಲಿ ಆಸ್ಪತ್ರೆ ಕಾರ್ಯಕ್ರಮವೊಂದಕ್ಕೆ ಆಗಮಿಸಿದ್ದೆ. ದರ್ಶನ್ ಮನೆಯ ಬಳಿ ಖಾಲಿ ಜಾಗದಲ್ಲಿ ಕಾರನ್ನು ಪಾರ್ಕ್ ಮಾಡಿದ್ದು, ಕಾರ್ಯಕ್ರಮ ಮುಗಿಸಿ ಮರಳಿ ಬಂದಾಗ ಕಾರು ನಿಲ್ಲಿಸಿದ್ದ ಜಾಗದಲ್ಲಿ ಮೂರು ನಾಯಿಗಳು ಇದ್ದವು. ದರ್ಶನ್ರ ಮನೆ ಸಿಬ್ಬಂದಿಗೆ ನಾಯಿಗಳನ್ನು ಪಕ್ಕಕ್ಕೆ ಕರೆದುಕೊಳ್ಳುವಂತೆ ಕೇಳಿದೆ, ಆಗ ಈ ಜಾಗದಲ್ಲಿ ನೀವು ಕಾರು ಪಾರ್ಕ್ ಮಾಡುವಂತಿಲ್ಲ ಎಂದು ಸಿಬ್ಬಂದಿ ಹೇಳಿದ್ದರು ಎಂದು ಅಮಿತಾ ಮಾತನಾಡಿದ್ದರು.

ಮಾತಿನ ಚಕಮಕಿಯ ಬಳಿಕ ನಾಯಿಗಳು ತನ್ನ ಮೇಲೆ ದಾಳಿ ನಡೆಸಿ ಹೊಟ್ಟೆ ಹಾಗೂ ಕೈಗೆ ಕಡಿದು ಗಾಯಗೊಳಿಸಿವೆ. ಅವರ ಸಿಬ್ಬಂದಿ ನಾಯಿಗೆ ಇಂಜೆಕ್ಷನ್ ಆಗಿದೆ ಹೋಗಿ ಎಂದು ಕಳುಹಿಸಿಬಿಟ್ರು. ಸ್ನೇಹಿತರ ಮಗನ ಸಹಾಯದಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಬಳಿಕ ಆರ್ಆರ್ ನಗರ ಪೊಲೀಸ್ ಠಾಣೆಗೆ ಹೋಗಿ ಘಟನೆ ಸಂಬಂಧ ದೂರು ನೀಡಿದ್ದೇನೆ ಎಂದು ಅವರು ವಿವರಿಸಿದ್ದರು.

ಸಿಬ್ಬಂದಿಯನ್ನ ಮೊದಲ ಆರೋಪಿ, ದರ್ಶನ್ರನ್ನು ಎರಡನೇ ಆರೋಪಿಯನ್ನಾಗಿಸಿ ಪ್ರಕರಣ ದಾಖಲಾಗಿತ್ತು. ದರ್ಶನ್ ಅವರು ಯಾವುದೇ ಕರೆ ಮಾಡಿಲ್ಲ ಮತ್ತು ಭೇಟಿ ಮಾಡಲಿಲ್ಲ. ಯಾರೋ ವ್ಯಕ್ತಿಯೊಬ್ಬರು ಆಸ್ಪತ್ರೆಯ ಖರ್ಚು ಭರಿಸೋದಾಗಿ ತಿಳಿಸಿದ್ದರು. ಅವರು ಯಾರು ಎಂದು ತಿಳಿದು ಬಂದಿಲ್ಲ. ಪೊಲೀಸರು ನಮಗೆ ಉತ್ತಮ ರೀತಿಯಲ್ಲಿ ಪ್ರತಿಕ್ರಿಯಿಸಿದ್ದಾರೆ. ಕೇಸ್ ದಾಖಲಾಗಿದೆ, ತನಿಖೆ ನಡೆಯಲಿ ಎಂದು ಗಾಯಗೊಂಡ ಮಹಿಳೆ ಅಮಿತಾ ತಿಳಿಸಿದ್ದರು. ಈಗ ನೋಟಿಸ್ ನೀಡುವ ಮೂಲಕ ಪೊಲೀಸರು ತನಿಖೆಗೆ ಇಳಿದಿದ್ದಾರೆ.

# ಬೈಕ್‌ಗೆ ಪೊಲೀಸ್ ವಾಹನ ಡಿಕ್ಕಿ: ಇಬ್ಬರಿಗೆ ಗಾಯ-ಮತ್ತೋರ್ವ ಗಂಭೀರ




ಕೋಲಾರ: ಪೊಲೀಸ್ ವಾಹನವೊಂದು ಬೈಕ್ಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರಿಗೆ ಗಾಯಗೊಂಡಿದ್ದು ಮತ್ತೋರ್ವನ ಸ್ಥಿತಿ ಗಂಭೀರವಾಗಿರುವ ಘಟನೆ ಕೋಲಾರದ ಬೆತ್ತನಿ ಗೇಟ್ ಬಳಿ ನಡೆದಿದೆ.

ಬೆಂಗಳೂರಿನಿಂದ ಕೋಲಾರದ ಕಡೆಗೆ ತೆರಳುತ್ತಿದ್ದ ಪೊಲೀಸ್ ವಾಹನ ಬೈಕ್ಗೆ ಡಿಕ್ಕಿ ಹೊಡೆದಿದೆ. ಕೋಲಾರದ ಬಂಗಾರಪೇಟೆಯಲ್ಲಿಂದು ಮುಖ್ಯಮಂತ್ರಿ ಕಾರ್ಯಕ್ರಮಕ್ಕೆ ತೆರಳುತ್ತಿದ್ದ ಪೊಲೀಸ್ ಜೀಪ್ ಬೈಕ್ಗೆ ಗುದ್ದಿದೆ. ಗಾಯಾಳುಗಳನ್ನು ಕೋಲಾರ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಕೋಲಾರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಬೆಳಗಾವಿ ಜಿಎ ಪಪೂ ಮಹಾವಿದ್ಯಾಲಯದಲ್ಲಿ ಮಕ್ಕಳ ಉಚಿತ ಆರೋಗ್ಯ ತಪಾಸಣೆ ಯಶಸ್ವಿ

# ಪೌಷ್ಟಿಕ ಆಹಾರ ಸೇವನೆ-ಉತ್ತಮ ಆರೋಗ್ಯಕ್ಕೆ ಗಮನಹರಿಸಲು ವಿ.ಡಿ.ಪಾಟೀಲ ಸಲಹೆ

ಬೆಳಗಾವಿ: ವಿದ್ಯಾರ್ಥಿಗಳು ಉತ್ತಮ ಜೀವನಶೈಲಿ ಅಳವಡಿಸಿಕೊಂಡು ಆರೋಗ್ಯದತ್ತ ಗರಿಷ್ಠ ಗಮನಹರಿಸಬೇಕು ಎಂದು ಕೆ.ಎಲ್ ಇ ಹಿರಿಯ ಚಿಕ್ಕ-ಮಕ್ಕಳ ತಜ್ಞ ಡಾ. ವಿ.ಡಿ.ಪಾಟೀಲ ಹೇಳಿದರು.

ಶನಿವಾರ ನಗರದ ಕೆಎಲ್ಇ ಸಂಸ್ಥೆಯ ಜಿಎ ಪದವಿ ಪೂರ್ವ ಸಂಯುಕ್ತ ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾಗಿದ್ದ ಮಕ್ಕಳ ಉಚಿತ ಆರೋಗ್ಯ ತಪಾಸಣೆ ಮತ್ತು ಜಾಗ್ರತಿ ಶಿಬಿರದಲ್ಲಿ ಅವರು ಮಾತನಾಡಿದರು.

ಎಲ್ಲರಲ್ಲೂ ಕೆಲವು ಸಣ್ಣಪುಟ್ಟ ಆರೋಗ್ಯ ಸಮಸ್ಯೆ ಇರುತ್ತದೆ. ಅಂತಹ ಸಮಸ್ಯೆಗಳು ಕಂಡು ಬಂದ ತಕ್ಷಣ ಪೋಷಕರು ತಮ್ಮ ಮಕ್ಕಳನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿ ಸೂಕ್ತ ಚಿಕಿತ್ಸೆ ನೀಡಬೇಕು. ಆರೋಗ್ಯಪಾಲನೆಯಲ್ಲಿ ಪೋಷಕರು ಕಾಳಜಿ ವಹಿಸಬೇಕು ಎಂದು ಕಿವಿಮಾತು ಹೇಳಿದರು.

ಮಕ್ಕಳು ದೇಶದ ಶಕ್ತಿ ಯಾಗಿದ್ದಾರೆ. ಆದ್ದರಿಂದ ಅವರು ಸದೃಢರಾಗಿರಬೇಕು. ಪೌಷ್ಟಿಕ ಆಹಾರ ಸೇವಿಸಬೇಕು. ಇಂದು ಮಕ್ಕಳ ರೂಢಿಯೇ ಬದಲಾಗಿದೆ. ತಂದೆ-ತಾಯಿ ಅವರ ಜೀವನ ಶೈಲಿಯನ್ನು ಉತ್ತಮವಾಗಿಸಬೇಕು. ಮಕ್ಕಳು ಪ್ರತಿ ದಿನ ಒಂದು ಗಂಟೆ ಮೊಬೈಲ್, ಟಿವಿ ನೋಡಬಹುದು. ಆದರೆ, ಅದಕ್ಕಿಂತ ಹೆಚ್ಚು ಸಮಯ ಅವುಗಳನ್ನು ನೋಡುವುದು ಆರೋಗ್ಯ ದೃಷ್ಟಿಯಿಂದ ಒಳಿತಲ್ಲ. ಊಟ-ವ್ಯಾಯಾಮ ಉತ್ತಮವಾಗಿರಬೇಕು. ಪ್ರತಿ ವರ್ಷ ಇಂತಹ ಕಾರ್ಯಕ್ರಮ ನಡೆಯುತ್ತಿದೆ. ಎಲ್ಲಾ ರೀತಿಯ




ಅರೋಗ್ಯ ತಪಾಸಣೆ ನಡೆಸಲಾಗುತ್ತದೆ. ಮಕ್ಕಳು ಇಂತಹ ಶಿಬಿರದ ಸದುಪಯೋಗ ಪಡೆದು ಕೊಂಡು ಆರೋಗ್ಯವಂತರಾಗ ಬೇಕು ಎಂದು ಕಿವಿಮಾತು ಹೇಳಿದರು.

ಆಜೀವ ಸದಸ್ಯೆ ಮತ್ತು ಕೆಎಲ್ ಇ ಸಂಸ್ಥೆಯ ಸಂಯೋಜಕಿ ಡಾ. ಪ್ರೀತಿ ದೊಡ್ಡವಾಡ ಅವರು ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಅವರು ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ನಡೆಸಿ ದಂತ ಆರೋಗ್ಯ ಇಂದಿನ ಅತ್ಯಂತ ಅಗತ್ಯವಾಗಿದೆ. ಬದಲಾಗಿರುವ ಜೀವನ ಕ್ರಮದಿಂದ ದಂತ ಕೆಡುತ್ತಿದ್ದು ದಂತ ಆರೋಗ್ಯಕ್ಕೆ ಗರಿಷ್ಠ ಗಮನ ನೀಡಬೇಕು ಎಂದರು.

ಆಜೀವ ಸದಸ್ಯ ಡಾ. ಶಿವಯೋಗಿ ಹೂಗಾರ ಮಾತನಾಡಿ, ಇಂತಹ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿದಾಗ ವಿದ್ಯಾರ್ಥಿಗಳು ಅದರ ಪೂರ್ಣ ಲಾಭ ಪಡೆದುಕೊಳ್ಳಬೇಕು. ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯಲ್ಲಿ ಆರೋಗ್ಯ ಅತ್ಯಂತ ಮಹತ್ವಪೂರ್ಣ ಪಾತ್ರ ವಹಿಸುತ್ತದೆ. ಹೀಗಾಗಿ ಇಂದಿನ ದಿನಮಾನಗಳಲ್ಲಿ ಶೈಕ್ಷಣಿಕ ಚಟುವಟಿಕೆ ಜತೆಗೆ ಆರೋಗ್ಯದತ್ತ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಅವರು ತಿಳಿಸಿದರು.

ನೇತ್ರತಜ್ಞ ಡಾ. ಶಿವಾನಂದ ಬುಬನಾಳೆ ಅವರು ಮಕ್ಕಳ ನೇತ್ರ ತಪಾಸಣೆ ನಡೆಸಿ ಮಾತನಾಡಿ, ಪ್ರತಿಯೊಬ್ಬರಿಗೂ ಆರೋಗ್ಯದೊಂದಿಗೆ ನೇತ್ರ ತಪಾಸಣೆ ಕಾಲಕಾಲಕ್ಕೆ ಅತ್ಯಗತ್ಯವಾಗಿದೆ. ನೇತ್ರದೋಷ ಕಂಡು ಬಂದಲ್ಲಿ ಪೋಷಕರು ತಕ್ಷಣ ತಜ್ಞ ವೈದ್ಯರಲ್ಲಿಗೆ ಕರೆದುಕೊಂಡು ಹೋಗಿ ತಪಾಸಣೆ ನಡೆಸಬೇಕು ಎಂದು ತಿಳಿಸಿದರು. 2000 ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಶಿಬಿರದ ಪ್ರಯೋಜನ ಪಡೆದರು.

ಆಜೀವ ಸದಸ್ಯ ಮಹಾದೇವ ಬಳಿಗಾರ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಉಪ ಪ್ರಾಚಾರ್ಯ ಸಿದ್ಧರಾಮ ಗದಗ ವಂದಿಸಿದರು. ಸುನಿಲ ಹಲವಾಯಿ ನಿರೂಪಿಸಿದರು

# ಎಲೆಮರೆ ಕಾಯಿಯಂತಿರುವ ಸಾಧಕರನ್ನು ಗುರುತಿಸಿ: ಸಚಿವ ಸತೀಶ್ ಜಾರಕಿಹೊಳಿ

## ಸುದ್ದಿ ಬಿತ್ತರಿಸುವ ಭರದಲ್ಲಿ ಸಾರ ಮರೆಯದಿರಿ ಎಂದ ಸಚಿವ ಸತೀಶ್



ಬೆಳಗಾವಿ: ಸಮಾಜದಲ್ಲಿನ ಸಮಸ್ಯೆಗಳತ್ತ ಬೆಳಕು ಚೆಲ್ಲುವ ಕೆಲಸವಾಗಬೇಕು. ಮುಖ್ಯವಾಗಿ ಪತ್ರಿಕಾ ರಂಗದಲ್ಲಿ ಎಲೆಮರೆ ಕಾಯಿಯಂತಿರುವ ಸಾಧಕರನ್ನು ಗುರುತಿಸುವ ಕಾರ್ಯವಾಗಬೇಕೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅಭಿಪ್ರಾಯಪಟ್ಟರು.

ನಗರದ ಕನ್ನಡ ಭವನದಲ್ಲಿ ಬೆಳಗಾವಿ ವಿವಿಧ ಸಂಘಟನೆಯಿಂದ ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರ ಕೆ. ವಿ. ಪ್ರಭಾಕರ್, ಗಿರೀಶ ಕೋಟೆ ಅವರಿಗೆ ಹಮ್ಮಿಕೊಂಡಿದ್ದ ಅಭಿಮಾನದ ಅಭಿವಂದನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬೆರಳ ತುದಿಯಲ್ಲಿ ಮಾಹಿತಿ ಲಭ್ಯವಾಗಿಸುವ ತಂತ್ರಜ್ಞಾನದ ಯುಗದಲ್ಲಿ ಸುದ್ದಿ ಬಿತ್ತರಿಸುವ ಭರದಲ್ಲಿ ಸುದ್ದಿಯ ಸಾರ ಪತ್ರಕರ್ತರು ಮರೆಯುವಂತಾಗಬಾರದು ಎಂದು ಹೇಳಿದರು.

**ತೆರೆ ಹಿಂದಿರುವ ಸುದ್ದಿಗಳಿಗೆ ಮಹತ್ವ ನೀಡಿ:** ಜಗತ್ತಿನಲ್ಲಿ ಪತ್ರಿಕಾ ರಂಗ ತನ್ನದೇ ಛಾಪು ಮೂಡಿಸಿದ್ದು, ಸಂವಿಧಾನದ 4ನೇ ಅಂಗವಾಗಿ ಗುರುತಿಸಿಕೊಂಡಿದೆ. ಇಂತಹ ಮಾಧ್ಯಮಗಳು ಇಂದು ತೆರೆ ಮುಂದಿರುವ ಜನಗಳ ಬಗ್ಗೆ ಬಿತ್ತರಿಸದೇ ತೆರೆ ಹಿಂದೆ ನಿತ್ಯ ಶ್ರಮಿಸುವ ಕಾಯಕ ಜೀವಗಳತ್ತ ಸುದ್ದಿ ಮಾಡಬೇಕಿದೆ.

ಉದಾಹರಣೆಗೆ ರೈತರು, ಬಡತನದಲ್ಲಿ ಹುಟ್ಟಿ ನಿತ್ಯ ಶ್ರಮಿಸುವ ಜೀವಗಳ ಬಗ್ಗೆ ಹಾಗೂ ಕಡಿಮೆ ಹಣದಲ್ಲಿ ಉತ್ತಮ ತಿಂಡಿ ನೀಡುವ ಹೊಟೇಲಗಳತ್ತ ಸುದ್ದಿ ಬಿತ್ತರಿಸಿ ಅಂಥಹ ಜನರ ಗುರುತಿಸುವ ಕೆಲಸ ಮಾಧ್ಯಮಗಳ ಮಾಡಬೇಕಿದೆ. ಮಾಧ್ಯಮಗಳು ಸತ್ಯಕ್ಕೆ ಹತ್ತಿರವಾಗುವ ಸುದ್ದಿ ಹಾಗೂ ಉಹಾಪೋಹಗಳತ್ತ ಗಮನ ಹರಿಸದೇ ಸತ್ಯದ ಕಡೆ ಗಮನ ಹರಿಸಿ ಸುದ್ದಿಗಳನ್ನು ಬಿತ್ತರಿಸಿದರೆ ರಾಜ್ಯ ಹಾಗೂ ದೇಶದಲ್ಲಿ ಉತ್ತಮ ಸಮಾಜ ನಿರ್ಮಿಸಲು ಸಾಧ್ಯವಾಗುತ್ತದೆ ಎಂದರು.

**ಪತ್ರಕರ್ತರ ಭವನ ನಿರ್ಮಾಣಕ್ಕೆ ಸ್ಥಳ ಗುರುತಿಸಿ:** ಬೆಳಗಾವಿಯಲ್ಲಿ ಪತ್ರಕರ್ತರ ಭವನ ನಿರ್ಮಾಣಕ್ಕೆ ಪತ್ರಕರ್ತರ ವಿವಿಧ ಸಂಘ ಸಂಸ್ಥೆಗಳಿಂದ ಅನೇಕ ಭಾರಿ ಮನವಿ ಮಾಡಲಾಗಿದೆ.

ಪತ್ರಕರ್ತರ ಸಂಘಟನೆಗಳು ಸ್ಥಳ ಗುರುತಿಸಿದರೆ ಭವನ ನಿರ್ಮಾಣಕ್ಕೆ ಬೇಕಾಗಿರುವ ಅನುದಾನವನ್ನು ನಮ್ಮ ಲೋಕೋಪಯೋಗಿ ಇಲಾಖೆ ವತಿಯಿಂದ ನೀಡಲಾಗುವುದು ಎಂದು ಸಚಿವ ಸತೀಶ್ ಜಾರಕಿಹೊಳಿ ಭರವಸೆ ನೀಡಿದರು.

ಪತ್ರಿಕಾ ಭವನ ನಿರ್ಮಾಣಕ್ಕೆ ಈಗಾಗಲೇ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸಭೆ ಮಾಡಲಾಗಿದ್ದು, ಎರಡು, ಮೂರು ಸ್ಥಳದಲ್ಲಿ ಜಾಗ ಇದೆ. ಒಂದು ಕಡೆ ಸ್ಥಳ ಗುರುತಿಸಿದರೆ ಸರ್ಕಾರದಿಂದ ಪತ್ರಿಕಾ ಭವನ ನಿರ್ಮಾಣಕ್ಕೆ ಶೀಘ್ರವೇ ಕ್ರಮ ಕೈಗೊಳ್ಳಗುವುದು ಎಂದು ತಿಳಿಸಿದರು.

**ಸತ್ಯ ಸುದ್ದಿ ಜನರಿಗೆ ಮುಟ್ಟುವ ಕೆಲಸವಾಗಲಿ:** ಇಂದು ಮಾಧ್ಯಮ ಹೇಗಾಗಿದೆ ಎಂದರೆ ರಾತ್ರಿ 12 ಗಂಟೆಗೆ ಟಿವಿ ನೋಡಿ ನಮ್ಮ ಹೆಸರು ಏನು ಬಂದಿಲ್ಲವೆಂದು ರಾಜಕಾರಣಿಗಳು ನಿಟ್ಟಿಸಿರು ಬಿಟ್ಟು ಮಲಗುವ ಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಪತ್ರಿಕಾ ಮಿತ್ರರು ನಿತ್ಯ ನಡೆಯುವ ಸತ್ಯ ಸಂಗತಿ ಹಾಗೂ ಸಮಾಜದ ಅಂಕುಡೊಂಕುಗಳ ತಿದ್ದುವ ಕೆಲಸ ಮಾಡಬೇಕೆದೆ ಎಂದರು.

**ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮಾತನಾಡಿ,** ಇಂದು ಪತ್ರಿಕಾ ವಿತರಕರಿಗೆ ಸೈಕಲ್ ವಿತರಣೆ ಮಾಡಿರುವುದು ಬಹಳ ಖುಷಿ ತಂದಿದೆ. ನಾನು ಕುಡಾ ರೈತಾಪಿ ಕುಟುಂಬದಲ್ಲಿ ಜನಸಿದ ಮಗಳು. ಸರ್ಕಾರಿ ಕೆಂಪು ಬಸ್ನಲ್ಲಿ ಹತ್ತಿ ಸಂಚಾರ ಮಾಡಿದವಳು. ರಾಜಕಾರಣ ಇಷ್ಟವಿದೇ ಎಂದು ರಾಜಕಾರಣ ಕ್ಷೇತ್ರದಲ್ಲಿ ಬಂದಿರುವೆ ಆದರೆ ನಾನು ಎಂದಿಗೂ ಲಕ್ಷ್ಮಣ ಗೇರೆಯನ್ನು ದಾಟುವುದಿಲ್ಲ ಎಂದು ಸವಾಲು ಎಸೆದರು.

**ನಿಜವಾದ ಸುದ್ದಿ ಬಿತ್ತರಿಸಿ:** ಇಂದು ಮಾಧ್ಯಮಗಳು ಹೇಗಾಗಿವೆ ಎಂದರೆ ನಮ್ಮ ಹಾಗೂ ಸತೀಶ್ ಅಣ್ಣಾ ಜಾರಕಿಹೊಳಿ ನಡುವೆ ಎಲ್ಲವು ಸರಿಯಿಲ್ಲ ಎಂಬತೆ ಬಿತ್ತರಿಸುತ್ತಿವೆ. ಇಂದು ಒಂದೇ ವೇದಿಕೆಯಲ್ಲಿ ನಾನು ಮತ್ತು ಸತೀಶ್ ಅಣ್ಣಾ ಅವರು ಬಂದಿದ್ದೇವೆ. ಸತ್ಯಕ್ಕೆ ದೂರವಾದ ಸುದ್ದಿಗಳನ್ನು ಬಿತ್ತರಿಸುವ ಬದಲು ಸತ್ಯದ ಸುದ್ದಿಗಳನ್ನು ಬಿತ್ತರಿಸಿದರೆ ಉತ್ತಮ ಎಂದು ತಿಳಿ ಹೇಳಿದರು.

**ಉಡುಪಿ ಪತ್ರಕರ್ತರು ಬಹಳ ಜಾಣರೆಂದ ಸಚಿವೆ:** ರಾಜ್ಯದ ವಿವಿಧೆಡೆ ಹಾಗೂ ಬೆಳಗಾವಿ ಪತ್ರಿಕಾ ಮಿತ್ರರನ್ನು ನೋಡಿದ್ದೇನೆ. ಆದರೆ ಸರ್ಕಾರದ ಯೋಜನೆಗಳನ್ನು ಯಾವ ರೀತಿ ಬಳಕೆ ಮಾಡಬೇಕು. ಯಾವಾಗಲೂ ಸತ್ಯ ಸುದ್ದಿಗಳನ್ನು ಬಿತ್ತರಿಸಿ ಜನರ ಮನಸ್ಸಿಗೆ ಹತ್ತಿರವಾಗಿ ಜಾಣರಾಗುತ್ತಿದ್ದಾರೆ. ಅದೇ ರೀತಿ ಬೆಳಗಾವಿಯಲ್ಲಿ ನೋಡಿದರೆ "ಬರಿ ಬೆಳಗಾವಿ ಬೆಂಕಿ" "ಕೈ ಪಾಳೆಯದಲ್ಲಿ ಸುನಾಮಿ" ಎಂಬಂತೆ ಸುದ್ದಿಗಳನ್ನು ಬಿತ್ತರಿಸಿ ಜನರ ಮನಸ್ಸಿಗೆ ಘಾಸಿ ಮಾಡುವ ಸ್ಥಿತಿ ನಿರ್ಮಾಣವಾಗುತ್ತಿದೆ. ಆದ್ದರಿಂದ ಇಲ್ಲಿರುವ ಮಾಧ್ಯಮ ಮಿತ್ರರು ಸತ್ಯ ನಡೆದಿರುವ ಕುರಿತು ಬಿತ್ತರಿಸಿ ಉತ್ತಮ ಸಮಾಜ ನಿರ್ಮಿಸಲು ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಗದಗದ ಡಂಬಳ ತೋಂಟದಾರ್ಯ ಮಠದ ಶ್ರೀ ಡಾ. ಸಿದ್ದರಾಮ ಸ್ವಾಮೀಜಿ ಮಾತನಾಡಿ, ಪತ್ರಿಕೆಗಳು ಬೆಳೆಯಲು ಪರಿಶ್ರಮ ಮುಖ್ಯ. ಉದಾಹರಣೆಗೆ ಪತ್ರಿಕಾ ವಿತರಕರಾಗಿ ಇಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ. ವಿ ಪ್ರಭಾಕರ್ ನೇಕರಾಗಿದ್ದಾರೆ. ಹೀಗೆ ಸದಾ ಪರಿಶ್ರಮವಿದ್ದಾಗ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದರು.

ಇದೇ ವೇಳೆ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ. ವಿ ಪ್ರಭಾಕರ್ ಮತ್ತು ಮುಖ್ಯಮಂತ್ರಿಗಳ ಮಾಧ್ಯಮ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಗಿರೀಶ್ ಕೋಟೆ, ಕೆ.ಪಿ. ಪುಟ್ಟಸ್ವಾಮಯ್ಯ, ಕೆ ಎಸ್ ನಾಗರಾಜ್, ದೀಪಕ ಕರಾಡೆ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾಧ್ಯಮ ಸಲಹೆಗಾರ ಎಂ.ಕೆ. ಹೆಗಡೆ, ಸಚಿವ ಸತೀಶ್ ಜಾರಕಿಹೊಳಿಯವರ ಮಾಧ್ಯಮ ಸಲಹೆಗಾರ ಮುನ್ನಾ ಬಾಗವಾನ, ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿ ಈಗ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ಹಾಗೂ ಇತ್ತೀಚೆಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದ ಹಿರಿಯ ಪತ್ರಕರ್ತರನ್ನೂ ಗಣ್ಯರು ಸನ್ಮಾನಿಸಿದರು.

ಅಲ್ಲದೇ ಪತ್ರಿಕೆ ಏಳ್ಗೆಗೆ ಹಗಲಿರುಳು ಶ್ರಮಿಸುತ್ತಾ ಎಲೆಮರೆ ಕಾಯಿಯಂತಿರುವ ಐದು ಹಿರಿಯ ಪತ್ರಿಕಾ ವಿತರಕರಿಗೆ ಹೊಸ ಸೈಕಲ್ ವಿತರಿಸಲಾಯಿತು.

ಈ ಸಮಾರಂಭದಲ್ಲಿ ಎಸ್ಪಿ ಡಾ. ಭೀಮಾಶಂಕರ ಗುಳೇದ, ಶಾಸಕ ರಾಜು ಸೇಠ್, ವಾರ್ತಾ ಇಲಾಖೆ ಉಪನಿರ್ದೇಶಕ ಗುರುನಾಥ ಕಡಬೂರ, ಮಹಾನಗರ ಪಾಲಿಕೆ ಕಮಿಷ್ನರ್ ಅಶೋಕ ದುಡಗುಂಟಿ, ಸರ್ವೋತ್ತಮ ಜಾರಕಿಹೊಳಿ ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಅಧ್ಯಕ್ಷರುಗಳು ಜಿಲ್ಲೆಯ ಪತ್ರಕರ್ತ ಹಾಗೂ ಟಿವಿ ಮಾಧ್ಯಮದ ವರದಿಗಾರರು ಉಪಸ್ಥಿತರಿದ್ದರು.



## ಜೂಜು ಅಡ್ಡೆ ಮೇಲೆ ಪೋಲಿಸರ ದಾಳಿ: 150ಕ್ಕೂ ಹೆಚ್ಚು ಜನ ವಶಕ್ಕೆ

ಬೆಂಗಳೂರು: ಅಕ್ರಮವಾಗಿ ನಡೆಯುತ್ತಿದ್ದ ಇಸ್ಪೀಟ್ ಅಡ್ಡೆ ಮೇಲೆ ಏಕಾಏಕಿ ದಾಳಿ ನಡೆಸಿದ ನಗರ ಪಶ್ಚಿಮ ವಿಭಾಗದ ಪೊಲೀಸರು 150ಕ್ಕೂ ಜನರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಬಸವೇಶ್ವರ ನಗರದಲ್ಲಿರುವ ಅಡಿಗ ರಮ್ಮಿ ಕ್ಲಬ್ನಲ್ಲಿ ಅಕ್ರಮ ಚಟುವಟಿಕೆ ಕುರಿತು ಖಚಿತ ಮಾಹಿತಿ ಮೇರೆಗೆ ಬಸವೇಶ್ವರ ನಗರ ಹಾಗೂ ಗೋವಿಂದರಾಜ ನಗರ ಪೊಲೀಸರು ದಾಳಿ ನಡೆಸಿದ್ದಾರೆ.

ಕ್ಲಬ್ನಲ್ಲಿ 150ಕ್ಕೂ ಹೆಚ್ಚು ಮಂದಿ ಇಸ್ಪೀಟ್ ದಂಧೆಯಲ್ಲಿ ತೊಡಗಿಸಿಕೊಂಡಿದ್ದರು. ಎಲ್ಲರನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಲಾಗಿದೆ. ದಾಳಿ ಲಕ್ಷಾಂತರ ರೂಪಾಯಿ ಹಣ ವಶಕ್ಕೆ ಪಡೆದುಕೊಳ್ಳಲಾಗಿದೆ. ಅಶೋಕ್ ಅಡಿಗ ಎಂಬುವರಿಗೆ ಸೇರಿದ ಕ್ಲಬ್ ಇದಾಗಿದೆ.

## ‘ಸಿದ್ದಗಂಗಾ ಸೇವಾ ರತ್ನ’ ಪ್ರಶಸ್ತಿಗೆ ಪ್ರಭಾ ಭಾಜನ



ಬೆಳಗಾವಿ: ಶಿಕ್ಷಕಿ ಪ್ರಭಾ ಬಾಳಕೃಷ್ಣ ಬೋರಗಾಂವಕರಅವರ ಸಾಹಿತ್ಯ ಸೇವೆ ಪರಿಗಣಿಸಿ ಅವರಿಗೆ "ಸಿದ್ದಗಂಗಾ ಸೇವಾ ರತ್ನ" ಪ್ರಶಸ್ತಿ ನೀಡಲಾಗಿದೆ.

ಕವಯಿತ್ರಿ , ಲೇಖಕಿ, ಅನುವಾದಕರಾಗಿತಮ್ಮ ಸಾಹಿತ್ಯಕೃಷಿಯನ್ನು ಮುಂದುವರೆಸಿಕೊಂಡು ಹೋಗುತ್ತಿದ್ದು, ಅವರ ಸಾಹಿತ್ಯ ಸೇವೆ ಗುರುತಿಸಿ ಮಂಡ್ಯದಕರುನಾಡು ಸೇವಾ ಸಂಸ್ಥೆಯು " ಸಿದ್ದಗಂಗಾ ಸೇವಾ ರತ್ನ ಪ್ರಶಸ್ತಿ" ಗೆ ಆಯ್ಕೆ ಮಾಡಿದೆ.

ತುಮಕೂರಿನಗುರುಕುಲ ಕಲಾ ಪ್ರತಿಷ್ಠಾನವೂ " ಗುರುಕುಲ ವಿದ್ಯಾರತ್ನ " ಪ್ರಶಸ್ತಿಗೆ ಆಯ್ಕೆ ಮಾಡಿದ್ದುಇವರು ಸಾಹಿತ್ಯಕ್ಷೇತ್ರದಲ್ಲಿ ಮಾಡಿದ ಅನುಪಮ ಸೇವೆಗೆ ಸಾಕ್ಷಿಯಾಗಿವೆ.

ಇದೇ ತಿಂಗಳು ಮೈಸೂರಿನಲ್ಲಿ ಹಾಗೂ ಹಂಪಿಯಲ್ಲಿ ನಡೆಯುವ ಅಖಿಲ ಭಾರತ 3ನೇ ಗುರುಕುಲ ಕಲಾ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದುಎಂದು ಪ್ರತಿಷ್ಠಾನವು ತಿಳಿಸಿದೆ. ಈಗಾಗಲೇ ಅನೇಕ ಕೃತಿಗಳನ್ನು ರಚಿಸಿ ಹಲವಾರು ಪ್ರಶಸ್ತಿಗಳನ್ನು ತಮ್ಮ ಮುಡಿಗೇರಿಸಿಕೊಂಡಿದ್ದಾರೆ. ಈ ಸಂದರ್ಭದಲ್ಲಿಅವರನ್ನು ಪ್ರತಿಷ್ಠಾನ ಕುಟುಂಬದವರು, ಸ್ನೇಹಿತರು ಅಭಿನಂದಿಸಿದ್ದಾರೆ.

## ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಸಬ್‌ಇನ್ಸ್‌ಪೆಕ್ಟರ್: ಧರ್ಮದೇಟು ನೀಡಿದ ಸಾರ್ವಜನಿಕರು



ರಾಜಸ್ಥಾನ: 4 ವರ್ಷದ ಬಾಲಕಿ ಮೇಲೆ ಪೊಲೀಸ್ ಸಬ್‌ಇನ್ಸ್ಪೆಕ್ಟರ್ ಲೈಂಗಿಕ ದೌರ್ಜನ್ಯ ಎಸಗಿರುವ ಆಘಾತಕಾರಿ ಘಟನೆ ರಾಜಸ್ಥಾನದ ದೌಸಾದ ಲಾಲ್ಸೋಟ್ ನಗರದಲ್ಲಿ ನಡೆದಿದೆ ಎಂದು ವರದಿಯಾಗಿದೆ.

ಪ್ರಕರಣ ಸಂಬಂಧ ಆರೋಪಿ ಭೂಪೇಂದ್ರ ಸಿಂಗ್ನನ್ನು ವಶಕ್ಕೆ ಪಡೆದಿರುವ ಪೊಲೀಸರು ಸೇವೆಯಿಂದ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ.

ನೋವಿನಿಂದ ಬಳಲುತ್ತಿದ್ದ ಬಾಲಕಿಯನ್ನು ಆಸ್ಪತ್ರೆಗೆ ದಾಖಲಿಸಿದಾಗ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವುದು ಬೆಳಕಿಗೆ ಬಂದಿದೆ. ಇನ್ನೂ ಸಬ್‌ಇನ್ಸ್ಪೆಕ್ಟರ್ ಯಾರು ಇಲ್ಲದ ವೇಳೆ ಕೃತ್ಯ ಎಸಗಿದ್ದಾನೆ ಎಂದು ಎಎಸ್ಪಿ ರಾಮಚಂದ್ರ ಸಿಂಗ್ ನೆಹ್ರಾ ತಿಳಿಸಿದ್ದಾರೆ ಎಂದು ವರದಿಯಾಗಿದೆ.

ಇನ್ನು ವಿಷಯ ತಿಳಿಯುತ್ತಿದ್ದಂತೆ ಜನ ಪೊಲೀಸ್ ಠಾಣೆ ಮುಂದೆ ಜಮಾಯಿಸಿದ್ದಾರೆ. ಪೊಲೀಸರ ವಿರುದ್ದ ಘೋಷಣೆಗಳನ್ನ ಕೂಗಿದ್ದಾರೆ. ಆರೋಪಿ ಪೊಲೀಸ್‌ಗೂ ಧರ್ಮದೇಟು ಕೊಟ್ಟಿದ್ದಾರೆ.

ಎಎಸ್‌ಐ ಭೂಪೇಂದ್ರ ಸಿಂಗ್ ವಿರುದ್ಧ ಈಗಾಗಲೇ ಹಲವು ಆರೋಪಗಳು ಕೇಳಿ ಬಂದಿದ್ದು, ಈತನ ವಿರುದ್ಧ ಗೆಹ್ಲೋಟ್ ಸರ್ಕಾರ ಯಾವುದೇ ಕ್ರಮವನ್ನು ಜರುಗಿಸದೆ ಬಿಟ್ಟಿದ್ದಕ್ಕೆ ಇಂದು ಈ ರೀತಿಯಾಗಿದೆ ಆಕ್ರೋಶ ವ್ಯಕ್ತವಾಗಿದೆ. ಆತನನ್ನು ಕೂಡಲೇ ಸೇವೆಯಿಂದ ವಜಾ ಮಾಡಿ ಸಂತ್ರಸ್ತರ ಕುಟುಂಬಕ್ಕೆ ನೆರವಾಗಬೇಕು ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ಕಾಂಗ್ರೆಸ್ ವಿರುದ್ಧ ಹರಿಹಾಯ್ದಿದೆ.

## ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ಬೆಳಗಾವಿಯಲ್ಲಿಯೇ ಪ್ರಥಮ ಮೊಣಕೈ ಬದಲಾವಣೆ ಶಸ್ತ್ರಚಿಕಿತ್ಸೆ

ಬೆಳಗಾವಿ: ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಹೆಸರಾಂತ ಎಲುಬು ಕೀಲು ತಜ್ಞರಾದ ಡಾ. ಜಗದೀಶ ಸುರಣ್ಣವರ ಅವರಿಂದ ಚಿಕ್ಕೋಡಿ ತಾಲೂಕಿನ 49 ವರ್ಷದ ವ್ಯಕ್ತಿಗೆ ಮೊಣಕೈ ಬದಲಾವಣೆಯನ್ನು ಯಶಸ್ವಿಯಾಗಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದಡಾ. ಜಗದೀಶ ಸುರಣ್ಣವರ ಅವರು “ಬಿದ್ದ ಗಾಯದ ಕಾರಣವಾಗಿ ಸತತ 4 ವರ್ಷಗಳಿಂದ ಬೆಳಗಾವಿ, ಮಿರಜ ಹಾಗೂ ಕೊಲ್ಹಾಪುರದ ಪ್ರತಿಷ್ಠಿತ ಆಸ್ಪತ್ರೆಗಳಲ್ಲಿ ಈ ವ್ಯಕ್ತಿಚಿಕಿತ್ಸೆ ಪಡೆದಿದ್ದರೂ ಸಹ ಗುಣಮುಖ ನಾಗಿರಲಿಲ್ಲ. ಕಳೆದವಾರವಷ್ಟೇ ನಮ್ಮಲ್ಲಿ ಬಂದು ತೋರಿಸಿದ್ದರು.

ಕ್ಷ-ಕಿರಣ ಹಾಗೂ ಎಮ್‌ಆರ್ ಐ ನ ಮೂಲಕ ವ್ಯಕ್ತಿಯ ಮೊಣಕೈನ ನಿಜಸ್ಥಿತಿಯು ತಿಳಿದುಕೊಳ್ಳಲಾಗಿ ಶಸ್ತ್ರಚಿಕಿತ್ಸೆಯ ಯೋಜನೆಯನ್ನು ಹಾಕಿಕೊಳ್ಳಲಾಯಿತು.

ಅದರಂತೆ ರೋಗಿಯನ್ನೂ ಸಹ ಮಾನಸಿಕವಾಗಿ ಸಿದ್ದಗೊಳಿಸಿ ಬೆಳಗಾವಿಯಲ್ಲಿಯೇ ಪ್ರಪ್ರಥಮವೆಂಬಂತೆ ಕಾಳಜಿ ಪೂರ್ವಕವಾಗಿ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ಮಾಡಲಾಯಿತು”ಎಂದು ಮಾತನಾಡಿದರು.



ಎಲುಬು ಕೀಲು ಶಸ್ತ್ರಚಿಕಿತ್ಸಜ್ಞ ಡಾ. ಜಗದೀಶ ಸುರಣ್ಣವರ, ಅರವಳಿಕೆ ತಜ್ಞೆಡಾ. ರೀಮಾಕೌರ ಅವರ ತಂಡ ಕಾರ್ಯದಲ್ಲಿ ಆಸ್ಪತ್ರೆಯ ಎಲುಬುಕೀಲು ವಿಭಾಗದ ಮುಖ್ಯಸ್ತರಾದ ಡಾ. ಬಿ ಬಿ ಪುಟ್ಟಿ ಇವರ ಮೇಲ್ವಿಚಾರಣೆಯಲ್ಲಿ ಸಫಲವಾಗಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ಎಲುಬು ಕೀಲು ವಿಭಾಗದ ಮುಖ್ಯಸ್ಥರು ಹಾಗೂ ಇನ್ನುಳಿದ ವೈದ್ಯರು ಸಫಲವಾಗಿ ಶಸ್ತ್ರಚಿಕಿತ್ಸೆ ಮಾಡಿದ ವೈದ್ಯರಿಗೆ ಶುಭಾಶಯಕೋರಿದರು.

ಈ ಸಂದರ್ಭದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು, ಯುಎಸ್‌ಎಮ್ ಕೆ ಎಲ್ ಇ ಯ ನಿರ್ದೇಶಕರಾದ ಡಾ. ಹೆಚ್ ಬಿ ರಾಜಶೇಖರ ಅವರು ವೈದ್ಯರ ತಂಡಕ್ಕೆ ಅಭಿನಂದಿಸಿದ್ದಾರೆ. ಕೆ ಎಲ್ ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆ ಅವರು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ.

## ಹಾಸನಾಂಬೆ ದೇವಾಲಯದಲ್ಲಿ ಕರೆಂಟ್ ಶಾಕ್

### 17 ಭಕ್ತಾಧಿಗಳು ಅಸ್ವಸ್ಥ, ಆಸ್ಪತ್ರೆಗೆ ದಾಖಲು



ಹಾಸನ: ಹಾಸನಾಂಬೆ ದೇವಾಲಯದಲ್ಲಿ ಕರೆಂಟ್ ಶಾಕ್‌ನಿಂದ ಧಿಡೀರ್ ನೂಕು ನುಗ್ಗಲಾಗಿದೆ.

ಈ ವೇಳೆ ಧರ್ಮ ದರ್ಶನ ಸರತಿ ಸಾಲಿನ ಬಳಿ ನಿಂತಿದ್ದ ಮಹಿಳೆಯರು ಎದ್ದು ಬಿದ್ದು ಓಡಲೆತ್ನಿಸಿದ್ದಾರೆ. ಓಡುವ ಬರದಲ್ಲಿ ಒಬ್ಬರ ಮೇಲೊಬ್ಬರು ಬಿದ್ದಿದ್ದಾರೆ.

ಜಗತ್ ಪ್ರಸಿದ್ಧ ಹಾಸನಾಂಬೆಯನ್ನು ಕಾಣಲು ದಿನಾಲು ಲಕ್ಷಾಂತರ ಜನರು ಆಗಮಿಸುತ್ತಿದ್ದಾರೆ. ಅದರಂತೆಯೆ ಇಂದು ಕೂಡ ಸಾಕಷ್ಟು ಜನರು ದೇವರನ್ನು ಕಾಣಲು ಸರತಿ ಸಾಲಿನಲ್ಲಿ ನಿಂತಿದ್ದಾರೆ. ಈ ವೇಳೆ ಕರೆಂಟ್ ಶಾಕ್ ಹೊಡೆಯುತ್ತಿದೆ ಮಾತು ಕೇಳಿ ಜನರು ಕಾಲ್ಕಿತ್ತಿದ್ದಾರೆ. ಈ ವೇಳೆ ಕಾಲ್ತುಳಿತ ಸಂಭವಿಸಿದೆ.

ಇನ್ನು ಕಾಲ್ತುಳಿತಕ್ಕೆ ಒಳಗಾದ ಕೆಲವರನ್ನು ಸ್ಥಳೀಯರು ಹೊರಗೆಳೆದ್ದಾರೆ. ಭಕ್ತರನ್ನು ಈ ವೇಳೆ ಭಯಬೀತರಾಗಿದ್ದಲ್ಲದೆ, ಹಲವರಿಗೆ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

## ಲೋಕವನ್ನೇ ಪ್ರಸಾದಮಯವನ್ನಾಗಿ ನೋಡಿದವರು ಶರಣರು: ಕಮಲಾ ಗಣಾಚಾರಿ

ಬೆಳಗಾವಿ: ಶರಣ ಸಾಹಿತ್ಯದ ಅನುಭಾವ ದರ್ಶನ ಪ್ರಸ್ತುತತೆಗೆ ಬಹುಮೌಲಿಕವೆನಿಸಿದೆ. ಆತ್ಮ ಪರಮಾತ್ಮರ ಅವಿನಾಭಾವ ಸಂಬಂಧವನ್ನು ಅತ್ಯಂತ ತಾರ್ಕಿಕವಾಗಿ ಉಣಬಡಿಸಿದವರು ಶರಣರು. ಲೋಕವನ್ನೇ ಪ್ರಸಾದಮಯವನ್ನಾಗಿ ನೋಡಿ ಜೀವನದ ಮೌಲ್ಯವನ್ನು ಹೆಚ್ಚಿಸಿದ ಹೆಗ್ಗಳಿಕೆ ಶರಣರದೆಂದು ಶಿಕ್ಷಕಿ ಕಮಲಾ ಗಣಾಚಾರಿ ಹೇಳಿದರು.

ಅವರು ಶಿವಬಸವ ನಗರದ ಲಿಂಗಾಯತ ಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಆಯೋಜಿಸಿದ್ದ ದೀಪಾವಳಿ ನಿಮಿತ್ತ ಅನುಭಾವ ಚಿಂತನೆಯ ಗೋಷ್ಠಿಯಲ್ಲಿ ‘ಅಂಗಬೋಗ ಅನರ್ಪಿತ, ಲಿಂಗಬೋಗ ಪ್ರಸಾದ’ ವಿಷಯ ಕುರಿತು ಮಾತನಾಡಿದರು. ಶರಣರು ಗುರು-ಲಿಂಗ-ಜಂಗಮಕ್ಕೆ ತನು-ಮನ-ಧನಗಳನ್ನು ಅರ್ಪಿಸಬೇಕೆಂಬುವುದರ ಮೂಲಕ ಜೀವನ ಸಿದ್ಧಾಂತಗಳಿಗೆ ವ್ಯಾಖ್ಯಾನವನ್ನು ಹಾಕಿಕೊಟ್ಟರು. ನಾವು ಅನುಭವಿಸುವ ಪ್ರತಿಯೊಂದು ವಸ್ತು ಆಹಾರ ಮೊದಲ್ಗೊಂಡು ಪ್ರಕೃತಿಯ ಚರಾಚರದಲ್ಲಿಯೂ ಪ್ರಸಾದ ಸಿದ್ಧಾಂತವು ಹಾಸುಹೊಕ್ಕಾಗಿದೆ ಎಂಬುದೇ ಶರಣರ ಆಲೋಚನಾಕ್ರಮ. ನಾನು ನನ್ನದು ಎಂಬಂತಹ ಅಹಂಗಳನ್ನು ತೊರೆದು ಬಯಸಿ ಬಂದ ಅಂಗಬೋಗವನ್ನು ಲಿಂಗಕ್ಕೆ ಅರ್ಪಿಸುವ ಮೂಲಕ ಜೀವನ್ಮುಕ್ತರಾಗಬೇಕೆಂಬ ಸಂದೇಶವನ್ನು ಶರಣರ ನೀಡಿದರೆಂದು ಹೇಳಿದರು.



ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದ ಕಾರಂಜಿಮಠದ ಪೂಜ್ಯ ಗುರುಸಿದ್ಧ ಮಹಾಸ್ವಾಮೀಜಿಯವರು ಆಶೀರ್ವಚನ ನೀಡುತ್ತ, ಇಂದಿನ ಒತ್ತಡದ ಬದುಕಿನಲ್ಲಿ ಶರಣರ ಚಿಂತನೆಗಳು ದಿವ್ಯ ಔಷಧಿಗಳಾಗಿವೆ. ಜೀವ ಮತ್ತು ಪರಮಾತ್ಮರ ದರ್ಶನವನ್ನು ಅತ್ಯಂತ ಸರಳವಾಗಿ ನಿರೂಪಿಸುವ ಅವರ ವಚನಗಳನ್ನು ವಿಶ್ಲೇಷಿಸಿ ಅರಿಯಬೇಕಾಗಿದೆ. ನಾವು ಜೀವನದ ಬಹುಭಾಗವನ್ನು ಭೋಗದ ಆಶೆಗಳಿಗಾಗಿಯೇ ಕಳೆಯುತ್ತೇವೆ ಆದರೆ ಅವು ಯಾವವು ಚಿರಂತನವಾದ ಸುಖವನ್ನು ನೀಡಲಾರವು, ಬದುಕಿನ ಆತ್ಮ ಚಿಂತನೆಗೆ ಶರಣರ ಹಾಕಿಕೊಟ್ಟ ದಿವ್ಯಪಥದಲ್ಲಿ ಮುನ್ನಡೆಯಲು ಮನಸ್ಸನ್ನು ಗಟ್ಟಿಗೊಳಿಸಬೇಕೆಂದು ನುಡಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಮಹಾಸಭೆಯ ಜಿಲ್ಲಾ ಘಟಕದ ಅಧ್ಯಕ್ಷೆ ಶ್ರೀಮತಿ ರತ್ನಪ್ರಭಾ ಬೆಲ್ಲದ ಅವರು ಮಾತನಾಡಿ, ಮಹಾಸಭೆ ತನ್ನ ರಚನಾತ್ಮಕ ಚಟುವಟಿಕೆಗಳಿಂದ ಅನೇಕ ಪ್ರತಿಭಾಸಂಪನ್ನರಿಗೆ ವೇದಿಕೆಯನ್ನು ಕಲ್ಪಿಸಿಕೊಡುತ್ತಿದೆ. ಎಲ್ಲಿಯೋ ಒಂದಷ್ಟು ಸಮಯವನ್ನು ವ್ಯರ್ಥವಾಗಿ ಕಳೆಯುವುದರ ಮೂಲಕ ನಮ್ಮ ಜೀವನದ ಬಹುಭಾಗ ಕಳೆದಿದ್ದೇವೆ. ಆಧ್ಯಾತ್ಮಿಕ ಸುಖದಿಂದ ದೂರಸರಿಯುತ್ತಿದ್ದೇವೆ. ಶರಣ ಸತ್ಸಂಗದಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಮನಸ್ಸನ್ನು ಹಗುರಗೊಳಿಸಲು ಸಾಧ್ಯವೆಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಹಾಸಭೆಯ ಭೂದಾನಿಗಳಾದ ಲಿಂಗೈಕ್ಯ ಈಶ್ವರಪ್ಪಾ ರೇವಣಸಿದ್ಧಪ್ಪ ಚೊಣ್ಣದ ಹಾಗೂ ಲಿಂಗೈಕ್ಯ ಶ್ರೀಮತಿ ಗೌರಮ್ಮಾ ಜಾವೂರ ಅವರ ನಿಧನಕ್ಕೆ ಕಂಬನಿಗೈದು ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ಬೈಲಹೊಂಗಲದಲ್ಲಿ ಜರುಗಿದ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಮಟ್ಟದ ಎರಡನೇ ಕದಳಿ ಮಹಿಳಾ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದ ಖ್ಯಾತ ಸಾಹಿತಿ ಡಾ.ಗುರುದೇವಿ ಹುಲೆಪ್ಪನವರಮಠ, ವೀರಶೈವವಾಣಿ ಪತ್ರಿಕೆಯ ಸಂಪಾದಕರಾದ ಡಾ.ಮಹೇಶ ಗುರನಗೌಡರ ಅವರನ್ನು ಸತ್ಕರಿಸಲಾಯಿತು.


# ಭಗವತ್‌ಗೀತೆ ಅಭಿಯಾನದ ಹಿಂದೆ 4 ಉದ್ದೇಶ: ಸ್ವರ್ಣವಲ್ಲೀ ಸ್ವಾಮೀಜಿ

ಬೆಳಗಾವಿ: ವ್ಯಕ್ತಿತ್ವ ಪುನರುತ್ಥಾನ, ನೈತಿಕತೆ ಪುನರುತ್ಥಾನ, ಸಾಮಾಜಿಕ. ಸಾಮರಸ್ಯ ಹಾಗೂ ರಾಷ್ಟ್ರೀಯ ಭಾವೈಕ್ಯತೆ – ಈ 4 ಉದ್ದೇಶವಿಟ್ಟುಕೊಂಡು ಕಳೆದ 17 ವರ್ಷಗಳಿಂದ ನಿರಂತರವಾಗಿ ಭಗವದ್ಗೀತೆ ಅಭಿಯಾನ ನಡೆಸಿಕೊಂಡು ಬರಲಾಗುತ್ತಿದೆ ಎಂದು ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಗಂಗಾಧರೇಂದ್ರ ಸರಸ್ವತಿ ಸ್ವಾಮಿಗಳು ಹೇಳಿದ್ದಾರೆ.

ಬೆಳಗಾವಿಯಲ್ಲಿ ನವೆಂಬರ್ 21ರಿಂದ ಡಿಸೆಂಬರ್ 23ರ ವರೆಗೆ ನಡೆಯಲಿರುವ ರಾಜ್ಯನಮಟ್ಟದ ಭಗವದ್ಗೀತೆ ಅಭಿಯಾನದ ಹಿನ್ನೆಲೆಯಲ್ಲಿ ಶುಕ್ರವಾರ ನಗರದ ಗುರುದೇವ ರಾನಡೆ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ವಿವಿಧ ಸಮಾಜಗಳ ಪ್ರಮುಖರನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ವೈಜ್ಞಾನಿಕವಾಗಿ ನಾವು ಮುಂದೆ ಹೋಗುತ್ತಿದ್ದೇವೆ. ಆದರೆ ಮಾನಸಿಕ ಆರೋಗ್ಯ ಸಮಸ್ಯೆ ಎದುರಿಸುತ್ತಿದ್ದೇವೆ. ಮಾನಸಿಕ ಒತ್ತಡಗಳಿಂದ ಅನೇಕ ರೋಗಗಳನ್ನು ಅನುಭವಿಸುತ್ತಿದ್ದೇವೆ. ಮಧುಮೇಹ, ಅಧಿಕ ರಕ್ತದೊತ್ತಡ, ಹೃದಯಾಘಾತ ಮೊದಲಾದವು ಹೆಚ್ಚುತ್ತಿವೆ. ಇದಕ್ಕೆಲ್ಲ ಭಗವದ್ಗೀತೆಯಲ್ಲಿ ಪರಿಹಾರವಿದೆ. ಜನರ ಮನಸ್ಥಿತಿ ಸರಿ ಇಲ್ಲದಿದ್ದರೆ ಏನೇ ಮಾಡಿದರೂ ಪ್ರಯೋಜನವಿಲ್ಲ ಎಂದು ಶ್ರೀಗಳು ಹೇಳಿದರು.

ಅಪರಾಧ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಜಾಸ್ತಿಯಾಗುತ್ತಿವೆ. ಅಪರಾಧ ನಡೆದ ನಂತರ ಏನು ಮಾಡಬೇಕು ಎನ್ನುವುದಕ್ಕಿಂತ ಅಪರಾಧ ಮಾಡದೆ ಇರುವಂತೆ ಮಾಡುವುದಕ್ಕಾಗಿ ಭಗವದ್ಗೀತೆ ಅಭಿಯಾನ ಮಾಡಲಾಗುತ್ತಿದೆ.




ಅಪರಾಧದ ಮೂಲವನ್ನೇ ಚಿವುಟಿ ಹಾಕುವುದು ಇದರ ಉದ್ದೇಶ. ಆಸೆ ಮತ್ತು ದ್ವೇಷ ಅಪರಾಧಕ್ಕೆ ಮೂಲ. ಅಪರಾಧ ಪೃವೃತ್ತಿಯ ಮೂಲವನ್ನೇ ತೆಗೆದುಹಾಕಲು ಭಗವದ್ಗೀತೆ ಸಹಕಾರಿಯಾಗಿದೆ ಎಂದು ಅವರು ಹೇಳಿದರು.

ಧರ್ಮದ ಪಂಥಗಳಲ್ಲಿ ಏಕತೆಯನ್ನು ಬೆಸೆಯುವುದು ಸಹ ಭಗವದ್ಗೀತೆಯ ಉದ್ದೇಶ. ಭಗವದ್ಗೀತೆ ಎಲ್ಲರನ್ನೂ ಒಟ್ಟಿಗೆ ತರುತ್ತದೆ. ಮಕ್ಕಳು ಅಡ್ಡ ದಾರಿಗೆ ಹೋಗುವುದನ್ನು ತಡೆಯುತ್ತದೆ. ದೇಶದಲ್ಲಿ ಹೆಚ್ಚುತ್ತಿರುವ ನಕ್ಸಲ್ ಚಟುವಟಿಕೆ ಸೇರಿದಂತೆ ಅನೇಕ ದೇಶವಿರೋಧಿ ಚಟುವಟಿಕೆಗಳನ್ನು ನಿಯಂತ್ರಿಸಬಹುದು.

ಕಳೆದ 17ವರ್ಷದಲ್ಲಿ ಭಗವದ್ಗೀತೆ ಅಭಿಯಾನದಿಂದ ನಮಗೆ ಸಮಾಧಾನಕರ ಫಲಿತಾಂಶ ಸಿಕ್ಕಿದೆ. ಭಗವದ್ಗೀತೆ ಅಭಿಯಾನಕ್ಕೆ ಎಲ್ಲರ ಸಹಕಾರ ಅಗತ್ಯ. ಎಲ್ಲ ಸಮುದಾಯಗಳು ಕೂಡ ಭಾಗವಹಿಸಬೇಕು. ಗಣೇಶೋತ್ಸವದ ರೀತಿಯಲ್ಲಿ ಗೀತಾ ಜಯಂತಿ ಆಚರಣೆಯಾಗಬೇಕು ಎನ್ನುವ ಉದ್ದೇಶವಿಟ್ಟುಕೊಂಡಿದ್ದೇವೆ ಎಂದೂ ಶ್ರೀಗಳು ತಿಳಿಸಿದರು.

ನವೆಂಬರ್ 21ರಂದು ಅಭಿಯಾನದ ಉದ್ಘಾಟನೆ ನಡೆಯಲಿದೆ. ಅಲ್ಲಿಂದ ಡಿಸೆಂಬರ್ 21ರ ವರೆಗೆ ರಾಜ್ಯಾದ್ಯಂತ ಭಗವದ್ಗೀತೆ ಪಠಣ, ಪ್ರವಚನ ಮೊದಲಾದ ಕಾರ್ಯಕ್ರಮಗಳು ನಡೆಯಲಿವೆ.

ಡಿಸೆಂಬರ್ 2 ರಂದು ಬೆಳಗಾವಿಯಲ್ಲಿ ಭಗವದ್ಗೀತೆ ಮತ್ತು ಕಾನೂನು ಕಾರ್ಯಕ್ರಮ ನಡೆಯುವುದು. ಡಿಸೆಂಬರ್ 18ರಂದು ಗೀತಾ ಸಮನ್ವಯ ಎನ್ನುವ ವಿಶೇಷ ಕಾರ್ಯಕ್ರಮ ನಡೆಯಲಿದೆ.

ಡಿಸೆಂಬರ್ 22ರಂದು ಶಾಲಾ ಮಕ್ಕಳಿಗಾಗಿ ಭಗವದ್ಗೀತೆ ಶ್ಲೋಖ ಪಠಣ ಸ್ಪರ್ಧೆ ನಡೆಯುವುದು. ಡಿಸೆಂಬರ್ 23ರಂದು ಮಹಾಸಮರ್ಪಣೆ ನಡೆಯಲಿದೆ ಎಂದು ಸ್ವಾಮಿಗಳು ಹೇಳಿದರು.

ಬೆಳಗಾವಿ ಒಂದು ಪುಣ್ಯ ಭೂಮಿ. ಅನೇಕ ಮಹಾತ್ಮರು ಇಲ್ಲಿಗೆ ಬಂದು ಹೋಗಿದ್ದಾರೆ. ಸ್ವಾಮಿ ವಿವೇಕಾನಂದ, ಮಹಾತ್ಮಾ ಗಾಂಧೀಜಿ, ಗುರುದೇವ ರಾನಡೆ ಸೇರಿದಂತೆ ಹಲವರು ಓಡಾಡಿದ ಪವಿತ್ರ ನೆಲ ಇದು.

ಈ ಭೂಮಿಯಲ್ಲಿ ಭಗವದ್ಗೀತೆ ಅಭಿಯಾನ ಯಶಸ್ವಿಯಾಗಿ ನಡೆಯಬೇಕು. ಆದ್ಯಾತ್ಮ ಜಾಗೃತವಾಗಿರಬೇಕು ಎಂದು ಅವರು ಆಶಿಸಿದರು.

ಗುರುದೇವ ರಾನಡೆ ಮಂದಿರದ ಗೌರವ ಕಾರ್ಯದರ್ಶಿ ಎಂ.ಬಿ.ಜಿರಲಿ, ಮಾಜಿ ಶಾಸಕ ಅನಿಲ ಬೆನಕೆ, ವಿಧಾನ ಪರಿಷತ್ ಮಾಜಿ ಸದಸ್ಯ ಮಹಾಂತೇಶ ಕವಟಗಿಮಠ, ಅಭಿಯಾನದ ಕಾರ್ಯಾಧ್ಯಕ್ಷ ಪರಮೇಶ್ವರ ಹೆಗಡೆ, ಕಾರ್ಯದರ್ಶಿ ಎಂ.ಕೆ.ಹೆಗಡೆ, ಸಂಚಾಲಕ ಸುಬ್ರಹ್ಮಣ್ಯ ಭಟ್, ಉಪಾಧ್ಯಕ್ಷೆ ಪೂರ್ಣಿಮಾ ಹೆಗಡೆ, ವಿವಿಧ ಸಮಿತಿಗಳ ಪ್ರಮುಖರಾದ ರಾಮನಾಥ ನಾಯಕ, ಗಣೇಶ ಹೆಗಡೆ, ಕೃಷ್ಣ ಭಟ್, ವಿನಾಯಕ ಹೆಗಡೆ, ಗೀತಾ ಹೆಗಡೆ, ಸುಧಾ ಹೆಗಡೆ, ವಸುಮತಿ ಹೆಗಡೆ ಮೊದಲಾದವರು ಇದ್ದರು.

ಸಂಪುಟ: 4 ಸಂಚಿಕೆ: 237 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089